

## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಮಾಯೆಯ ಪೊಳವು ಮಹತ್ತೆನಿಸಿರ್ಕು

ನಿಜಗುಣರ ಪರಮಾರ್ಥ ಗೀತೆಯ ಮಾತು. ಮಾಯೆ ಇಲ್ಲದ್ದು ಇದ್ದಂತೆ ತೋರುವುದು. ಈ ಮಾಯೆಯೇ ಮಹತ್ ಆಗುವುದು. ಆ ಮಹತ್ತಿನಲ್ಲಿ ತೋರಿದ್ದು ಅಹಂಕಾರ. ಈ ಅಹಂಕಾರ ಮನಸ್ಸಾಯಿತು. ಈ ಮನಸ್ಸೇ ಎಲ್ಲಕ್ಕೂ ಕಾರಣ. ಮನಸ್ಸಿದ್ದರೆ ಮಾರ್ಗ. ಮನಸ್ಸಿದ್ದರೆ ಎಲ್ಲ ತೋರಿಕೆ. ಅದಿಲ್ಲದಿದ್ದಲ್ಲಿ ಯಾವುದೂ ಇಲ್ಲ. ಆದ್ದರಿಂದ ಮನಸ್ಸನ್ನು ಈ ಬ್ರಹ್ಮಾಂಡದ ಒಡಲು ಎನ್ನಬಹುದು. ಆಕಾಶಾದಿಗಳೆಲ್ಲ ಈ ಮನಸ್ಸಿನಿಂದಲೇ ತೋರುವವು. ಹೀಗೆ ಈ ಮನಸ್ಸು ಈ ಬ್ರಹ್ಮಾಂಡದ ಮೂಲ. ಸಮುದ್ರದಲ್ಲಿ ಹನಿ ನೀರು ಬಗೆ ಬಗೆಯ ಸಣ್ಣ ದೊಡ್ಡ ಗುಳ್ಳೆಗಳಾಗಿ ತೋರುವಂತೆ ಸೀಮಾತೀತನಾದ ನಿನ್ನಲ್ಲಿ ಅಸಂಖ್ಯಾತ ಬ್ರಹ್ಮಾಂಡಗಳು ತೋರಿ ಅಡಗುತ್ತವೆ.

## ದಾಸರ ಪದಗಳ ಗಾಯನ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್.ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಮೇ 30, ಗುರುವಾರ ಸಂಜೆ 7-30ಕ್ಕೆ ಯುವ ಗಾಯಕ ಶ್ರೀ ಸುಹೃತ್ ರಾವ್ ರವರಿಂದ ದಾಸರ ಪದಗಳ ಗಾಯನ ಏರ್ಪಡಿಸಿದ್ದು, ಇವರ ಗಾಯನಕ್ಕೆ ಶ್ರೀ ವಿಘ್ನೇಶ್ ಭಾಗವತ್ ಹಾರ್ಮೋನಿಯಂ ವಾದನದಲ್ಲಿ ಹಾಗೂ ಶ್ರೀ ಕಿಶೋರ್ ಕುಲಕರ್ಣಿ ತಬಲಾ ವಾದನದಲ್ಲಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ.

## ಕೆಂಪೇಗೌಡ ಏರ್ ಪೋರ್ಟ್‌ಗೆ ಬಾಂಬ್ ಬೆದರಿಕೆ ಸಂದೇಶ ಸ್ಥಳಕ್ಕೆ ಬಾಂಬ್ ಸ್ಕ್ವಾಡ್ ದೌಡು!

• **ಉದಯವಾಹಿನಿ, ಬೆಂಗಳೂರು**

ಕೆಂಪೇಗೌಡ ಏರ್ ಪೋರ್ಟ್ ನ ಸಿಬ್ಬಂದಿ ಕಟ್ಟಡದಲ್ಲಿ ಬಾಂಬ್ ಬೆದರಿಕೆ ಬಂದಿದ್ದು, ಸ್ಥಳಕ್ಕೆ ಬಾಂಬ್ ಸ್ಕ್ವಾಡ್, ಶ್ವಾನದಳ ದೌಡಾಯಿಸಿ ತಪಾಸಣೆ ನಡೆಸಿದೆ.ಏರ್ ಪೋರ್ಟ್‌ನ ಸಿಬ್ಬಂದಿ ಕಚೇರಿಯನ್ನು ಸ್ಫೋಟಿಸುವುದಾಗಿ ಏರ್ ಪೋರ್ಟ್ ಸಿಬ್ಬಂದಿ ಕಟ್ಟಡದ ಬಾತ್ ರೂಮ್ ಕನ್ನಡಿ ಮೇಲೆ ಬರೆಯಲಾಗಿತ್ತು. ಇದರಿಂದ ಆತಂಕಗೊಂಡ ಸಿಬ್ಬಂದಿಗಳು ಕೂಡಲೇ ಬಾಂಬ್ ಸ್ಕ್ವಾಡ್, ಶ್ವಾನದಳಕ್ಕೆ ಕರೆ ಮಾಡಿದ್ದಾರೆ. ಸ್ಥಳಕ್ಕೆ ಆಗಮಿಸಿದ ಬಾಂಬ್ ಸ್ಕ್ವಾಡ್, ಶ್ವಾನದಳ ತಪಾಸಣೆ ನಡೆಸಿದ್ದು, ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಿಲ್ಲ. ನಂತರ ಇದು ಹುಸಿಬಾಂಬ್ ಸಂದೇಶ ಎಂದು ತಿಳಿದು ಬಂದಿದೆ.ಏರ್ ಪೋರ್ಟ್ ಸಿಬ್ಬಂದಿಯಿಂದಲೇ ಬೆದರಿಕೆ ಹಾಕಿರುವ ಸಂಶಯ ವ್ಯಕ್ತವಾಗಿದ್ದು, ಏರ್ ಪೋರ್ಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಸ್ಪೂನ್‌ನಿಂದ ಸತೀಶ್ ಹಲ್ಲೆ: ಎ.ಗಣೇಶ್ ಗಂಭೀರ ಆರೋಪ

• **ಉದಯವಾಹಿನಿ, ಬೆಂಗಳೂರು**

ಗೋವಾ ಟ್ರಿಪ್‌ಗೆ ತೆರಳಿದ್ದಂತ ವೇಳೆಯಲ್ಲಿ ಸ್ಯಾಂಡಲ್ ವುಡ್ ನಿರ್ಮಾಪಕರ ನಡುವೆ ಗಲಾಟೆಯಾಗಿದೆ. ಈ ಗಲಾಟೆಯಲ್ಲಿ ಸ್ಪೂನ್ ನಿಂದ ನಿರ್ಮಾಪಕ ಸತೀಶ್ ಸಿಕ್ಕ ಸಿಕ್ಕವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ. ಸ್ವಲ್ಪ ಕೆಳಗೆ ಬಿದ್ದಿದ್ದರೇ ನನ್ನ ಕಣ್ಣೇ ಹೋಗುತ್ತಿತ್ತು ಅಂತ ಎ.ಗಣೇಶ್ ಗಂಭೀರ ಆರೋಪ ಮಾಡಿದ್ದಾರೆ. ನಿರ್ಮಾಪಕ ಎ.ಗಣೇಶ್, ರಥಾವರ ಮಂಜುನಾಥ್ ಮೇಲೆ ಸತೀಶ್ ಆರ್ಯ ಎಂಬುವರು ಹಲ್ಲೆ ನಡೆಸಿದ್ದಾರೆ. ಗಲಾಟೆ ವೇಳೆ ಗಣೇಶ್ ಮೂಗು ಹರಿದಿದ್ದು, 15 ಸ್ಟಿಚ್ ಹಾಕಲಾಗಿದೆ. ಸ್ಪೂನ್ ನಿಂದ ಸತೀಶ್ ಚುಚ್ಚಿದ್ದರಿಂದ ತನ್ನ ಕಣ್ಣಿಗೆ ಗಾಯವಾಗಿದೆ. ನನ್ನ ಮೇಲೆ ಅಲ್ಲದೇ ಮಂಜುನಾಥ್ ಮೇಲೆ ಹಲ್ಲೆ ಮಾಡಿದ್ದಾರೆ. ಅವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಅವರ ತಲೆಗೆ ಪೆಟ್ಟು ಬಿದ್ದಿದೆ ಅಂತ ಹೇಳಿದ್ದಾರೆ. ಇನ್ನೂ ಗೋವಾ ಗಲಾಟೆ ಸಂಬಂಧ ನಾಳೆ ಫಿಲ್ಮ್ ಚೇಂಬರ್‌ನಲ್ಲಿ ಮೀಟಿಂಗ್ ಕರೆಯಲಾಗಿದೆ. ಈ ಘಟನೆ ಸಂಬಂಧ ಗೋವಾ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲಿದ್ದೇನೆ ಎಂದು ನಿರ್ಮಾಪಕ ಎ ಗಣೇಶ್ ಮಾಹಿತಿ ಹಂಚಿಕೊಂಡಿದ್ದಾರೆ.

## ಒಲೈಕೆ ರಾಜಕಾರಣಕ್ಕಾಗಿ ಪೊಲೀಸರ ಕೈ ಕಟ್ಟಿಹಾಕಿದ ಕಾಂಗ್ರೆಸ್ ಸರ್ಕಾರ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಪೊಲೀಸರಿಗೆ ರಕ್ಷಣೆ ಇಲ್ಲದಂತಾಗಿದೆ ಎಂದು ರಾಜ್ಯ ಬಿಜೆಪಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದೆ. ಚನ್ನಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣ, ರೈಲಿನಲ್ಲಿ ಪೊಲೀಸ್ ಸಿಬ್ಬಂದಿಗೆ ಚಾಕು ಇರಿತ, ಅಕ್ರಮ ಮರಳು ಮಾಫಿಯಾಗೆ ಪೊಲಿಸ್ ಕಾನ್ಸ್‌ಟೇಬಲ್ ಬಲಿ, ಪೊಲೀಸ್ ಮೇಲೆ ಮಚ್ಚು ಬೀಸಿದ ಕಳ್ಳ, ಸಂಚಾರಿ ಪೊಲೀಸ್ ಪೇದೆ ಮೇಲೆ ಕಾರು ಚಾಲಕನಿಂದ ಹಲ್ಲೆ ಪ್ರಕರಣ ಸೇರಿದಂತೆ ಹಲವು ಪ್ರಕರಣಗಳನ್ನು ಪ್ರಸ್ತಾಪಿಸಿ ಟ್ವೀಟ್ ಮಾಡಿರುವ ರಾಜ್ಯ ಬಿಜೆಪಿ ಘಟಕ ಸರ್ಕಾರದ ವಿರುದ್ಧ ಕಿಡಿಕಾರಿದೆ. ಓಲೈಕೆ ರಾಜಕಾರಣಕ್ಕಾಗಿ ಕಾಂಗ್ರೆಸ್‌ಸರ್ಕಾರ ಪೊಲೀಸರ ಕೈ ಕಟ್ಟಿಹಾಕಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಆರಕ್ಷಕರಿಗೆ ರಕ್ಷಣೆ ಎಂಬುದು ಗಗನಕುಸುಮವಾಗಿದೆ. ಮತಾಂಧರು ಪೊಲೀಸರನ್ನು ಹಾಗೂ ಪೊಲೀಸ್ ಠಾಣೆಯನ್ನು ಗುರಿಯಾಗಿಸಿಕೊಂಡು ನಡೆಸುತ್ತಿರುವ ಹಲ್ಲೆಗಳಿಗೆ ಮಿತಿಯೇ ಇಲ್ಲದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ.

## ವೀರ ಸಾವರ್ಕರ್ ಸೇತುವೆ ನಾಮಫಲಕಕ್ಕೆ ಮಸಿ ಬಳಿದ ಪ್ರಕರಣ; ವಿಜಯೇಂದ್ರ ಕಿಡಿ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನ ಯಲಹಂಕದ ವೀರ ಸಾವರ್ಕರ್ ಮೇಲ್ಸೇತುವೆ ನಾಮಫಲಕಕ್ಕೆ ಭಾವಚಿತ್ರಕ್ಕೆ ಎನ್‌ಎಸ್‌ಯುಐ ಕಾರ್ಯಕರ್ತರು ಮಸಿ ಬಳಿದ ಪ್ರಕರಣವನ್ನು ತೀವ್ರವಾಗಿ ಖಂಡಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಒಬ್ಬ ರಾಷ್ಟ್ರಭಕ್ತನನ್ನು ಅಪಮಾನಿಸಲು ಮತ್ತೊಬ್ಬ ರಾಷ್ಟ್ರಭಕ್ತನ ಭಾವಚಿತ್ರವನ್ನು ಗುರಾಣಿಯಂತೆ ಬಳಸಿಕೊಂಡು ಯಲಹಂಕದ ವೀರ್ ಸಾವರ್ಕರ್ ಸೇತುವೆಯ ನಾಮಫಲಕಕ್ಕೆ ಎನ್.ಎಸ್.ಯು.ಐ ಕಿಡಿಗೇಡಿಗಳು ಮಸಿಬಳಿದು ಅಪಮಾನ ಮಾಡಿ ವಿಕೃತಿ ಮೆರೆದಿರುವ ಘಟನೆ ಅತ್ಯಂತ ಖಂಡನೀಯ. ರಾಷ್ಟ್ರ ಭಕ್ತರನ್ನು ಅಪಮಾನಿಸುವ ದೇಶ ವಿದ್ರೋಹಿಗಳನ್ನು ರಕ್ಷಿಸುವ ಕಾಂಗ್ರೆಸ್‌ಸಂಸ್ಕೃತಿಗೆ ಈ ಘಟನೆ ಕನ್ನಡಿ ಹಿಡಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್‌ಸರ್ಕಾರದ ವಿರುದ್ಧ ಎದ್ದಿರುವ ಜನಾಕ್ರೋಶವನ್ನು ಮರೆಮಾಚಿಕೊಳ್ಳುವ ಉದ್ದೇಶದಿಂದ ಕೆಲ ಕಿಡಿಗೇಡಿ ಯುವಕರನ್ನು ಈ ರೀತಿ ಸ್ವಾತಂತ್ರ್ಯ ಹೋರಾಟಗಾರರನ್ನು ಅವಮಾನಿಸಲು ಛೂ ಬಿಟ್ಟಿರುವುದು ಈ ನಾಡಿನ ದುರ್ದೈವವಾಗಿದೆ. ಸಾರ್ವಕರ್ ಅವರನ್ನು ಅಪಮಾನಿಸುವ ಸಂದರ್ಭದಲ್ಲಿ ಭಗತ್ ಸಿಂಗ್ ಅವರ ಭಾವಚಿತ್ರ ಪ್ರದರ್ಶಿಸಿರುವ ಕಿಡಿಗೇಡಿಗಳು ಇಬ್ಬರೂ ರಾಷ್ಟ್ರಭಕ್ತರನ್ನು ಏಕಕಾಲದಲ್ಲಿ ಅಪಮಾನಿಸಿದ್ದಾರೆ. ಈ ಕೂಡಲೇ ವೀರ ಸಾವರ್ಕರ್ ಅವರನ್ನು ಅಪಮಾನಿಸಿರುವ ಎಲ್ಲರನ್ನು ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ನೌಕರರ ವರ್ಗಾವಣೆಗೆ ಒಪ್ಪಿಗೆ, ಷರತ್ತುಗಳು

■ ರಾಜ್ಯ ಸರ್ಕಾರಿ ನೌಕರರ ವರ್ಗಾವಣೆ ಆರಂಭ ■ ಆರೋಗ್ಯ ಇಲಾಖೆಯಲ್ಲಿ ವಿವಿಧ ಸಿಬ್ಬಂದಿಗಳ ವರ್ಗಾವಣೆ


• **ಉದಯವಾಹಿನಿ, ಬೆಂಗಳೂರು**

ಲೋಕಸಭೆ ಚುನಾವಣೆ 2024ರ ನೀತಿ ಸಂಹಿತೆ ಕರ್ನಾಟಕದಲ್ಲಿ ಸ್ವಲ್ಪ ಸಡಿಲಗೊಳ್ಳುತ್ತಿದ್ದಂತೆಯೆ ರಾಜ್ಯ ಸರ್ಕಾರ ಸರ್ಕಾರಿ ನೌಕರರ ವರ್ಗಾವಣೆ ಆರಂಭಿಸಿದೆ. ಆರೋಗ್ಯ ಇಲಾಖೆಯಲ್ಲಿ ವಿವಿಧ ಸಿಬ್ಬಂದಿಗಳ ವರ್ಗಾವಣೆಗೆ ಒಪ್ಪಿಗೆ ನೀಡಿದ್ದು, ಷರತ್ತುಗಳನ್ನು ಸಹ ಹಾಕಲಾಗಿದೆ.

ಈ ಕುರಿತು ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಬೆಂಗಳೂರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರಿಗೆ ಪತ್ರವನ್ನು ಬರೆದಿದ್ದಾರೆ. ಈ ಪತ್ರ 2024-25ನೇ ಸಾಲಿನ ವರ್ಗಾವಣೆಯನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಕಾಯ್ದೆಯಂತೆ ವರ್ಗಾವಣೆಗೆ ಅರ್ಜಿ ಆಹ್ವಾನಿಸಿ ಮಾರ್ಗಸೂಚಿಗಳ ಮೂಲಕ ಸಮಾಲೋಚನೆ ವರ್ಗಾವಣೆಗಾಗಿ ಅಧಿಸೂಚನೆ ಹೊರಡಿಸಲು ಅನುಮತಿ ನೀಡುವ ಬಗ್ಗೆ ಎಂಬ ವಿಷಯ ಒಳಗೊಂಡಿದೆ. ವರ್ಗಾವಣೆ ಅಧಿಸೂಚನೆಯನ್ನು 10/6/2024ರಂದು ಹೊರಡಿಸಲಾಗುತ್ತದೆ. 15 ದಿನ ಅರ್ಜಿಗಳನ್ನು ಸಲ್ಲಿಕೆ ಮಾಡಲು ಅವಕಾಶವಿದೆ.

ಅಂತಿಮ ವರ್ಗಾವಣೆ ಪಟ್ಟಿಯಂತೆ ವೃಂದವಾರು ಸಮಾಲೋಚನೆ ಪ್ರಾರಂಭಿಸುವ ದಿನಾಂಕ 18/7/2024. ವರ್ಗಾವಣೆಯನ್ನು 31/7/2024ರಂದು ಮುಕ್ತಾಯಗೊಳಿಸಬೇಕು ಎಂದು ಪತ್ರದಲ್ಲಿ ವಿವರಿಸಲಾಗಿದೆ. 2024-25 ನೇ ಸಾಲಿನ ವರ್ಗಾವಣೆ ಪ್ರಕ್ರಿಯೆಯನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಕಾಯ್ದೆ 2011, 2013 ಮತ್ತು 2017ರಂತೆ ಕಾಲ ಕಾಲಕ್ಕೆ ಆದ ತಿದ್ದುಪಡಿಗಳ ಅನ್ವಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಅಧಿಕಾರಿ/ ಸಿಬ್ಬಂದಿಗಳ ಸಮಾಲೋಚನೆ ವರ್ಗಾವಣೆ ಪ್ರಕ್ರಿಯೆಯನ್ನು ಪ್ರತಿ ವರ್ಷ ಏಪ್ರಿಲ್/ ಮೇ ತಿಂಗಳಿನಲ್ಲಿ ಕೈಗೊಳ್ಳಬೇಕಾಗಿರುತ್ತದೆ. ಆದರೆ 2024ರ ಲೋಕಸಭಾ ಚುನಾವಣೆ ಪ್ರಕ್ರಿಯೆಯ ಕಾರಣ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ವರ್ಗಾವಣೆ ಪ್ರಕ್ರಿಯೆಗಳು ಇಲಾಖೆಯಲ್ಲಿ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ.

**ಅರ್ಜಿ ಆಹ್ವಾನಿಸಿ ಮಾರ್ಗಸೂಚಿ**



**ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ ಹಾಗೂ ಸರ್ವ ವೃಂದಗಳ ಸಂಘ, ಆರೋಗ್ಯ ಇಲಾಖೆಯ ಎಲ್ಲಾ ಸಂಘದ ಪದಾಧಿಕಾರಿಗಳು ವರ್ಗಾವಣೆ ಪ್ರಕ್ರಿಯೆ ಪ್ರಾರಂಭಿಸಲು ಒತ್ತಾಯಿಸುತ್ತಿರುತ್ತಾರೆ.**

2020ನೇ ಸಾಲಿನಲ್ಲಿ ಕೋವಿಡ್-19 ರೋಗ 2020, 2021, 2022 ಮತ್ತು 2023 ಈ ಎಲ್ಲಾ ವರ್ಷಗಳಲ್ಲಿ ಸಮಾಲೋಚನೆ ವರ್ಗಾವಣೆ ಪ್ರಕ್ರಿಯೆಗಳು ನಡೆದಿರುವುದಿಲ್ಲ.

**ಸರ್ಕಾರದ ಆದೇಶ ದಿನಾಂಕ 29/05/2021ರನ್ವಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ 19 ಜಿಲ್ಲಾ ಆಸ್ಪತ್ರೆ/ ಜಿಲ್ಲಾ ಮಟ್ಟದ ಆಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಿಗೆ ಕ್ರಮವಾಗಿ ತಲಾ 6 ಮತ್ತು 4ರಂತೆ ತುರ್ತುಚಿಕಿತ್ಸಾ ವೈದ್ಯಾಧಿಕಾರಿಗಳೆಂದು ಮರುಪದ ನಾಮೀಕರಿಸಿ ಹಂಚಿಕೆ ಮಾಡಿ ಆದೇಶಿಸಲಾಗಿದೆ. 2021ರಲ್ಲಿ ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳೆಂದು ಮರು ಪದನಾಮೀಕರಣಗೊಂಡಿರುವುದರಿಂದ ವರ್ಗಾವಣೆ ಕಾಯ್ದೆಯಲ್ಲಿ ಈ ಹುದ್ದೆಗಳು ಉಲ್ಲೇಖಗೊಂಡಿರುವುದಿಲ್ಲ. ಪ್ರಸ್ತುತ ಖಾಲಿ ಇರುವ ಈ ಹುದ್ದೆಗಳಿಗೆ ಕೋರಿಕೆ ವರ್ಗಾವಣೆಗಿಂತ ಮೊದಲು (ಶೇಕಡಾ 15% ರಷ್ಟು ವರ್ಗಾವಣೆಯಿಂದ ಇದನ್ನು ಹೊರತುಪಡಿಸಿ) ಸಮಾಲೋಚನೆ ನಡೆಸಲು ಅನುಮತಿ ನೀಡಲು ಕೋರಿದೆ.**

ಈ ಹಿನ್ನೆಲೆಯಲ್ಲಿ ಇಲಾಖೆಯ ಎಲ್ಲಾ ವೃಂದದ ಅಧಿಕಾರಿಗಳು ಸಮಾಲೋಚನೆ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳುವಂತೆ ಒತ್ತಾಯಿಸುತ್ತಿರುವುದರಿಂದ 2024-25ನೇ ಸಾಲಿನಲ್ಲಿ ಗ್ರೂಪ್ 'ಎ' ಗ್ರೂಪ್ 'ಬಿ', ಗ್ರೂಪ್ 'ಸಿ' ಮತ್ತು ಗ್ರೂಪ್ 'ಡಿ' ವರ್ಗದ ಅಧಿಕಾರಿ/ ನೌಕರರಿಗೆ ವೃಂದ ಬಲದ ಮೀರದಂತೆ ಸಮಾಲೋಚನೆ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳಲು ಮಾರ್ಗಸೂಚಿಗಳನ್ವಯ ಅನುಮತಿ ನೀಡಿದೆ. ವಿವಿಧ ವೃಂದಗಳಲ್ಲಿ ಕೋರಿಕೆ ವರ್ಗಾವಣೆಗಳಿಗೆ ಅರ್ಜಿ ಸಲ್ಲಿಸಿದ ಅಧಿಕಾರಿ/ ನೌಕರರುಗಳನ್ನು ವರ್ಗಾವಣೆಗೆ ಪರಿಗಣಿಸಿ ನಿಯಮಾನುಸಾರ ಸಮಾಲೋಚನೆ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಅನುಮತಿ ನೀಡಲು ಕೋರಿದೆ.

- **■ ವೈದ್ಯರು ಹಾಗೂ ಇತರೇ ಸಿಬ್ಬಂದಿಗಳು ಸಂಬಂಧಪಟ್ಟ ನೇಮಕಾತಿ ನಿಯಮದಲ್ಲಿರುವಂತೆ ನಿಗದಿತ ಅವಧಿಯ ಕಡ್ಡಾಯ ಗ್ರಾಮೀಣ ಸೇವೆಯನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ವೈದ್ಯರು/ ಸಿಬ್ಬಂದಿಯನ್ನು ಗ್ರಾಮೀಣ ಪ್ರದೇಶಕ್ಕೆ ಸಮಾಲೋಚನೆ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಅನುಮತಿ ನೀಡಲು ಕೋರಿದೆ.**
- **■ ತಜ್ಞತೆವಾರು ಗುರುತಿಸಿರುವ ಹುದ್ದೆಗಳಲ್ಲಿ ವೈದ್ಯರುಗಳು ಅವರ ತಜ್ಞತೆಗೆ ಅನುಗುಣವಾಗಿ ಕಾರ್ಯ ನಿರ್ವಹಿಸದೇ ಬೇರೆ ತಜ್ಞತೆ (CMO) ಇತರೆ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದರೆ, ಅಂತಹ ತಜ್ಞ ವೈದ್ಯರುಗಳನ್ನು ಅವರ ತಜ್ಞತೆಗೆ ಅನುಗುಣವಾಗಿ ಖಾಲಿ ಇರುವ ಹುದ್ದೆಗಳಿಗೆ ಸಮಾಲೋಚನೆ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಅನುಮತಿ ನೀಡಲು ಕೋರಿದೆ.**

## ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ಆರೋಪ

• **ಉದಯವಾಹಿನಿ, ಬೆಂಗಳೂರು**

ವಾಲ್ಮೀಕಿ ನಿಗಮದ ಖಾತೆಯಿಂದ ಕೋಟ್ಯಾಂತರ ರೂಪಾಯಿ ಹಣ ವರ್ಗಾವಣೆ ಆಗಿರುವ ಹಿನ್ನೆಲೆಯಲ್ಲಿ ಇದೀಗ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಎನ್ನುವವರು ಬ್ಯಾಂಕ್ ಆಡಳಿತ ಮಂಡಳಿ ವಿರುದ್ಧ ಬೆಂಗಳೂರಿನ ಹೈ ಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

ಹೌದು 187.33 ನಿಗಮದ ಅಕೌಂಟಿಗೆ ವರ್ಗಾವಣೆ ಆಗಿದೆ. ವಾಲ್ಮೀಕಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಎನ್ನುವವರು ಈ ಕುರಿತಂತೆ ದೂರು ನೀಡಿದ್ದಾರೆ. ನಿಗಮದ ಹೆಸರಿನಲ್ಲಿ ವಸಂತನಗರದಲ್ಲಿ ಇರುವ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಖಾತೆ ಇತ್ತು. ಫೆ. 19 ರಂದು ಖಾತೆಯನ್ನು ಎಂಜಿ ರೋಡ್ ಬ್ರಾಂಚ್‌ಗೆ ವರ್ಗಾವಣೆ ಮಾಡಲಾಯಿತು. ಫೆ. 26ರಂದು ನಿಗಮದ ಎಂಡಿ ಲೆಕ್ಕಾಧಿಕಾರಿಗಳು ಸಹಿ ಪಡೆದುಕೊಂಡಿದ್ದಾರೆ.ಬ್ಯಾಂಕ್ ನವರು ನಿಗಮದ ಎಂಡಿ ಲೆಕ್ಕಾಧಿಕಾರಿಗಳು ಸಹಿ ಪಡೆದುಕೊಂಡಿದ್ದಾರೆ. ಬಳಿಕ ಸದರಿ ಖಾತೆಯಿಂದ ಮಾರ್ಚ್ 4ರಂದು 25 ಕೋಟಿ, ಮಾರ್ಚ್ 6ರಂದು 25 ಕೋಟಿ, ಮಾರ್ಚ್ 21 ರಂದು 44 ಕೋಟಿ ಹಣ ವರ್ಗಾವಣೆ ಆಗಿದೆ. ಅಲ್ಲದೆ ಮೇ 21ರಂದು 50 ಕೋಟಿ, ಮೇ 22 ರಂದು 33 ಕೋಟಿ ಹಣ ವರ್ಗಾವಣೆ ಆಗಿದೆ. ನಿಗಮದ ಬ್ಯಾಂಕ್ ಖಾತೆಯಿಂದ ಒಟ್ಟು 187.33 ಕೋಟಿ ಹಣ ವರ್ಗಾವಣೆ ಆಗಿದೆ.



**ಯೂನಿಯನ್ ಬ್ಯಾಂಕಿನ ಎಂಡಿ ಹಾಗೂ ಸಿಇಓ ಮನೆಮೆಕಲೈ, ಕಾರ್ಯನಿರ್ವಾಹಕ ನಿರ್ದೇಶಕ ನಿತೇಶ್ ರಂಜನ್, ರಾಮ ಸುಬ್ರಮಣ್ಯಂ, ಸಂಜಯ್ ರುದ್ರ ಪಂಕಜ್, ಸುಚಿತ ಸೇರಿದಂತೆ ಬ್ಯಾಂಕ್ ಆಡಳಿತ ಮಂಡಳಿಯವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಬ್ಯಾಂಕ್ ಆಡಳಿತ ಮಂಡಳಿ ಬೇಜವಾಬ್ದಾರಿಯಿಂದ ಹಣ ವರ್ಗಾವಣೆಯಾಗಿದೆ. ಪೊಲೀಸರು ಇದೀಗ ತನಿಖೆ ನಡೆಸುತ್ತಿದ್ದಾರೆ. ಹಣ ವರ್ಗಾವಣೆ ಅಕ್ರಮದಲ್ಲಿ ಕೆಲವು ಸರ್ಕಾರಿ ಅಧಿಕಾರಿಗಳು ಭಾಗಿಯಾಗಿದ್ದಾರೆ. ಅಲ್ಲದೇ ರಾಜಕೀಯ ಪ್ರಭಾವಿಗಳು ಕೂಡ ಭಾಗಿಯಾಗಿರುವ ಆರೋಪ ಕೇಳಿ ಬಂದಿದೆ.**

## ಶಾಲಾ ಪ್ರವೇಶಕ್ಕೆ ಡೊನೇಶನ್; ಕಠಿಣ ಕ್ರಮದ ಎಚ್ಚರಿಕೆ

• **ಉದಯವಾಹಿನಿ, ಬೆಂಗಳೂರು**

ಶೈಕ್ಷಣಿಕ ವರ್ಷ ಆರಂಭವಾಗಿದ್ದು, ಅನುದಾನ ರಹಿತ ಅಥವಾ ಅನುದಾನಿತ ಶಾಲೆಗಳಲ್ಲಿ ಮಕ್ಕಳ ಪ್ರವೇಶಕ್ಕೆ ಡೊನೇಶನ್ ಪಡೆಯಲಾಗುತ್ತಿದೆ ಎಂಬ ದೂರುಗಳು ಬರುತ್ತಿವೆ. ಆದ್ದರಿಂದ ಯಾವುದೇ ರೀತಿಯ ಡೊನೇಶನ್ ಪಡೆಯುವಂತಿಲ್ಲ ಎಂದು ಸೂಚನೆ ನೀಡಲಾಗಿದೆ.

ಒಂದು ವೇಳೆ ಕಾನೂನು ಬಾಹಿರವಾಗಿ ಡೊನೇಶನ್ ಪಡೆದಿರುವುದು ಕಂಡುಬಂದರೆ ಅಂತಹ ಶಾಲೆಗಳ ವಿರುದ್ಧ ಕಠಿಣ ಕ್ರಮವನ್ನು ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.ಪ್ರಸಕ್ತ ಶೈಕ್ಷಣಿಕ ಸಾಲಿಗೆ ಈಗಾಗಲೇ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದೆ. ಕೆಲವು ಶಾಲೆಗಳಲ್ಲಿ ಡೊನೇಶನ್ ಪಡೆಯಲಾಗುತ್ತಿದೆ ಎಂದು ಸಾರ್ವಜನಿಕರಿಂದ ದೂರುಗಳು ಸಲ್ಲಿಕೆಯಾಗುತ್ತಿವೆ.

ನಿಯಮಾನುಸಾರ ಸರ್ಕಾರ ನಿಗದಿಪಡಿಸಿದ ಶುಲ್ಕಗಳನ್ನು ಮಾತ್ರ ಪಡೆದುಕೊಂಡು ಪ್ರವೇಶ ಕಲ್ಪಿಸಬೇಕು. ಒಂದು ವೇಳೆ ಕಾನೂನುಬಾಹಿರವಾಗಿ ಡೊನೇಶನ್ ಪಡೆದರೆ ಆರ್.ಟಿ.ಇ. ಕಾಯ್ದೆ ಪ್ರಕಾರ ಅಂತಹ ಶಾಲೆಗಳ ನೋಂದಣಿಯನ್ನು ರದ್ದುಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಜಿಲ್ಲಾಡಳಿತಗಳು ಎಚ್ಚರಿಸಿವೆ.


ಉದಯವಾಹಿನಿ ಚಿತ್ರ

**ಶಾಲೆಗಳಲ್ಲಿ ಮಕ್ಕಳ ಪ್ರವೇಶಕ್ಕೆ ಡೊನೇಶನ್**

ಇದರಿಂದ ಪಾಲಕರು ಸಾರ್ವಜನಿಕರಿಗೆ ಪ್ರವೇಶ ಶುಲ್ಕದ ಬಗ್ಗೆ ಮಾಹಿತಿ ಲಭಿಸುವುದರಿಂದ ಪ್ರವೇಶ ಪ್ರಕ್ರಿಯೆ ಕುರಿತ ಗೊಂದಲವನ್ನು ಪರಿಹರಿಸಬಹುದು.

ಯಾವುದೇ ಶಾಲೆಯು ಡೊನೇಶನ್ ಕೇಳಿದರೆ ಅಥವಾ ಡೊನೇಶನ್ ಪಡೆದುಕೊಂಡರೆ ಕೂಡಲೇ ಜಿಲ್ಲಾಧಿಕಾರಿ ಕಚೇರಿ ಅಥವಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ (ಡಿಡಿಪಿಐ) ಕಚೇರಿಗೆ ಸಾರ್ವಜನಿಕರು ದೂರು ಸಲ್ಲಿಸಬಹುದು.

### ಪ್ರವೇಶ ಶುಲ್ಕ ಮಾಹಿತಿ

**ಪಾಲಕರು ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರತಿಯೊಂದು ಶಾಲೆಯು ತನ್ನ ಸೂಚನಾ ಫಲಕದಲ್ಲಿ ಪ್ರವೇಶ ಶುಲ್ಕ ಕುರಿತು ಸ್ಪಷ್ಟ ಮಾಹಿತಿಯನ್ನು ಪ್ರದರ್ಶಿಸಬೇಕು.**

**ಶಿಕ್ಷಣ ಹಕ್ಕು ಕಾಯ್ದೆ-2009ರ ಸೆಕ್ಷನ್ -2(ಬಿ) ರಂತೆ ಎಲ್ಲಾ ಖಾಸಗಿ ಶಾಲೆಗಳು ತಾವು ಅಧಿಸೂಚಿಸಿದ ಶುಲ್ಕವನ್ನು ತಮ್ಮ ಶಾಲೆಯ ಅಂತರ್ಜಾಲ ತಾಣ, ಶಾಲಾ ನೋಟಿಸ್ ಬೋರ್ಡ್ ಹಾಗೂ ಇಲಾಖಾ ಅಂತರ್ಜಾಲ (ಎಸ್.ಎ.ಟಿ.ಎಸ್)ದಲ್ಲಿ ಪೋಷಕರು ಮತ್ತು ಸಾರ್ವಜನಿಕರಿಗೆ ಲಭ್ಯವಾಗುವಂತೆ ಪ್ರಕಟಿಸಬೇಕಿದೆ.**

## ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಗೆಲುವು ಇವರಿಗೆ?

• **ಉದಯವಾಹಿನಿ, ಬೆಂಗಳೂರು**

ಬಿಜೆಪಿ ನಾಯಕರು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ಗೆಲ್ಲಲೇಬೇಕು ಎಂಬ ಹಠ ಇಟ್ಟುಕೊಂಡು, ಡಾ. ಸಿ.ಎನ್. ಮಂಜುನಾಥ್ ಅವರನ್ನು ಡಿ.ಕೆ. ಸುರೇಶ್ ಅವರ ವಿರುದ್ಧ ಕಣಕ್ಕೆ ಇಳಿಸಿದ್ದರು. ತೀವ್ರ ಜಿದ್ದಾಜಿದ್ದಿನ ಕಣವಾಗಿದ್ದ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಚುನಾವಣೆ ಫಲಿತಾಂಶ ಇನ್ನೇನು ಹೊರ ಬೀಳಲಿದೆ.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ಭಾರತದ ಮೂಲೆ ಮೂಲೆಯಲ್ಲೂ ಸದ್ದನ್ನ ಮಾಡಿತ್ತು.

ಯಾಕಂದ್ರೆ, ಈ ಕ್ಷೇತ್ರದಲ್ಲಿ ಸತತವಾಗಿ ಗೆದ್ದು ಬೀಗುತ್ತಿರುವ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಅವರನ್ನು ಕಟ್ಟಿಹಾಕಲು, ನೇರವಾಗಿ ಬಿಜೆಪಿ ಕೇಂದ್ರ ನಾಯಕರೇ ಸಿದ್ಧತೆ ಮಾಡಿದ್ದರು. ಇದು ಮಾತ್ರವಲ್ಲ ಜೆಡಿಎಸ್ ವರಿಷ್ಠ, ಎಚ್.ಡಿ. ದೇವೇಗೌಡರ ಅಳಿಯ ಡಾ. ಸಿ.ಎನ್. ಮಂಜುನಾಥ್ ಅವರನ್ನೇ ಡಿ.ಕೆ. ಸುರೇಶ್ ಅವರ ವಿರುದ್ಧ ಕಣಕ್ಕೆ ಇಳಿಸಿದ್ದರು. ಜಯದೇವ ಹೃದ್ರೋಗ ಆಸ್ಪತ್ರೆಯ ಮುಖ್ಯಸ್ಥರಾಗಿದ್ದ ಡಾ. ಮಂಜುನಾಥ್ ಅವರು ನಿವೃತ್ತಿ ಪಡೆದು ರಾಜಕೀಯಕ್ಕೆ ಬಂದಿದ್ದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ, ಕಾಂಗ್ರೆಸ್ VS ಬಿಜೆಪಿ ನೇರವಾಗಿ ಹಣಾಹಣಿ ನಡೆಸಿವೆ. ಅತ್ತ ಒಂದು ಕಡೆ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಅವರು ಸತತ 4ನೇ ಗೆಲುವಿನ ನಿರೀಕ್ಷೆ ಇಟ್ಟುಕೊಂಡಿದ್ದರೆ, ಮತ್ತೊಂದ್ಕಡೆ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಈ ಕ್ಷೇತ್ರದಲ್ಲಿ ಹಿಡಿತ ಸಾಧಿಸಲು ಪ್ರಯತ್ನಿಸಿದ್ದರು. ಹೀಗಿದ್ದಾಗ ಗೆಲುವಿಗೆ ಹತ್ತಿರ ಇರುವುದು ಡಿ.ಕೆ. ಸುರೇಶ್ ಅವರು ಎಂಬ ಮಾತುಗಳು ಈ ಕ್ಷೇತ್ರ ವ್ಯಾಪ್ತಿಯಲ್ಲಿ ಇದೀಗ ಓಡಾಡುತ್ತಿವೆ. ಅದ್ರಲ್ಲೂ ಬೆಂಗಳೂರು ಗ್ರಾಮಾಂತರ ಲೋಕಸಭೆ ಕ್ಷೇತ್ರದ ಬಗ್ಗೆ ಅಪಾರ ಜ್ಞಾನ ಹೊಂದಿರುವ, ಡಿ.ಕೆ. ಸುರೇಶ್ ಅವರು ಕ್ಷೇತ್ರದ ಇಂಚಿಂಚು ಜಾಗ ಬಲ್ಲವರು. ಇದೇ ಅವರಿಗೆ ಮತದಾರರನ್ನು ಸೆಳೆಯಲು ಸಹಾಯ ಮಾಡಿದೆ ಎಂಬ ಮಾತು ಓಡಾಡುತ್ತಿದೆ. ಮತ್ತೊಂದ್ಕಡೆ, ಡಾ. ಸಿ.ಎನ್. ಮಂಜುನಾಥ್ ಪರವಾಗಿಯೂ ಮಾತುಗಳು ಕೇಳಿಬರುತ್ತಿವೆ. ಹೀಗೆ ಈ ಕ್ಷೇತ್ರದ ಫಲಿತಾಂಶದ ಬಗ್ಗೆ ಎರಡೂ ರೀತಿಯ ಮಾತು ಈಗ ಕೇಳಿಬರುತ್ತಿದ್ದರೂ, ಈ ರೇಸ್‌ನಲ್ಲಿ ಡಿ.ಕೆ. ಸುರೇಶ್ ಮುಂದಿದ್ದಾರೆ. 2013ರ ಉಪಚುನಾವಣೆ ಸಮಯದಲ್ಲಿ ಡಿ.ಕೆ. ಸುರೇಶ್ ಗೆದ್ದು ಬೀಗಿದರು.

ಈ ಮೂಲಕ 2014 ಮತ್ತು 2019ರ ಸಾರ್ವತ್ರಿಕ ಚುನಾವಣೆಗಳಲ್ಲಿ ಗೆದ್ದು ಸತತವಾಗಿ, 3 ಬಾರಿ ಡಿ.ಕೆ. ಸುರೇಶ್ ಸಂಸದರಾಗಿ ಆಯ್ಕೆ ಆಗಿದ್ದರು. ಈಗ 4ನೇ ಬಾರಿಗೆ ಆಯ್ಕೆ ಆಗುವ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಒಟ್ನಲ್ಲಿ ಯಾರು ಗೆಲ್ಲುತ್ತಾರೆ ಯಾರಿಗೆ ಸೋಲು? ಎಂಬುದರ ಪಕ್ಕಾ ಫಲಿತಾಂಶ ಜೂನ್ 4 ರಂದು ಹೊರಬೀಳಲಿದೆ.



ಉದಯವಾಹಿನಿ ಚಿತ್ರ

**2009ರ ತನಕ 'ಕನಕಪುರ ಲೋಕಸಭಾ ಕ್ಷೇತ್ರ' ಎಂಬ ಹೆಸರು ಹೊಂದಿದ್ದ ಈ ಕ್ಷೇತ್ರವನ್ನು 2009 ಲೋಕಸಭಾ ಚುನಾವಣೆ ಸಮಯದಲ್ಲಿ 'ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ' ಎಂದು ಮರು ನಾಮಕರಣ ಮಾಡಲಾಗಿತ್ತು. 2009ರ ಲೋಕಸಭಾ ಚುನಾವಣೆಯಲ್ಲಿ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರು ಈ ಕ್ಷೇತ್ರದಲ್ಲಿ ಗೆದ್ದು ಸಂಸದರಾಗಿ ಆಯ್ಕೆ ಆಗಿದ್ದರು. ಮೊದಲ ಚುನಾವಣೆಯಲ್ಲಿ ಜೆಡಿಎಸ್ ಗೆದ್ದಿದ್ದರೂ ಆ ನಂತರ ಸತತ ಸೋಲು ಕಂಡಿದೆ.**

## ವರ್ಷಕ್ಕೆ ಹೆಚ್ಚಾಗುತ್ತಿದೆ ಉದ್ಯಾನನಗರಿಯ ತಾಪಮಾನ!

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕಳೆದ ಒಂದು ತಿಂಗಳಿನಿಂದ ಮಳೆ ಬರುತ್ತಿದೆ. ರಾಜ್ಯದ ಹಲವು ಭಾಗಗಳಲ್ಲಿ ಮಳೆ ಕಡಿಮೆಯಾಗುತ್ತಿದ್ದು, ಇತ್ತೀಚೆಗೆ ಶಾಖದ ಅಲೆಯ ಪರಿಸ್ಥಿತಿಯನ್ನು ಹೆಚ್ಚಿನ ಭಾಗಗಳು ಅನುಭವಿಸುತ್ತಿವೆ. ಅದರಲ್ಲಿಯೂ ಬೆಂಗಳೂರಿನಲ್ಲಿ ಮತ್ತೆ ಬಿಸಿಲು ಆರಂಭವಾಗುತ್ತಿದೆ.ದೇಶದ ಹಲವು ಭಾಗಗಳಲ್ಲಿ ಉಷ್ಣಾಂಶದಿಂದ ಪರಿಸ್ಥಿತಿಯು ಹದಗೆಡುತ್ತಿದೆ ಎಂದು ವಿಜ್ಞಾನ ಮತ್ತು ಪರಿಸರ ಕೇಂದ್ರ (ಸಿಎಸ್‌ಇ) ಬಿಡುಗಡೆ ಮಾಡಿದ ತನ್ನ ವರದಿಯಲ್ಲಿ ತಿಳಿಸಿದೆ. ಸಿಎಸ್‌ಇ ಭಾರತದ ಆರು ಮೆಟ್ರೋ ನಗರಗಳಾದ ಬೆಂಗಳೂರು, ಚೆನ್ನೈ, ಕೋಲ್ಕತ್ತಾ, ಮುಂಬೈ, ದೆಹಲಿ ಮತ್ತು ಹೈದರಾಬಾದ್‌ಗಳ ಹೀಟ್‌ವೇವ್ ಪರಿಸ್ಥಿತಿಗಳನ್ನು ಅಧ್ಯಯನ ಮಾಡಿದೆ.


ಉದಯವಾಹಿನಿ ಚಿತ್ರ

ಭಾರತದ ನಗರಗಳ ಮೇಲೆ ಪರಿಣಾಮ ಬೀರುವ ಈ ಬದಲಾಗುತ್ತಿರುವ ಪ್ರವೃತ್ತಿಯ ಸ್ವರೂಪವು ಹೆಚ್ಚು ಆಳ, ದೀರ್ಘವಾಗಿರುತ್ತದೆ ಎಂದು ವಿಶ್ಲೇಷಿಸಿದೆ. ಶಾಖದ ಒತ್ತಡವು ಏರುತ್ತಿರುವ ತಾಪಮಾನದ ಬಗ್ಗೆ ಮಾತ್ರವಲ್ಲ ಎಂದು ವಿಶ್ಲೇಷಣೆ ತೋರಿಸಿದೆ. ಇದು ಗಾಳಿಯ ಉಷ್ಣತೆ, ಭೂಮಿಯ ಮೇಲ್ಮೈ ತಾಪಮಾನ, ಆರ್ದ್ರತೆಯ ಸಂಯೋಜನೆಯಾಗಿದ್ದು ಅದು ನಗರಗಳಲ್ಲಿ ತೀವ್ರವಾದ ಅಸ್ವಸ್ಥತೆ, ಶಾಖದ ಒತ್ತಡಕ್ಕೆ ಕಾರಣವಾಗುತ್ತದೆ. ತನ್ನ ವರದಿಯಲ್ಲಿ, ಹೆಚ್ಚುತ್ತಿರುವ ಶಾಖ ಸೂಚ್ಯಂಕವನ್ನು, ದೈನಂದಿನ ಜೀವನದಲ್ಲಿ ಶಾಖದ ಒತ್ತಡವನ್ನು ಹದಗೆಡಿಸಿದೆ ಎಂದು ಸಿಎಸ್‌ಇ ವರದಿ ಮಾಡಿದೆ. ರಾತ್ರಿಯಲ್ಲಿ ನಗರಗಳು ಇನ್ನು ಮುಂದೆ ತಂಪಾಗಿರುವುದಿಲ್ಲ, ಈ ಎಲ್ಲಾ ನಗರಗಳ ಕಾಂಕ್ರೀಟೀಕರಣದಲ್ಲಿ ಗಮನಾರ್ಹ ಏರಿಕೆ ದಾಖಲಿಸಿವೆ. ಇದರಿಂದಾಗಿ ಹೆಚ್ಚಿನ ತಾಪಮಾನ ದಾಖಲಾಗುತ್ತಿದೆ ಎಂದು ಹೈಲೈಟ್ ಮಾಡಿದೆ. ಹಸಿರು ಪ್ರದೇಶಗಳು ಮತ್ತು ಜಲಮೂಲಗಳನ್ನು ವಿಸ್ತರಿಸಲು, ಕಟ್ಟಡಗಳ ಮೇಲಿನ ಥರ್ಮಲ್ ಲೋಡ್ ಅನ್ನು ಕಡಿಮೆ ಮಾಡಲು, ಉಷ್ಣ ಸೌಕರ್ಯವನ್ನು ಸುಧಾರಿಸಲು, ಸಾರ್ವಜನಿಕ ಆರೋಗ್ಯವನ್ನು ರಕ್ಷಿಸಲು ತುರ್ತು ಕ್ರಮಗಳನ್ನು ಜಾರಿಗೆ ತರುವುದು ಅಗತ್ಯವಿತ್ತು ಎಂದು ವರದಿ ತಿಳಿಸಿದೆ.

# ಬಿಜೆಪಿ ಕಳೆದ ಬಾರಿಗಿಂತ ಹೆಚ್ಚು ಸೀಟು ಗೆಲ್ಲಲಿದೆ: ಲೆಕ್ಕಾಚಾರ

■ 320 ಸ್ಥಾನಗಳನ್ನು ಸಲೀಸಾಗಿ ಗೆಲ್ಲಲಿದೆ ■ ಆರನೇ ಹಂತದ ಮತದಾನ ಸೇರಿದಂತೆ ಬಿಜೆಪಿಗೆ ಹೆಚ್ಚು ಮತಗಳು ಬೀದ್ದಿವೆ

• **ಉದಯವಾಹಿನಿ, ಬೆಂಗಳೂರು**

ಲೋಕಸಭಾ ಚುನಾವಣೆಯ ಆರು ಹಂತಗಳ ಮತದಾನ ಪ್ರಕ್ರಿಯೆ ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ ಆನ್‌ಲೈನ್ ಸ್ಟಾಕ್ ಟ್ರೇಡಿಂಗ್ ಮತ್ತು ಹೂಡಿಕೆ ಸಂಸ್ಥೆಯಾಗಿರುವ ಐಐಎಫ್ ಎಲ್ ಸೆಕ್ಯುರಿಟೀಸ್ ತನ್ನ ಸಮೀಕ್ಷೆಯನ್ನು ಪ್ರಕಟಿಸಿದೆ. ಅದರ ಪ್ರಕಾರ ಈ ಬಾರಿ ಬಿಜೆಪಿ 320 ಸ್ಥಾನಗಳನ್ನು ಸಲೀಸಾಗಿ ಗೆಲ್ಲಲಿದೆ.

ಇದು 2019ರ 303 ಸೀಟ್‌ಗಳಿಂತ ಅಧಿಕ. ಆರನೇ ಹಂತದ ಮತದಾನ ಸೇರಿದಂತೆ ಬಿಜೆಪಿಗೆ ಹೆಚ್ಚು ಮತಗಳು ಬೀಳುವ ಹಿಂದಿ ಹೃದಯಭಾಗದ ರಾಜ್ಯಗಳಲ್ಲಿ 3 ಶೇಕಡಾ ಮತ ಚಲಾವಣೆ ಕುಸಿತ ಕಂಡಿದೆ. (ಹಿಂದಿಯೇತರ ರಾಜ್ಯಗಳಲ್ಲಿ 0.6 ಶೇಕಡಾ ಕುಸಿತ) ಇದು ಬಿಜೆಪಿಗೆ ನಷ್ಟ ಎಂದು ಅಂದಾಜಿಸಲಾಗುತ್ತದೆ. ಇದರ ಹೊರತಾಗಿಯೂ, ಉತ್ತರ ಪ್ರದೇಶ (ಎಸ್ಪಿ-ಬಿಎಸ್ಪಿ ಮೈತ್ರಿಯ ಅನುಪಸ್ಥಿತಿ), ಒಡಿಶಾ, ಪಶ್ಚಿಮ ಬಂಗಾಳ, ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿ ಸಿಗುವ ಸ್ಥಾನಗಳ ಲಾಭಗಳ ಮೂಲಕ ಬಿಜೆಪಿ ಬಹುಮತ ಹೆಚ್ಚಿಸಿಕೊಳ್ಳಲಿದೆ ಎಂದು ಬ್ರೋಕರೇಜ್ ಸಂಸ್ಥೆ ಅಂದಾಜಿಸಿದೆ.

ಒಟ್ಟು ಆರು ಹಂತಗಳ ಮತದಾನ ಮುಕ್ತಾಯವಾಗಿದ್ದು ಶೇಕಡಾ 89ರಷ್ಟು ಮತಗಳು ಚಲಾವಣೆಯಾಗಿದೆ. ಈ 486 ಸ್ಥಾನಗಳ ಪೈಕಿ ಬಿಜೆಪಿ 278 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ. ಜೂನ್ 1 ರಂದು ನಡೆಯಲಿರುವ ಕೊನೆಯ ಹಂತದ ಚುನಾವಣೆಗೆ ಮುಂಚಿತವಾಗಿ ಮೊದಲ ಎರಡು ಹಂತಗಳಲ್ಲಿ ಮತದಾನದ ಪ್ರಮಾಣ ಕುಸಿತ ಕಂಡಿದೆ. ಆದಾಗ್ಯೂ, ಬಿಜೆಪಿ 320ರ ಗಡಿ ಮುಟ್ಟುವುದು ಖಚಿತ ಎಂದು ಅದು ಅಂದಾಜಿಸಿದೆ. ಇದೇ ವೇಳೆ ಕೊನೇ ಹಂತದ ಮತದಾನ 2019 ರ ಮಟ್ಟಕ್ಕಿಂತ ಸ್ವಲ್ಪ ಕಡಿಮೆಯಾಗಬಹುದು ಸಮೀಕ್ಷೆ ಹೇಳಿದೆ.

ಏಪ್ರಿಲ್ 19ರಂದು ಚುನಾವಣೆಗಳು ಪ್ರಾರಂಭವಾದಾಗಿನಿಂದ ಪ್ರಮುಖ ಷೇರು ಸೂಚ್ಯಂಕಗಳಾದ ಸೆನ್ಸೆಕ್ಸ್ ಮತ್ತು ನಿಫ್ಟಿ ತಲಾ 3 ಪ್ರತಿಶತದಷ್ಟು ಪ್ರಗತಿ ಕಂಡಿದೆ. ಕಡಿಮೆ ಮತದಾನ ಹಾಗೂ ಸರ್ಕಾರದ ಅಸ್ಥಿರತೆಯ ಬಗ್ಗೆ ಇದ್ದ ಆರಂಭಿಕ ಕಳವಳಗಳು ನಿಧಾನವಾಗಿದೆ ಕಡಿಮೆಯಾಗಿದೆ.

ಆದರೆ, ಫಿಯರ್ ಗೇಜ್ ಇಂಡಿಯಾ ವಿಐಎಕ್ಸ್ ಪ್ರಕಾರ ಮಾರುಕಟ್ಟೆ ಚಂಚಲತೆ ಮುಂದುವರಿದಿದೆ. 1951-67ನ್ನು ಹೊರತುಪಡಿಸಿ ಭಾರತದಲ್ಲಿ ಸತತವಾಗಿ ನಡೆದ 3 ಲೋಕಸಭಾ ಚುನಾವಣೆಗಳಲ್ಲಿ ಮತದಾನದ ಪ್ರಮಾಣ ಹೆಚ್ಚಳಗೊಂಡ ಉದಾಹರಣೆಗಳು ಇಲ್ಲ. ಅಂತೆಯೇ 2014 ಮತ್ತು 2019 ರ ಚುನಾವಣೆಗಳಲ್ಲಿ ಮತದಾನದ ಪ್ರಮಾಣ ಹೆಚ್ಚಳ ಕಂಡ ನಂತರ 2024 ರ ಚುನಾವಣೆಯಲ್ಲಿ ಯಥಾವತ್ ಪ್ರಮಾಣ ಸ್ವಲ್ಪ ಕುಸಿತ ಕಂಡಿದೆ ಎಂದು ಐಐಎಫ್‌ಎಲ್ ಸೆಕ್ಯುರಿಟೀಸ್ ಹೇಳಿದೆ. ಐಐಎಫ್‌ಎಲ್ ಸೆಕ್ಯುರಿಟೀಸ್ ಪ್ರಕಾರ, ಉತ್ತರ ಪ್ರದೇಶದಲ್ಲಿ ಬಿಜೆಪಿ 2019ರ ಒಟ್ಟು ಸ್ಥಾನಕ್ಕೆ ಇನ್ನೂ 10 ಸ್ಥಾನಗಳನ್ನು ಸೇರ್ಪಡೆಗೊಳಿಸಲಿದೆ. ಅಂದರೆ ಒಟ್ಟು 80ರಲ್ಲಿ 72 ಬಿಜೆಪಿ ಪಾಲಾಗಲಿದೆ.

2019ರಲ್ಲಿ ಅದು 62 ಆಗಿತ್ತು. ನರೇಂದ್ರ ಮೋದಿ ನೇತೃತ್ವದ ಪಕ್ಷವು ಒಡಿಶಾ ಮತ್ತು ಪಶ್ಚಿಮ ಬಂಗಾಳದಲ್ಲಿ 2019ಕ್ಕಿಂತ ತಲಾ 5 ಹೆಚ್ಚುವರಿ ಸ್ಥಾನಗಳನ್ನು ಗಳಿಸಲದೆ. ಬಂಗಾಳದಲ್ಲಿ 18ರಿಂದ 23ಕ್ಕೆ ಏರಿಕೆಯಾದರೆ, ಒಡಿಶಾದಲ್ಲಿ 8ರಿಂದ 13ಕ್ಕೆ ಜಿಗಿಯಲಿದೆ. ಅಲ್ಲದೆ, ತೆಲಂಗಾಣ ಮತ್ತು ಆಂಧ್ರಪ್ರದೇಶ ತಲಾ 3 ಸ್ಥಾನಗಳನ್ನು ಪಡೆಯಲಿದೆ.

2019 ರ ಚುನಾವಣೆಗೆ ಹೋಲಿಸಿದರೆ 486 ಸ್ಥಾನಗಳಲ್ಲಿ ಒಟ್ಟು 156 ಸ್ಥಾನಗಳಲ್ಲಿ ಮತದಾನದ ಪ್ರಮಾಣ ಹೆಚ್ಚಾಗಿದೆ ಎಂದು ಐಐಎಫ್‌ಎಲ್ ಸೆಕ್ಯುರಿಟೀಸ್ ತಿಳಿಸಿದೆ. ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಭಾರಿ ಪ್ರಮಾಣದ ಮತ ಹಂಚಿಕೆ ವ್ಯತ್ಯಾಸ ಆಗಿದೆ. ಹೀಗಾಗಿ 2024 ರ ಚುನಾವಣೆಯ ಫಲಿತಾಂಶ 2004 ರ ಚುನಾವಣೆಗಳಂತೆ ಅಚ್ಚರಿಯ ಫಲಿತಾಂಶವನ್ನು ಪ್ರಕಟಿಸುವುದಿಲ್ಲ ಎಂದು ಐಐಎಫ್‌ಎಲ್ ದೃಢವಾಗಿ ಹೇಳಿದೆ.


ಉದಯವಾಹಿನಿ ಚಿತ್ರ

**ಶೇಕಡಾ 89ರಷ್ಟು ಮತಗಳು ಚಲಾವಣೆ**

**6 ಹಂತಗಳ ಚುನಾವಣೆ ಪ್ರಕ್ರಿಯೆ ಮುಗಿದ ನಂತರ ಮತದಾನದ ಪ್ರಮಾಣದಲ್ಲಿ ಸರಾಸರಿ 150 ಬೇಸಿಸ್ ಪಾಯಿಂಟ್‌ಗಳ ಕುಸಿತ ಕಂಡುಬಂದಿದೆ. ಮೊದಲ ಹಂತದಲ್ಲಿ ಮತದಾನದ 400 ಬೇಸಿಸ್ ಪಾಯಿಂಟ್‌ಗಳ ಕುಸಿತ ಹೋಲಿಸಿದರೆ ಇದು ಕಡಿಮೆ. ಹಂತ 4 ಮತ್ತು 5ನೇ ಹಂತದಲ್ಲಿ 2019 ಕ್ಕೆ ಹೋಲಿಸಿದರೆ ಅಲ್ಪ ಏರಿಕೆ ಕಂಡಿದ್ದು. 6 ನೇ ಹಂತವು ಅಲ್ಪ ಕುಸಿತ ದಾಖಲಾಗಿದೆ ಐಐಎಫ್‌ಎಲ್ ಸೆಕ್ಯುರಿಟೀಸ್ ಹೇಳಿದೆ.**

**''ಮೈತ್ರಿ / ಅಭ್ಯರ್ಥಿ ಆಯ್ಕೆ ಸಮಸ್ಯೆಗಳಿಂದಾಗಿ ರಾಜಸ್ಥಾನ, ಕರ್ನಾಟಕ ಮತ್ತು ಹರಿಯಾಣ ರಾಜ್ಯಗಳಲ್ಲಿ ಬಿಜೆಪಿಗೆ ನಷ್ಟವಾಗಬಹುದು. ಆದರೆ, ಮಹಾರಾಷ್ಟ್ರದಲ್ಲಿ ಎನ್‌ಡಿಎ 2 ಸ್ಥಾನಗಳನ್ನು ಹೆಚ್ಚಿಸಿಕೊಳ್ಳಲಿದೆ ಎಂದು ಅಂದಾಜಿಸಿದೆ. 2019 ರಲ್ಲಿ 224 ಸ್ಥಾನಗಳಲ್ಲಿ ಶೇಕಡಾ 50ಕ್ಕಿಂತ ಹೆಚ್ಚು ಮತ ಪಡೆಯುವ ಮೂಲಕ ಬಿಜೆಪಿ ತನ್ನ ಬಹುಮತವನ್ನು ಉಳಿಸಿಕೊಳ್ಳುತ್ತದೆ ಐಐಎಫ್‌ಎಲ್ ಸೆಕ್ಯುರಿಟೀಸ್ ಹೇಳಿದೆ.**

# ಚಿಕನ್‌ಗಿಂತಲೂ ದುಬಾರಿಯಾದ ಬೀನ್ಸ್: ಮಳೆ ಬೆನ್ನಲ್ಲೇ ಮತ್ತಷ್ಟು ತುಟ್ಟಿ

## • ತರಕಾರಿಗಳಷ್ಟೇ ಅಲ್ಲದೆ, ಸೊಪ್ಪುಗಳ ಬೆಲೆಯೂ ದುಬಾರಿಯಾಗಿದ್ದು ಗ್ರಾಹಕನ ಜೇಬಿಗೆ ಕತ್ತರಿ ಬಿದ್ದಿದೆ

• **ಉದಯವಾಹಿನಿ ರಾಮನಗರ**

ಬರದಿಂದಾಗಿ ಗಗನಮುಖಿಯಾಗಿದ್ದ ತರಕಾರಿಗಳ ದರ ಇಳಿಕೆಯಾಗುವ ಲಕ್ಷಣಗಳು ಕಾಣುತ್ತಿಲ್ಲ. ಅದರಲ್ಲೂ ಬೀನ್ಸ್ ದರ ಏರುಗತಿಯಲ್ಲೇ ಸಾಗುತ್ತಿದ್ದು, ಚಿಕನ್‌ಗಿಂತಲೂ ದುಬಾರಿಯಾಗಿದೆ. ಹೌದು, ಮಾರುಕಟ್ಟೆಯಲ್ಲಿ ಇದೀಗ ಬೀನ್ಸ್ ಪ್ರತಿ ಕೆ.ಜಿ.ಗೆ 200 ದಾಟಿದೆ. ಅದೇ ಕೋಳಿ ಮಾಂಸದ ದರ ಬಾಯ್ಲರ್ ಪ್ರತಿ ಕೆ.ಜಿ.ಗೆ 175–180 ಇದ್ದರೆ, ಫಾರಂ ಕೋಳಿ ಕೆ.ಜಿ.ಗೆ 145. ಇತರ ತರಕಾರಿಗಳು ದರವೂ ಶತಕ ಮತ್ತು ಅರ್ಧ ಶತಕದ ಗಡಿ ದಾಟಿವೆ.

ಬಿಸಿಲ ಬೇಗೆಯಿಂದಾಗಿ ಗಗನಮುಖಿಯಾಗಿದ್ದ ದರವು, ಕೆಲ ದಿನಗಳಿಂದ ಸುರಿದ ಮಳೆ ಬೆನ್ನಲ್ಲೇ ಮತ್ತಷ್ಟು ತುಟ್ಟಿಯಾಗಿದೆ. ತರಕಾರಿಗಳಷ್ಟೇ ಅಲ್ಲದೆ, ಸೊಪ್ಪುಗಳ ಬೆಲೆಯೂ ದುಬಾರಿಯಾಗಿದ್ದು ಗ್ರಾಹಕನ ಜೇಬಿಗೆ ಬರೆ ಬಿದ್ದಿದೆ. ತರಕಾರಿಗಳಲ್ಲೇ ಬೀನ್ಸ್ ದರದಲ್ಲಿ ಭಾರಿ ಹೆಚ್ಚಳವಾಗಿದ್ದು, ಎರಡ್ಮೂರು ತಿಂಗಳಿಂದ 150ರಿಂದ ಕೆಳಕ್ಕಿಳಿದಿಲ್ಲ.

ಕಳೆದ ವಾರ ಪ್ರತಿ ಕೆ.ಜಿ.ಗೆ 180 ಇದ್ದ ಬೀನ್ಸ್, ಇದೀಗ 200– 220ಕ್ಕೆ ಏರಿಕೆಯಾಗಿದೆ. ಮಳೆ ಕೊರತೆ ಕಾರಣದಿಂದಾಗಿ ತರಕಾರಿ ಬೆಳೆಯುವವರ ಸಂಖ್ಯೆ ಕಡಿಮೆಯಾಗಿರುವುದರಿಂದ ಪೂರೈಕೆಯಲ್ಲಿ ಕೊರತೆಯಾಗಿದೆ. ಇದರಿಂದಾಗಿ ಹಲವು ತರಕಾರಿಗಳ ದರ ಪ್ರತಿ ಕೆ.ಜಿ.ಗೆ 50ರಿಂದ 100ರ ನೂರರ ಗಡಿ ದಾಟಿದೆ. ತರಕಾರಿ ದರ ಕೇಳಿ ಗ್ರಾಹಕರು ಹುಬ್ಬೇರಿಸುವ ಸ್ಥಿತಿ ಬಂದಿದೆ.

> ರಾಮನಗರದ ಮಾರುಕಟ್ಟೆಯಲ್ಲಿ ತರಕಾರಿ ಖರೀದಿಯಲ್ಲಿ ತೊಡಗಿದ್ದ ಗ್ರಾಹಕರು ರಾಮನಗರದ ಹಳೇ ಬಸ್ ನಿಲ್ದಾಣ ವೃತ್ತದ ಬಳಿ ತಳ್ಳುಗಾಡಿಯಲ್ಲಿ ಸೊಪ್ಪು ಮಾರಾಟದಲ್ಲಿ ತೊಡಗಿದ್ದ ಮಹಿಳೆ ಮಳೆ ಕೊರತೆ ಕಾರಣಕ್ಕೆ ತಿಂಗಳುಗಳ ಹಿಂದೆ ತರಕಾರಿ ದರ ಏರಿಕೆಯಾಗಿತ್ತು. ಇದೀಗ ಕೆಲ ದಿನಗಳಿಂದ ಸುರಿದ ಮಳೆಯಿಂದಾಗಿ ತರಕಾರಿ ಬೆಳೆಗಳು ಹಾನಿಯಾಗಿವೆ. ಹಾಗಾಗಿ ತರಕಾರಿ ದರ ಮತ್ತೆ ದುಬಾರಿಯಾಗಿದೆ
>
> – ಮೊಹಮ್ಮದ್ ಶಫಿ
> ತರಕಾರಿ ವ್ಯಾಪಾರಿ ರಾಮನಗರ


ಉದಯವಾಹಿನಿ ಚಿತ್ರ

**ಬಿಸಿಲ ಬೇಗೆಯಿಂದಾಗಿ ಗಗನಮುಖಿ**

'ಬೀನ್ಸ್ ದರ ತೀವ್ರ ಹೆಚ್ಚಳವಾಗಿದೆ ಎಂಬ ಕಾರಣಕ್ಕೆ ಸಾಮಾನ್ಯ ಗ್ರಾಹಕರು ಬೀನ್ಸ್ ಖರೀದಿಸುವುದನ್ನೇ ನಿಲ್ಲಿಸಿದ್ದಾರೆ.

ಹೋಟೆಲ್‌ನವರು, ಶುಭ–ಸಮಾರಂಭ, ಜಾತ್ರೆಯಂತ ಕಾರ್ಯಕ್ರಮಗಳನ್ನು ಮಾಡುವವರು ಮಾತ್ರ ಹೆಚ್ಚಾಗಿ ಖರೀದಿಸುತ್ತಾರೆ. ಅಂತಹವರು ಮುಂಚೆಯೇ ಆರ್ಡರ್ ಕೊಟ್ಟಿದ್ದರೆ ಮಾತ್ರ ತರಿಸಿ ಕೊಡುತ್ತೇವೆ. ಹಾಗಾಗಿ, ಕೆಲ ವ್ಯಾಪಾರಿಗಳು ಬೀನ್ಸ್ ಮಾರುವುದನ್ನೇ ನಿಲ್ಲಿಸಿದ್ದೇವೆ' ಎಂದು ಬೀದಿ ವ್ಯಾಪಾರಿಯೊಬ್ಬರು ಪ್ರತಿಕ್ರಿಯಿಸಿದರು.

**ದುಬಾರಿಯಾದ ಸೊಪ್ಪು:** ದುಬಾರಿ ತರಕಾರಿಗಳ ಬದಲು ಸೊಪ್ಪನ್ನಾದರೂ ಖರೀದಿಸೋಣ ಎಂದು ಗ್ರಾಹಕರು, ಸೊಪ್ಪುಗಳ ದರ ವಿಚಾರಿಸಿದರೂ ಅಲ್ಲೂ ಶಾಕ್ ಆಗುವುದು ತಪ್ಪದು. ಯಾಕೆಂದರೆ, ಅವುಗಳ ದರ ಸಹ ಏರಿಕೆಯಾಗಿದೆ. ಕಳೆದ ವಾರ ಒಂದು ಕಟ್ಟಿಗೆ 80 ಇದ್ದ ಮೆಂತ್ಯೆ ಸೊಪ್ಪು ಈ ವಾರ 100ಕ್ಕೆ ಏರಿಕೆಯಾಗಿದೆ. ಸಬ್ಬಸ್ಸಿಗೆ 40ರಿಂದ 60ಕ್ಕೆ ತಲುಪಿದೆ. ಇತರ ಸೊಪ್ಪುಗಳು ಸಹ ದುಬಾರಿಯಾಗಿವೆ.

ಇನ್ನು ಉಪಾಹಾರ, ಮಾಂಸದ ಸಾರಿಗೆ ಅಗತ್ಯವಾದ ಕೊತಂಬರಿ ಸೊಪ್ಪು 60ರಿಂದ 70ಕ್ಕೆ ತಲುಪಿದೆ. ಕೆಲ ವಾರಗಳಿಂದ ಕೊತಂಬರಿ ದರ 50ಕ್ಕಿಂತ ಮೇಲೆಯೇ ಇದೆ. ಪುದಿನಾ ದರ ಮಾತ್ರ 10ರಿಂದ 15 ಆಸುಪಾಸಿನಲ್ಲಿದೆ.

### ಕೋಳಿ ಮಾಂಸ ತೆಗೆದುಕೊಂಡು ಹೋಗುವುದೇ ವಾಸಿ

ಮಾರುಕಟ್ಟೆಯಿಂದ ವಾರಕ್ಕಾಗುವಷ್ಟೇ ತರಕಾರಿ ತರಬೇಕಾದರೆ ಕನಿಷ್ಠ 800–1000 ಬೇಕು. ತರಕಾರಿಗಳ ದರವನ್ನು ಕೇಳಿದರೆ ತಲೆ ತಿರುಗಿದಂತಾಗುತ್ತದೆ. ಬೀನ್ಸ್ ಖರೀದಿ ಮಾಡುವ ಬದಲು ಕೋಳಿ ಮಾಂಸ ತೆಗೆದುಕೊಂಡು ಹೋಗುವುದೇ ವಾಸಿ ಎನಿಸುತ್ತದೆ. ಆದರೂ ವಿಧಿ ಇಲ್ಲದೆ ತರಕಾರಿ ಖರೀದಿಸಬೇಕಾದ ಅನಿವಾರ್ಯತೆ ಇದೆ' ಎಂದು ಗ್ರಾಹಕ ವಿಜಯಕುಮಾರ್ ಪ್ರತಿಕ್ರಿಯಿಸಿದರು. 'ದರ ಏರಿಕೆಯ ಹೊರೆಯಿಂದಾಗಿ ಒಂದು ಕೆ.ಜಿ ತರಕಾರಿ ತೆಗೆದುಕೊಳ್ಳುವ ಬದಲು ಅರ್ಧ ಮತ್ತು ಕಾಲು ಕೆ.ಜಿ. ತೆಗೆದುಕೊಳ್ಳುವ ಹಂತಕ್ಕೆ ಬಂದಿದ್ದೇವೆ. ಎಲ್ಲರಿಗೂ ಒಂದು ಕಾಲವೆಂಬಂತೆ ತರಕಾರಿ ಬೆಳೆಗಾರರಿಗೂ ಇದೊಂದು ರೀತಿಯ ಸುಗ್ಗಿ ಎನ್ನಬಹುದು' ಎಂದು ಹೇಳಿದರು.

---

# ರೈತರಿಂದ ಅರ್ಜಿ ಸ್ವೀಕರಿಸಲು ಪ್ರತ್ಯೇಕ ಕೌಂಟರ್

• **ಉದಯವಾಹಿನಿ ತುಮಕೂರು**

ತಾಲ್ಲೂಕಿನ ಬೆಳ್ಳಾವಿ ಹೋಬಳಿ ವ್ಯಾಪ್ತಿಯ ಸೋರೆಕುಂಟೆ, ಪಿ.ಗೊಲ್ಲಹಳ್ಳಿ, ಪುರದಕುಂಟೆ, ಗೌಡನಹಳ್ಳಿ, ಲಿಂಗನಹಳ್ಳಿ, ಗಿರಿಯನಹಳ್ಳಿ ಸೇರಿದಂತೆ 6 ಗ್ರಾಮಗಳ ಸುಮಾರು 1,722 ಎಕರೆ ವಿಸ್ತೀರ್ಣದಲ್ಲಿ ಚೆನ್ನೈ–ಬೆಂಗಳೂರು ಕೈಗಾರಿಕಾ ಕಾರಿಡಾರ್ ಯೋಜನೆಯನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಯೋಜನೆ ಅಭಿವೃದ್ಧಿಗಾಗಿ ಭೂಮಿ ನೀಡಿರುವ ರೈತರ ಅಹವಾಲು ಅರ್ಜಿಗಳನ್ನು ಸ್ವೀಕರಿಸಲು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ(ಕೆಐಎಡಿಬಿ) ವಿಶೇಷ ಭೂಸ್ವಾಧೀನ ಅಧಿಕಾರಿ ಸೋಮಪ್ಪ ಕಡಕೋಳ ಅವರ ನೇತೃತ್ವದಲ್ಲಿಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ರತ್ಯೇಕ ಕೌಂಟರ್ ಅನ್ನು ಸ್ಥಾಪಿಸಲಾಗಿತ್ತು.

ಯಲ್ಲದಡ್ಲು ಗ್ರಾಮದ 1, ಸೋರೆಕುಂಟೆ–5, ಪುರದಕುಂಟೆ–1, ಗೌಡನಹಳ್ಳಿ–4 ರೈತರು ಸೇರಿ ಒಟ್ಟು 11 ರೈತರು ಖುದ್ದಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಲಿಖಿತ ಅರ್ಜಿ ಮೂಲಕ ಅಹವಾಲು ಸಲ್ಲಿಸಿದರು. ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸ್ಥಳಕ್ಕೆ ಭೇಟಿ ನೀಡಿ ರೈತರಿಂದ ಸಲ್ಲಿಕೆಯಾಗುತ್ತಿರುವ ಅಹವಾಲುಗಳನ್ನು ಪರಿಶೀಲಿಸಿ ಆದಷ್ಟು ಬೇಗ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ರೈತರಿಗೆ ಭರವಸೆ ನೀಡಿದರು.


ಉದಯವಾಹಿನಿ ಚಿತ್ರ

ತುಮಕೂರು ತಾಲ್ಲೂಕು ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿರುವ ಚೆನ್ನೈ–ಬೆಂಗಳೂರು ಕೈಗಾರಿಕಾ ಕಾರಿಡಾರ್ ಯೋಜನೆಯನ್ನು ಪರಿವೀಕ್ಷಿಸಲು ಜಿಲ್ಲಾಧಿಕಾರಿಗಳು ಮೇ 23ರಂದು ಸೋರೆಕುಂಟೆ ಗ್ರಾಮಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಸದರಿ ಯೋಜನೆ ಅಭಿವೃದ್ಧಿಗಾಗಿ ಭೂಮಿ ನೀಡಿದ ಸ್ಥಳೀಯ ರೈತರು ಇದುವರೆಗೂ ಪರಿಹಾರ ದೊರೆತಿಲ್ಲ.

ಶೀಘ್ರ ಭೂ ಪರಿಹಾರ ಒದಗಿಸಿಕೊಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದರು. ಯಾವುದೇ ರೈತರು ಭೂ ಪರಿಹಾರದಿಂದ ವಂಚಿತರಾಗಬಾರದೆಂಬ ದೃಷ್ಟಿಯಿಂದ ಲಿಖಿತ ಅಹವಾಲನ್ನು ಖುದ್ದಾಗಿ ಭೇಟಿ ಮಾಡಿ ತಮಗೆ ಸಲ್ಲಿಸಬೇಕೆಂದು ರೈತರಿಗೆ ತಿಳಿಸಿದ್ದರು.

---

# ಬಿತ್ತನೆ ಬೀಜ,ರಸಗೊಬ್ಬರಗಳ ದಾಸ್ತಾನು ವಿವರಗಳನ್ನು ಅನಾವರಣಗೊಳಿಸಿ

• **ಉದಯವಾಹಿನಿ ಮಂಡ್ಯ**

ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಮಾರಾಟಗಾರರು ತಮ್ಮ ಬಳಿ ಇರುವ ದಾಸ್ತಾನುಗಳ ವಿವರವನ್ನು ಪ್ರತಿ ದಿನ ಅಂಗಡಿಯ ಮುಂಭಾಗ ಅನಾವರಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಮಾರಾಟಗಾರರ ಸಭೆ ನಡೆಸಿ ಮಾತನಾಡಿದರು. ಪ್ರತಿ ದಿನ ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಲಭ್ಯವಿರುವ ರಸಗೊಬ್ಬರ ಹಾಗೂ ಬಿತ್ತನೆ ಬೀಜದ ದಾಸ್ತಾನು ವಿವರದ ಬುಲೆಟಿನ್ ನ್ನು ರೈತರ ಮಾಹಿತಿಗಾಗಿ ಬಿಡುಗಡೆ ಮಾಡಬೇಕು. ಇದರಿಂದ ಬಿತ್ತನೆ ಬೀಜ ಅಥವಾ ರಸಗೊಬ್ಬರ ಕ್ಕಾಗಿ ನೂಕು ನುಗ್ಗಲು ಉಂಟಾಗುವುದಿಲ್ಲ ಎಂದರು.

ದರಗಳ ಅನಾವರಣ ಕಡ್ಡಾಯ ಮಾರಾಟಗಾರರು ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ದರವನ್ನು ಕಡ್ಡಾಯವಾಗಿ ಅನಾವರಣಗೊಳಿಸಬೇಕು. ರೈತರು ಕೂಡ ಖರೀದಿಸಿದಾಗ ಅಧಿಕೃತ ಬಿಲ್ ನ್ನು ಪಡೆದುಕೊಳ್ಳಬೇಕು. ಅಧಿಕಾರಿಗಳು ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು. ಗುಣಮಟ್ಟವನ್ನು ಸಹ ಪರೀಕ್ಷಿಸಬೇಕು ಎಂದರು.


ಉದಯವಾಹಿನಿ ಚಿತ್ರ

ಮಾರಟಗಾರರು ರೈತರಿಗೆ ಹೆಚ್ಚು ಇಳುವರಿ ನೀಡುವಂತಹ ಹಾಗೂ ಜಿಲ್ಲೆಯ ಹವಾಮಾನಕ್ಕೆ ತಕ್ಕಂತಹ ಬಿತ್ತನೆ ಬೀಜ ಮಾರಾಟ ಮಾಡಿ. ಬೇಸಾಯ ಕ್ರಮಗಳ ಬಗ್ಗೆ ತಿಳಿಸಿ. ಹೆಚ್ಚು ಲಾಭಗಳಿಸುವ ದೃಷ್ಠಿಯಿಂದ ರಸಗೊಬ್ಬರ ಮಾರಾಟಗಾರರು ಬೇರೆ ವಿಧದ ರಸಗೊಬ್ಬರವನ್ನು ರೈತರು ಖರೀದಿಸುವಂತೆ ಉತ್ತೇಜನೆ ಮಾಡುವುದು ಬೇಡ. ರೈತರ ಬೇಡಿಕೆಯಂತೆ ರಸಗೊಬ್ಬರವನ್ನು ನೀಡಿ ಎಂದರು. ಕೃಷಿ ಇಲಾಖೆ ತಾಲ್ಲೂಕು ಸಹಾಯಕ ನಿರ್ದೇಶಕರು ತಾಲ್ಲೂಕು ಮಟ್ಟದಲ್ಲಿ ರೈತ ಸಂಘಗಳೊಂದಿಗೆ ಸಭೆ ನಡೆಸಿ, ಕುಂದು ಕೊರತೆಗಳನ್ನ ಪರಿಹರಿಸಿ. ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆಯಾಗದಂತೆ ನೋಡಿಕೊಳ್ಳಿ. ಯಾವುದೇ ಸಮಸ್ಯೆ ಇದ್ದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ತಕ್ಷಣ ಪರಿಹರಿಸಿ ಎಂದರು. ಕೃಷಿ ಇಲಾಖೆಯ ಉಪನಿರ್ದೇಶಕಿ ಮಮತಾ ಅವರು ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಬೇಡಿಕೆ, ಮಳೆ, ಬಿತ್ತನೆಯ ವಿವರನ್ನು ಸಭೆಗೆ ನೀಡಿದರು.

> ಬಿತ್ತನೆ ಬೀಜಕ್ಕಾಗಿ ಕೆಲವು ದಿನ ಅಥವಾ ವಾರ ಬೇಡಿಕೆ ಹೆಚ್ಚಿರುತ್ತದೆ. ಇಂತಹ ದಿನಗಳನ್ನು ತಿಳಿದುಕೊಂಡು ರೈತ ಸಂಪರ್ಕ ಕೇಂದ್ರಗಳು ಬೆಳಿಗ್ಗೆ 8 ಗಂಟೆಯಿಂದಲೇ ತೆರೆದು ಕಾರ್ಯನಿರ್ವಹಿಸಿ. ರೈತರೊಂದಿಗೆ ಶಾಂತ ಚಿತ್ತ ಹಾಗೂ ಸಮನ್ವಯದಿಂದ ಕಾರ್ಯನಿರ್ವಹಿಸಿ ಕೃಷಿಗೆ ಸಂಬಂಧಿಸಿದ ಅಗತ್ಯ ಮಾಹಿತಿಗಳನ್ನು ಒದಗಿಸಿ –ಜಿಲ್ಲಾಧಿಕಾರಿ

---

# ಅತಿಥಿ ಗೃಹದಲ್ಲಿ ಸಾಮಗ್ರಿ ನಾಪತ್ತೆ: ರೋಹಿಣಿ ಸಿಂಧೂರಿ ವೇತನಕ್ಕೆ ಕತ್ತರಿ

• **ಉದಯವಾಹಿನಿ ಮೈಸೂರು**

ಜಿಲ್ಲಾಧಿಕಾರಿಯಾಗಿದ್ದಾಗ ರೋಹಿಣಿ ಸಿಂಧೂರಿ ವಾಸವಿದ್ದ ಅತಿಥಿ ಗೃಹದಲ್ಲಿಸಾಮಗ್ರಿಗಳು ನಾಪತ್ತೆಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗ ಅವರ ವೇತನದಲ್ಲಿಯೇ ಮೊತ್ತವನ್ನು ಕಡಿತಗೊಳಿಸುವಂತೆ ಸರ್ಕಾರದ ಕಾರ್ಯದರ್ಶಿಗೆ ಆಡಳಿತ ತರಬೇತಿ ಸಂಸ್ಥೆ (ಎಟಿಐ) ಮನವಿ ಮಾಡಿದೆ.

ಅತಿಥಿ ಗೃಹದಲ್ಲಿಕಾಣೆಯಾಗಿರುವ ಸಾಮಗ್ರಿಗಳ ಮೊತ್ತ ಸುಮಾರು 77,296 ರೂ. ಗಳನ್ನು ರೋಹಿಣಿ ಸಿಂಧೂರಿ ಅವರ ವೇತನದಲ್ಲಿದ್ದ ಕಡಿತಗೊಳಿಸಿ ಡಿಡಿ ಮೂಲಕ ಮೈಸೂರಿನ ಆಡಳಿತ ತರಬೇತಿ ಸಂಸ್ಥೆ ಮಹಾನಿರ್ದೇಶಕರ ಹೆಸರಿಗೆ ಕಳುಹಿಸುವಂತೆ ಸಂಸ್ಥೆಯ ಜಂಟಿ ನಿರ್ದೇಶಕರು ರಾಜ್ಯ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ.

ರೋಹಿಣಿ ಸಿಂಧೂರಿ ಮೈಸೂರಿಗೆ ಜಿಲ್ಲಾಧಿಕಾರಿಯಾಗಿ ವರ್ಗವಾಗಿ ಬಂದ ನಂತರ 2020 ಅಕ್ಟೋಬರ್ 2ರಿಂದ ನವೆಂಬರ್ 14ರ ತನಕ ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಆವರಣದಲ್ಲಿರುವ ಅತಿಥಿ ಗೃಹದಲ್ಲಿವಾಸ್ತವ್ಯ ಇದ್ದರು. ಅತಿಥಿಗೃಹವನ್ನು ತೆರವುಗೊಳಿಸಿದಾಗ ಅಲ್ಲಿದ್ದ ಬೆಲೆಬಾಳುವ ವಸ್ತುಗಳು ಇರಲಿಲ್ಲ. ಇದರಿಂದಾಗಿ ರೋಹಿಣಿ ಸಿಂಧೂರಿ ಅವರು ಕಾರ್ಯನಿರ್ವಹಿಸುತ್ತಿದ್ದ ಜಿಲ್ಲಾಧಿಕಾರಿ ಕಚೇರಿಗೆ 2020ರ ಡಿಸೆಂಬರ್ 16, 2021ರ ಜನವರಿ 8 ಹಾಗೂ ಅದೇ ವರ್ಷ ಏಪ್ರಿಲ್ 12ರಂದು ಪತ್ರ ಬರೆದು ಸಂಸ್ಥೆಯ ಸಾಮಗ್ರಿಗಳನ್ನು ಹಿಂತಿರುಗಿಸುವಂತೆ ಸೂಚನೆ ನೀಡಲಾಗಿತ್ತು. ಆದರೆ, ರೋಹಿಣಿ ಸಿಂಧೂರಿ ಯಾವುದೇ ಮಾಹಿತಿ ನೀಡಿರಲಿಲ್ಲ.


ಉದಯವಾಹಿನಿ ಚಿತ್ರ

ಜಿಲ್ಲಾಧಿಕಾರಿಗಳ ವಸತಿ ಗೃಹದಲ್ಲಿಸಂಸ್ಥೆಯ ಸಾಮಗ್ರಿಗಳು ಇದ್ದಲ್ಲಿಹಿಂತಿರುಗಿಸುವಂತೆ ಕೋರಿ 2022ರ ನವೆಂಬರ್ 30ರಂದು ಮತ್ತೊಂದು ಪತ್ರ ಬರೆಯಲಾಗಿತ್ತು. ಇದಕ್ಕೆ ಜಿಲ್ಲಾಧಿಕಾರಿಗಳ ವಸತಿ ಗೃಹದಲ್ಲಿ ಯಾವುದೇ ಸಾಮಗ್ರಿಗಳು ಇರುವುದಿಲ್ಲ, ಎಂದು ಉತ್ತರಿಸಲಾಗಿತ್ತು.

ರೋಹಿಣಿ ಸಿಂಧೂರಿ ಹಿಂದೂ ಧಾರ್ಮಿಕ ಹಾಗೂ ಧರ್ಮಾದಾಯ ದತ್ತಿಗಳ ಇಲಾಖೆಯಲ್ಲಿ ಆಯುಕ್ತರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಅತಿಥಿ ಗೃಹದ ಸಾಮಗ್ರಿಗಳನ್ನು,ಸಂಸ್ಥೆಗೆ ಹಿಂತಿರುಗಿಸುವಂತೆ ಇಲ್ಲವೇ ನಾಪತ್ತೆಯಾಗಿರುವ ಸಾಮಾಗ್ರಿಗಳ ಮೊತ್ತವನ್ನು ಆಡಳಿತ ತರಬೇತಿ ಸಂಸ್ಥೆಗೆ ಪಾವತಿ ಮಾಡುವಂತೆ ಸೂಚಿಸಲಾಗಿತ್ತು.

2023ರ ಜನವರಿ 15ರಂದು ಈ ಪತ್ರ ಸ್ವೀಕೃತವಾಗಿದ್ದರೂ ಸಿಂಧೂರಿ ಅವರಿಂದ ಯಾವುದೇ ಉತ್ತರ ಬಂದಿರಲಿಲ್ಲ. ಈಗ ಆಡಳಿತ ತರಬೇತಿ ಸಂಸ್ಥೆ ಆಡಳಿತ ವಿಭಾಗದ ಜಂಟಿ ನಿರ್ದೇಶಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ. ವೇತನದಲ್ಲಿಕಡಿತಗೊಳಿಸುವಂತೆ ಕೋರಿದ್ದಾರೆ.

### ವಸೂಲಿ ಪ್ರಕ್ರಿಯೆ ಚುರುಕು

ರೋಹಿಣಿ ಸಿಂಧೂರಿ ಅವರು ಜಿಲ್ಲಾಧಿಕಾರಿಯಾಗಿದ್ದಾಗಲೇ ಸಾಮಗ್ರಿ ನಾಪತ್ತೆ ಪ್ರಕರಣ ಸಾಕಷ್ಟು ಸುದ್ದಿಯಾಗಿತ್ತು. ಶಾಸಕ ಸಾ.ರಾ.ಮಹೇಶ್ ಅವರು ವಿಧಾನ ಸಭಾ ಕಲಾಪದಲ್ಲಿಯೂ ವಿಷಯ ಪ್ರಸ್ತಾಪಿಸಿದ್ದರು. ಈ ಕುರಿತು ತನಿಖೆ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ಸಚಿವರು ಭರವಸೆ ನೀಡಿದ್ದರು. ಇದೀಗ ನಾಪತ್ತೆಯಾಗಿರುವ ವಸ್ತುಗಳ ಮೌಲ್ಯ ವಸೂಲಿ ಮಾಡುವ ಪ್ರಕ್ರಿಯೆ ಚುರುಕುಗೊಂಡಿದೆ.

---

# ಶಿರಾ ಗೇಟ್ ರಸ್ತೆ ಸಂಚಾರ ಶುರು

• **ಉದಯವಾಹಿನಿ ತುಮಕೂರು**

ನಗರದ ಶಿರಾ ಗೇಟ್ ಭಾಗದ ಜನರ ಬವಣೆಗೆ ಜಿಲ್ಲಾ ಆಡಳಿತ ಸ್ಪಂದಿಸಿದ್ದು, ಕೊನೆಗೂ ತಾತ್ಕಾಲಿಕ ರಸ್ತೆ ನಿರ್ಮಿಸಿ, ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ. ಇದರಿಂದ ಆ ಭಾಗದ ಜನರು ನಿಟ್ಟುಸಿರು ಬಿಟ್ಟಿದ್ದಾರೆ.

ದ್ವಿಚಕ್ರ ವಾಹನ, ಆಟೊ, ಕಾರುಗಳ ಸಂಚಾರಕ್ಕೆ ಮಂಗಳವಾರದಿಂದ ಅಧಿಕೃತವಾಗಿ ಅವಕಾಶ ಕಲ್ಪಿಸಲಾಗಿದೆ.ಬಸ್‌ಗಳು, ಲಾರಿ, ಟ್ರಕ್ ಸೇರಿದಂತೆ ಭಾರಿ ವಾಹನಗಳು ಹಿಂದಿನಂತೆ ಹನುಮಂತರಪುರ ಮಾರ್ಗವಾಗಿ ಹೆದ್ದಾರಿ ಮೂಲಕ ಸಂಚರಿಸಬೇಕಿದೆ.

ಜಲ್ಲಿ, ಮಣ್ಣು ಸುರಿದು ತಾತ್ಕಾಲಿಕವಾಗಿ ಲಘು ವಾಹನಗಳ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗಿದೆ. ಈಗ ಮಳೆಗಾಲ ಆರಂಭವಾಗಿದ್ದು, ಜೋರು ಮಳೆಯಾಗಿ, ಕೆರೆಗೆ ನೀರು ಬಂದು ಕೋಡಿ ಹರಿದರೆ ಈ ತಾತ್ಕಾಲಿಕ ರಸ್ತೆ ಕೊಚ್ಚಿಕೊಂಡು ಹೋಗಲಿದೆ. ಅಂತಹ ಸ್ಥಿತಿ ಬರುವವರೆಗೂ ಓಡಾಡಬಹುದಾಗಿದೆ. ನಗರದ ಅಮಾನಿಕೆರೆ ಕೋಡಿ ಹಳ್ಳಕ್ಕೆ ಸೇತುವೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಂಡಿದ್ದು, ಶಿರಾ ಗೇಟ್ ರಸ್ತೆಯಲ್ಲಿ ಮೂರು ವಾರಗಳ ಹಿಂದೆ ವಾಹನ ಸಂಚಾರವನ್ನು ಸಂಪೂರ್ಣವಾಗಿ ಬಂದ್ ಮಾಡಲಾಗಿತ್ತು. ಆ ಭಾಗಕ್ಕೆ ಜನರು ನಡೆದುಕೊಂಡು ಹೋಗಲೂ ಅವಕಾಶ ಇಲ್ಲದಂತ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಾರ್ವಜನಿಕರು ವಾಹನಗಳ ಮೂಲಕವೇ 6 ಕಿ.ಮೀ ಬಳಸಿಕೊಂಡು ತೆರಳಬೇಕಿತ್ತು.


ಉದಯವಾಹಿನಿ ಚಿತ್ರ

ತಾತ್ಕಾಲಿಕ ರಸ್ತೆ ನಿರ್ಮಿಸಿ ವಾಹನ ಸಂಚಾರಕ್ಕೆ ಅವಕಾಶ ನೀಡದೆ ರಸ್ತೆ ಬಂದ್ ಮಾಡಿಸಿದ್ದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ನಿರ್ಧಾರದ ವಿರುದ್ಧ ಜನರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಸಾರ್ವಜನಿಕರ ಕೋಪಕ್ಕೆ ತುತ್ತಾಗಿದ್ದ ಜಿಲ್ಲಾಧಿಕಾರಿ, ಕೊನೆಗೂ ಪರ್ಯಾಯ ಮಾರ್ಗಗಳ ಬಗ್ಗೆ ಚಿಂತಿಸಿದ್ದರು. ಮೊದಲ ಹಂತದಲ್ಲಿ ಶಿರಾ ಗೇಟ್‌ಗೆ ನಗರದ ಬಸ್ ನಿಲ್ದಾಣದಿಂದ 20 ನಿಮಿಷಕ್ಕೆ ಒಂದು ಬಸ್ ಸಂಚಾರ ಆರಂಭಿಸಿದ್ದರು.

---

# ಕೆರೆ: ಶುಚಿತ್ವ ಮರೀಚಿಕೆ

• **ಉದಯವಾಹಿನಿ ಹನೂರು**

ಕಳೆದ ವರ್ಷವಷ್ಟೇ ಒತ್ತುವರಿಯಿಂದ ಮುಕ್ತಗೊಂಡು ಅಭಿವೃದ್ಧಿಯ ಕನಸು ಕಾಣುತ್ತಿದ್ದ ಒಡೆಯರಪಾಳ್ಯದ ಕೆರೆ ಈಗ ಅಕ್ಷರಶಃ ಕಲುಷಿತ ನೀರಿನ ಗುಂಡಿಯಾಗಿ ಮಾರ್ಪಟ್ಟಿದೆ.ತಾಲ್ಲೂಕಿನ ಒಡೆಯರಪಾಳ್ಯ ಗ್ರಾಮದ ಹೃದಯಭಾಗದಲ್ಲಿರುವ ಈ ಕೆರೆಯು ಒತ್ತುವರಿಯಿಂದ ನಲುಗಿತ್ತು. 30 ವರ್ಷಗಳ ಹಿಂದೆ ಈ ಕೆರೆಯ ವಿಸ್ತೀರ್ಣ 8.90 ಎಕರೆಯಷ್ಟಿತ್ತು. ಒತ್ತುವರಿಯಿಂದಾಗಿ ಕೆರೆಯ ವ್ಯಾಪ್ತಿ ಎರಡು ಎಕರೆಗೆ ಕುಗ್ಗಿತ್ತು.ಎರಡು ದಶಕಗಳ ಹಿಂದೆ ಕೆರೆ ಸುತ್ತ ಮುತ್ತ ವಿಶಾಲ ಜಾಗ ಇತ್ತು. ಮಳೆ ಬಂದಾಗ ಕೆರೆ ತುಂಬಿ ತುಳುಕುತ್ತಿತ್ತು. ಜನರು ಇದರ ನೀರನ್ನು ಮನೆ ಬಳಕೆಗೆ ಬಳಸುತ್ತಿದ್ದರು.

ಬಟ್ಟೆ ಒಗೆಯಲು , ದನ ಕರುಗಳಿಗೆ ನೀರುಣಿಸಲು ಸ್ಥಳೀಯರು ಇದೇ ಕೆರೆಯನ್ನು ಆಶ್ರಯಿಸಿದ್ದರು. ಕಾಲ ಕ್ರಮೇಣ ಕೆರೆ ಸುತ್ತು ಮುತ್ತಲ ಏರಿ (ದಡ) ಮಾಯವಾಗಿ ಮನೆ, ಅಂಗಡಿಗಳು, ಕಟ್ಟಡಗಳು ನಿರ್ಮಾಣವಾಗಿದ್ದವು.ಗ್ರಾಮದ ಮೂಲಕ ಹಾದು ಹೋಗುವ ರಸ್ತೆ ಅಂತರ ರಾಜ್ಯ ಸಂಪರ್ಕ ಕಲ್ಪಿಸುವ ಹೆದ್ದಾರಿಯಾಗಿರುವುದರಿಂದ ದಿನನಿತ್ಯ ಸಾವಿರಾರು ಸಂಖ್ಯೆಯಲ್ಲಿ ವಾಹನಗಳು ಸಂಚರಿಸುತ್ತವೆ. ಒಡೆಯರಪಾಳ್ಯದಲ್ಲಿ ಎಲ್ಲೆಂದರಲ್ಲಿ ವಾಹನಗಳು ನಿಲ್ಲುತ್ತಿದುದ್ದರಿಂದ ಕೆರೆಯ ಪಕ್ಕ ಇರುವ ಜಾಗದಲ್ಲಿ ಬಸ್ ನಿಲ್ದಾಣ ನಿರ್ಮಿಸಬೇಕು ಮತ್ತು ಕೆರೆಯ ಒತ್ತುವರಿಯನ್ನು ತೆರವುಗೊಳಿಸಬೇಕು ಎಂಬ ಕೂಗು ಕೇಳಿ ಬಂದಿತ್ತು.ತಾಲ್ಲೂಕು ಆಡಳಿತವು ಕಳೆದ ವರ್ಷ ಪೊಲೀಸರ ಸಹಕಾರ ಪಡೆದು ಕೆರೆ ಒತ್ತುವರಿಯನ್ನು ತೆರವುಗೊಳಿಸಿತ್ತು.

ಒತ್ತುವರಿ ತೆರವುಗೊಳಿಸಿರುವ ಸ್ಥಳದಲ್ಲಿ ಬಸ್ ನಿಲ್ದಾಣ ನಿರ್ಮಿಸಿ, ಉದ್ಯಾನ ಹಾಗೂ ಕೆರೆಯನ್ನು ಸ್ವಚ್ಛಗೊಳಿಸುವಂತೆ ಗ್ರಾಮಪಂಚಾಯಿತಿಗೆ ಸೂಚಿಸಲಾಗಿತ್ತು.

ಆದರೆ. ಇದುವರೆಗೆ ಕೆರೆಯ ಸ್ವಚ್ಛತಾ ಕಾರ್ಯ ನಡೆದಿಲ್ಲ. ಈಚೆಗೆ ಬಿದ್ದ ಮಳೆಗೆ ಸುತ್ತಲೂ ಬಿದ್ದಿದ್ದ ತ್ಯಾಜ್ಯವೆಲ್ಲ ಕೆರೆಗೆ ಬಂದು ಸೇರಿದ್ದು ಕೆರೆ ನೀರು ದುರ್ವಾಸನೆ ಬೀರಲು ಆರಂಭವಾಗಿದೆ.


ಉದಯವಾಹಿನಿ ಚಿತ್ರ

> ಕೆರೆ ಸಂಪೂರ್ಣವಾಗಿ ಕಸ, ಕಡ್ಡಿ, ಪ್ಲಾಸ್ಟಿಕ್‌ನಿಂದ ತುಂಬಿದೆ. ಕೆರೆ ಅಭಿವೃದ್ಧಿ ಮಾಡುವ ಉದ್ದೇಶದೊಂದಿಗೆ ಒತ್ತುವರಿ ತೆರವುಗೊಳಿಸಲಾಗಿದೆ. ಆದರೆ ಸ್ಥಳೀಯ ಅಧಿಕಾರಿಗಳು ಇದಕ್ಕೂ ತಮಗೂ ಸಂಬಂಧವಿಲ್ಲ ಎಂಬಂತೆ ವರ್ತಿಸುತ್ತಿದ್ದಾರೆ. ಕೂಡಲೇ ಹಿರಿಯ ಅಧಿಕಾರಿಗಳು ಇತ್ತ ಗಮನಹರಿಸಿ ಕೆರೆಯನ್ನು ಸ್ವಚ್ಛಗೊಳಿಸಲು ಕ್ರಮ ವಹಿಸಬೇಕು -ಶಿವಾನಂದ್, ಗ್ರಾಮಸ್ಥ

---

# ಹಲಸಿನ ಹಣ್ಣಿಗೆ ಹೆಚ್ಚಿದ ಬೇಡಿಕೆ: ಲಾಭದ ನಿರೀಕ್ಷೆಯಲ್ಲಿ ಮಾರಾಟಗಾರರು

## • ಹಲಸು ಹಾಗೂ ಮಾವಿನ ಋತು ಶುರುವಾಗಿದ್ದು ರಸ್ತೆ ಬದಿಯಲ್ಲಿ ಹಲಸು ಮತ್ತು ಮಾವು ಹಣ್ಣುಗಳು ಮಾರಾಟ ನಡೆಯುತ್ತಿದೆ

• **ಉದಯವಾಹಿನಿ ಬಂಗಾರಪೇಟೆ**

ತಾಲ್ಲೂಕಿನಲ್ಲಿ ಹಲಸಿನ ಹಣ್ಣಿನ ಋತು ಆರಂಭವಾಗಿದೆ. ಈ ಬಾರಿ ಉತ್ತಮ ಫಸಲು ಬರುತ್ತಿದ್ದು, ಹಲಸು ಮಾರಾಟಗಾರರು ಉತ್ತಮ ಲಾಭದ ನಿರೀಕ್ಷೆಯಲ್ಲಿದ್ದಾರೆ.'ಹಸಿದು ಹಲಸು ತಿನ್ನು, ಉಂಡು ಮಾವು ತಿನ್ನು' ಎಂಬ ಗಾದೆ ಮಾತಿನಂತೆ ಹಲಸು ಹಾಗೂ ಮಾವಿನ ಋತು ಶುರುವಾಗಿದ್ದು ರಸ್ತೆ ಬದಿಯಲ್ಲಿ ಹಲಸು ಮತ್ತು ಮಾವು ಹಣ್ಣುಗಳು ಮಾರಾಟ ನಡೆಯುತ್ತಿದೆ.

ಆದರೆ ಈ ಬಾರಿ ಮಾವು ತೀರಾ ಕಡಿಮೆಯಾಗುವ ಲಕ್ಷಣಗಳಿವೆ. ತಾಲ್ಲೂಕಿನಲ್ಲಿ ಈ ಬಾರಿ ಉತ್ತಮ ಮಳೆಯಾಗಿರುವುದರಿಂದ ಹಲಸು ಇಳುವರಿಗೆ ಸಹಾಯಕವಾಗಿ ಸ್ವಾದಿಷ್ಟ ಹಣ್ಣುಗಳು ಬರತೊಡಗಿವೆ.

ಈ ಹಣ್ಣನ್ನು ಮನೆಗೆ ತಂದು, ಯಾವುದಾದರೂ ಮೂಲೆಯಲ್ಲಿ ಇಟ್ಟರೂ ಸಾಕು, ಇದರ ಪರಿಮಳವು, ಅಕ್ಕಪಕ್ಕದವರ ಮನೆಗೂ ಹಬ್ಬುತ್ತದೆ. ಇದೇ ಈ ಹಣ್ಣಿನ ತಾಕತ್ತು. ತನ್ನಲ್ಲಿ ಅಡಗಿರುವ ರುಚಿ ಹಾಗೂ ಸುವಾಸನೆಯಿಂದ, ಈ ಹಣ್ಣನ್ನು ಹೆಚ್ಚಿನವರು ಇಷ್ಟಪಡುತ್ತಾರೆ. ಹಲಸು ಬಡವರ ಹಣ್ಣು ಎಂದೇ ಜನಜನಿತವಾಗಿದೆ. ಮಾವು–ಬಾಳೆಗಳಂತೆ ಹಲಸನ್ನು ವಾಣಿಜ್ಯ ಬೆಳೆಯಾಗಿ ಬೆಳೆಯುವುದಿಲ್ಲ. ಇಳುವರಿ ದೃಷ್ಟಿಯಿಂದ ಈ ಹಣ್ಣಿನ ಬೇಸಾಯ ಇತರ ಹಣ್ಣಿಗಿಂತ ಹೆಚ್ಚು ಲಾಭದಾಯಕವಲ್ಲ, 5 ಕೆಜಿಯಿಂದ 25 ಕೆಜಿಯವರೆಗೆ ತೂಗುವ ಇದು ಗಾತ್ರದಲ್ಲಿ ಹಣ್ಣುಗಳ ದೊಡ್ಡಣ್ಣನೂ ಹೌದು.


ಉದಯವಾಹಿನಿ ಚಿತ್ರ

> ಹಲಸಿನ ಹಣ್ಣುಗಳನ್ನು ಕೆಜಿಎಫ್‌ನ ಮಾರುಕಟ್ಟೆಯಲ್ಲಿ ಉತ್ತಮ ಬೆಲೆಗೆ ಮಾರಾಟ ಮಾಡಿದ್ದು ಈ ಬಾರಿ ಉತ್ತಮ ಆದಾಯ ಬಂದಿದೆ.
> -ಮಂಜುನಾಥ, ರೈತ, ಗಾಜಗ ಗ್ರಾಮ

ತಾಲ್ಲೂಕಿನ ಗಡಿಭಾಗವಾದ ಕಾಮಸಮುದ್ರ, ತಳೂರು , ಬತ್ತಲಹಳ್ಳಿ ,ಸಾಕರಸನಹಳ್ಳಿ, ಕದರಿನತ್ತ, ದೋಣಿಮಡಗು,ಭುವನಹಳ್ಳಿ ಮತ್ತು ಬೂದಿಕೋಟೆ ಹೋಬಳಿಯಲ್ಲಿ ಕೋಟರಾಮಗೂಳ್ಳ, ಮೂತ್ತನೂರು, ಪಾತರಾಮಗೊಳ್ಳ ಕದಿರೇನಹಳ್ಳಿ ಹೆಚ್ಚು ಹಲಸು ಬೆಳೆಯಲಾಗುತ್ತದೆ.

ಹೋಬಳಿಗಳಿಂದಲೂ ಈ ಋತುವಿನಲ್ಲಿ ಹಣ್ಣುಗಳು ಮಾರುಕಟ್ಟೆಗೆ ಬರುತ್ತವೆ. ಬಯಲುಸೀಮೆಯ ಕೋಲಾರ ಜಿಲ್ಲೆಯಲ್ಲಿ ಹಲಸಿನ ಹಣ್ಣುಗಳ ಹೆಚ್ಚು ಜನಪ್ರಿಯವಾಗಿದೆ. ಗಡಿಭಾಗವಾದ ಕಾಮಸಮುದ್ರ ಹೋಬಳಿಯ ಗಡಿಭಾಗದಲ್ಲಿರುವ ಹಳ್ಳಿಗಳಲ್ಲಿ ನೂರಾರು ವರ್ಷಗಳ ಹಳೆಯ ಮರಗಳಿವೆ.ಈ ಬಾರಿ ಇಳುವರಿ ಉತ್ತಮವಾಗಿದೆ. ಕಳೆದ ವರ್ಷ ಬಿದ್ದ ಮಳೆ ಹಲಸು ಬೆಳೆಗೆ ಪೂರಕವಾಗಿದೆ.

ನೀರಾವರಿ ಜಮೀನು ಹಾಗೂ ನೀರಿನ ಆಶ್ರಯವಿರುವ ತೋಟಗಳ ಬಳಿ ಹೆಚ್ಚಿನ ಇಳುವರಿ ಬಂದಿದೆ. ಹಲಸಿನ ತೋಪುಗಳು ಕಡಿಮೆಯಾಗುತ್ತಿದ್ದರೂ ತೋಟಗಳಲ್ಲಿ ಬೆಳೆಸಿರುವ ಹಲಸಿನ ಮರಗಳಲ್ಲಿ ಜನವರಿ– ಫೆಬ್ರುವರಿಯಲ್ಲಿಯೇ ವ್ಯಾಪಾರ ಮಾಡಿ ಏಪ್ರಿಲ್ ತಿಂಗಳಿನಿಂದ ಖರೀದಿಸಿ ತಂದು ಮಾರಾಟ ಮಾಡಲಾಗುತ್ತದೆ.

'ದೊಡ್ಡಗಾತ್ರದ ಹಲಸಿನ ಹಣ್ಣುಗಳ 100ರಿಂದ 150ಗಳವರೆಗೆ ಮಾರಾಟವಾಗುತ್ತಿವೆ. ಹಲಸಿನ ಋತುವಿನಲ್ಲಿ ಮಾರುಕಟ್ಟೆಯಲ್ಲಿ ಭರದಿಂದ ಮಾರಾಟವಾಗುತ್ತಿರುವ ಹಲಸಿನ ತಳಿಗಳಲ್ಲಿ ಹಳದಿ ಬಣ್ಣದ ತೊಳೆಯ ಹಲಸು, ಕೆಂಪು ಬಣ್ಣದ ತೊಳೆಯ ಹೆಬ್ಬಲಸು, ಬೇರು ಹಲಸು ಮೊದಲಾಗಿ ನಾನಾ ಹಲಸಿನ ಹಣ್ಣುಗಳ ಮಾರಾಟ ನಡೆಯುತ್ತಿದೆ. ಇತರ ಹಲಸಿನ ಹಣ್ಣುಗಳ ಗಾತ್ರ, ಹಣ್ಣಿನ ತಳಿ, ವೈವಿಧ್ಯತೆ ಅನುಗುಣವಾಗಿ 50ರಿಂದ 200ವರೆಗೆ ಮಾರಾಟವಾಗುತ್ತಿವೆ. ಗುಡ್ಡೆ ಹಲಸು 4 ರಿಂದ 5 ಸಾವಿರದವರೆಗೂ ಮಾರಾಟವಾಗುತ್ತಿವೆ ಎಂದು ಸಗಟು ವ್ಯಾಪಾರಿ ಇನಾಯತ್ ಉಲ್ಲಾ ತಿಳಿಸಿದರು.

### ಹಲಸಿನ ಹಣ್ಣಿನ ಸೇವನೆಯಿಂದ ಆಗುವ ಉಪಯೋಗಗಳು

- ಹಲಸಿನ ಹಣ್ಣನ್ನು ನಿಯಮಿತವಾಗಿ ಸೇವಿಸಿದರೆ ದೇಹದ ಶಕ್ತಿ ಹೆಚ್ಚುತ್ತದೆ.
- ಹಲಸಿನ ಹಣ್ಣಿನ ಬೀಜಗಳನ್ನು ಹುರಿದು ಸೇವಿಸಿದರೆ ವೀರ್ಯವೃದ್ಧಿಯಾಗುತ್ತದೆ
- ಒಂದು ಕಪ್ ಹಲಸಿನಹಣ್ಣು ಶಕ್ತಿಯುತ ಉತ್ಕರ್ಷಣ ನಿರೋಧಕವನ್ನು ದೇಹಕ್ಕೆ ಒದಗಿಸುತ್ತದೆ.
- 100 ಗ್ರಾಂ ಹಲಸಿನ ಹಣ್ಣಿನಲ್ಲಿ 303 ಮಿ. ಗ್ರಾಂ ಪೊಟ್ಯಾಷಿಯಂ ಇರುತ್ತದೆ. ಪೊಟ್ಯಾಷಿಯಂ ಸೇವಿಸಿದರೆ ಅದು ರಕ್ತದ ಒತ್ತಡವನ್ನು ಕಡಿಮೆ ಮಾಡುತ್ತದೆ.
- ಹಲಸಿನ ಹಣ್ಣು ವಿಟಮಿನ್ 'ಎ'ಯಿಂದ ಸಮೃದ್ಧವಾಗಿದ್ದು ಆರೋಗ್ಯಕರ ಕಣ್ಣು ಮತ್ತು ತ್ವಚೆಗಾಗಿ ಒಂದು ಶಕ್ತಿಯುತ ನ್ಯೂಟ್ರಿಯೆಂಟ್ ಆಗಿದೆ.
- ಹಲಸಿನ ಹಣ್ಣಿನಲ್ಲಿರುವ ನೈಸರ್ಗಿಕ ಸಕ್ಕರೆಗಳಾದ ಸುಕ್ರೋಸ್ ಮತ್ತು ಫ್ರುಕ್ಟೋಸ್ ನಿಮ್ಮ ಶಕ್ತಿಯನ್ನು ವರ್ಧಿಸುವಲ್ಲಿ ಸಹಕಾರಿಯಾಗಿದೆ.
- ಅಲ್ಸರ್ ವಿರುದ್ಧ ಹೋರಾಡುವ ವಿಶಿಷ್ಟ ಗುಣವನ್ನು ಹೊಂದಿರುವ ಹಲಸಿನ ಹಣ್ಣು ಅಲ್ಸರ್ ಮತ್ತು ಜೀರ್ಣಕ್ರಿಯೆ ಸಮಸ್ಯೆಗಳನ್ನು ದೂರಮಾಡುತ್ತದೆ.
- ಹಲಸಿನ ಹಣ್ಣಿನಲ್ಲಿರುವ ಕಬ್ಬಿಣದ ಅಂಶ ಅನೀಮಿಯಾವನ್ನು ದೂರ ಮಾಡಿ ದೇಹದ ಸೂಕ್ತ ರಕ್ತ ಸಂಚಲನೆಗೆ ಫಲಪ್ರದವಾಗಿದೆ.
- ಹೃದಯಾಘಾತ ಮತ್ತು ಪಾರ್ಶ್ವವಾಯುವಿನಂತಹ ಕಾಯಿಲೆಯನ್ನು ಹಲಸಿನ ಹಣ್ಣು ಪರಿಹರಿಸುತ್ತದೆ ಎಂದು ತೋಟಗಾರಿಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಶಿವಾರೆಡ್ಡಿ ಮಾಹಿತಿ ನೀಡಿದರು.

---

# ಮಿನಿ ನ್ಯೂಸ್

## ಗ್ರಾ.ಪಂ. ಅಧ್ಯಕ್ಷೆ ಮಗನ ವಿರುದ್ಧ ದೂರು


• **ಉದಯವಾಹಿನಿ ಮಹದೇಶ್ವರ ಬೆಟ್ಟ**

ಆಶ್ರಯ ಮನೆ ಕೊಡಿಸುವ ಭರವಸೆ ನೀಡಿ, ನನ್ನೊಂದಿಗೆ ಬಲವಂತದ ಲೈಂಗಿಕ ಕ್ರಿಯೆ ನಡೆಸಿ, ಅದನ್ನು ಚಿತ್ರೀಕರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ' ಎಂದು ಆರೋಪಿಸಿ ಕಾಡಂಚಿನ ಗ್ರಾಮದ ಗೃಹಿಣಿಯೊಬ್ಬರು, ಪೊನ್ನಾಚಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನೀಲಾಂಬಿಕೆ ಎಂಬವರ ಮಗ ವೈದೇಶ್ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದಾರೆ. ವಿಡಿಯೋವನ್ನು ಹರಿಬಿಟ್ಟಿದ್ದಾರೆ' ಎಂದು ಆರೋಪಿಸಿ ಬಸಮಣಿ, ಶಿವಮ್ಮ ಎಂಬವರ ವಿರುದ್ಧವೂ ಮಹಿಳೆ ದೂರು ನೀಡಿದ್ದು, ಮಹದೇಶ್ವರ ಬೆಟ್ಟ ಠಾಣೆಯ ಪೊಲೀಸರು ಮೂವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

'ಮೇ 24ರಂದು ಮಹಿಳೆ ದೂರು ನೀಡಿದ್ದಾರೆ. ಮೊದಲ ಆರೋಪಿ ವೈದೇಶ್ ಅಪಘಾತದಲ್ಲಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಶೀಘ್ರ ಬಂಧಿಸಲಾಗುವುದು ಎಂದು ಠಾಣೆ ಇನ್ಸ್‌ಪೆಕ್ಟರ್ ಜಗದೀಶ್ ತಿಳಿಸಿದ್ದಾರೆ. ನಾವು ಬಡವರಾಗಿದ್ದು, ಪಂಚಾಯಿತಿಯಿಂದ ಒಂದು ಮನೆ ಕೊಡಿಸಿಕೊಡಿ ಎಂದು ವೈಯಕ್ತಿಕವಾಗಿ ವೈದೇಶ್‌ಗೆ ಮನವಿ ಮಾಡಿದ್ದೆ. ಮನೆಯ ಆಸೆಯಿಂದ ಹೋದಾಗ ಲೈಂಗಿಕ ಕ್ರಿಯೆಗೆ ಬಳಸಿಕೊಂಡು, ಅದನ್ನು ಚಿತ್ರೀಕರಿಸಿದ್ದಾರೆ. ವೈದೇಶ್ ಅವರೊಂದಿಗೆ ಬಸಮಣಿ ಮತ್ತು ಶಿವಮ್ಮ ಅವರು ವಿಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಮಾನಹಾನಿ ಮಾಡಿದ್ದಾರೆ' ಎಂದು ದೂರಿನಲ್ಲಿ ಹೇಳಿದ್ದಾರೆ.

## ನಾನು ಬಿಜೆಪಿಗೆ ಹೊಸಬನಲ್ಲ

• **ಉದಯವಾಹಿನಿ ಮಡಿಕೇರಿ**



ನಾನು ಬಿಜೆಪಿಗೆ ಹೊಸಬನಲ್ಲ. 10ನೇ ವಯಸ್ಸಿನಿಂದಲೇ ನಾನು ಸ್ವಯಂಸೇವಕ. ಆದರೆ, ನಾನು ಬಿಜೆಪಿಗೆ ಹೊಸಬ ಎಂಬ ಅಪಪ್ರಚಾರ ನಡೆಯುತ್ತಿದೆ' ಎಂದು ನೈರುತ್ಯ ಪದವೀಧರ ಕ್ಷೇತದ ಬಿಜೆಪಿ ಅಭ್ಯರ್ಥಿ ಧನಂಜಯ ಸರ್ಜಿ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

'ನಾನು ಸಂಘ ವಿರೋಧಿ ಕೆಲಸ ಮಾಡಿದ್ದೇನೆ ಎಂದು ರಘುಪತಿ ಭಟ್ ಹೇಳಿದ್ದಾರೆ. ನನ್ನ ಬಗ್ಗೆ ಹೇಳಲು ಬೇರೆ ಏನು ಇಲ್ಲದೇ ಇರುವುದರಿಂದ ಈ ರೀತಿ ಅಪಪ್ರಚಾರ ಮಾಡುತ್ತಿದ್ದಾರೆ' ಎಂದು ಅವರು ಆರೋಪಿಸಿದರು. 'ರಘುಪತಿ ಭಟ್ ಒಳ್ಳೆಯ ಕೆಲಸ ಮಾಡಿದ್ದಾರೆ. ಅವರ ಬಗೆ ನಮಗೆ ಬಹಳ ಗೌರವವಿದೆ. ಆದರೆ, ಉಡುಪಿಗೆ ಹೋಗಿ ಅವರ ಮನೆಯ ಮುಂದೆ ಹೋದರೆ ಸೌಜನ್ಯಕ್ಕೂ ಮನೆಯ ಒಳಗೆ ಕರೆಯಲಿಲ್ಲ. ಅವರಿಗೆ ಬಿಜೆಪಿ ಮೂರು ಬಾರಿ ಎಂಎಲ್‌ಎ ಸ್ಥಾನಕ್ಕೆ ಟಿಕೆಟ್ ನೀಡಿತ್ತು ಎಂಬುದನ್ನು ಅವರು ಮರೆಯಬಾರದು' ಎಂದರು. ನನಗೆ ಕಾಂಗ್ರೆಸ್‌ನಿಂದ ಟಿಕೆಟ್ ನೀಡುವ ಕುರಿತು ಆಮಿಷ ಬಂದಿತ್ತು. ಆದರೆ, ನಾನು ಆರ್‌ಎಸ್‌ಎಸ್ ಕಾರ್ಯಕರ್ತನಾಗಿರುವ ಕಾರಣ ನಾನು ಒಪ್ಪಲಿಲ್ಲ. ಬಿಜೆಪಿ ಹಿರಿಯರು ಟಿಕೆಟ್ ನೀಡಿದ್ದಾರೆ' ಎಂದು ಹೇಳಿದರು.

## 13ರ ಬಾಲಕಿ ಗರ್ಭಿಣಿ: ಶಿಕ್ಷಕ ಬಂಧನ

• **ಉದಯವಾಹಿನಿ ಚಿಕ್ಕಬಳ್ಳಾಪುರ**

ತಾಲ್ಲೂಕಿನ ಸರ್ಕಾರಿ ಶಾಲೆಯೊಂದರ ಏಳನೇ ತರಗತಿಯ ವಿದ್ಯಾರ್ಥಿನಿಯೊಬ್ಬಳು ಗರ್ಭಿಣಿಯಾಗಿದ್ದು ಇದಕ್ಕೆ ಕಾರಣನಾದ ಶಾಲೆಯ ಮುಖ್ಯ ಶಿಕ್ಷಕನನ್ನು ಪೊಲೀಸರು ಮಂಗಳವಾರ ವಶಕ್ಕೆ ಪಡೆದಿದ್ದಾರೆ.13 ವರ್ಷದ ಬಾಲಕಿಯ ಆರೋಗ್ಯದಲ್ಲಿ ಇತ್ತೀಚೆಗೆ ಏರುಪೇರಾಗಿತ್ತು.ಚಿಕಿತ್ಸೆಗಾಗಿ ಪೋಷಕರು ಆಸ್ಪತ್ರೆಗೆ ಕರೆದೊಯ್ದ ವೇಳೆ ಆಕೆ ಗರ್ಭಿಣಿಯಾಗಿರುವ ವಿಷಯ ಗೊತ್ತಾಗಿದೆ. ಬಾಲಕಿಯನ್ನು ವಿಚಾರಿಸಿದಾಗ ನಡೆದ ಘಟನೆಯ ಬಗ್ಗೆ ಮಾಹಿತಿ ನೀಡಿದ್ದಾಳೆ. ಬಾಲಕಿಯ ದೂರು ಆಧರಿಸಿ ಮುಖ್ಯ ಶಿಕ್ಷಕನನ್ನು ಬಂಧಿಸಿರುವ ಗ್ರಾಮಾಂತರ ಠಾಣೆ ಪೊಲೀಸರು ಪೋಕ್ಸೊ ಪ್ರಕರಣ ದಾಖಲಿಸಿದ್ದಾರೆ. ನ್ಯಾಯಾಲಯದ ಎದುರು ಶಿಕ್ಷಕನನ್ನು ಹಾಜರು ಪಡಿಸಲಾಗಿದೆ.

## ಕಟ್ಟಡ ನಿರ್ಮಾಣ ಕಾರ್ಮಿಕ ಆತ್ಮಹತ್ಯೆ

• **ಉದಯವಾಹಿನಿ ಕನಕಪುರ**

ತಾಲ್ಲೂಕಿನ ಕೋಡಿಹಳ್ಳಿ ಹೋಬಳಿಯ ಭೋಗನಂಜಪ್ಪನದೊಡ್ಡಿ ಗ್ರಾಮದಲ್ಲಿ ಮಂಗಳವಾರ ಕಟ್ಟಡ ನಿರ್ಮಾಣ ಕಾರ್ಮಿಕರೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮನೆಸಾಲ ನೀಡಿದ್ದ ಹಣಕಾಸು ಸಂಸ್ಥೆ ಕಿರುಕುಳವೇ ಆತ್ಮಹತ್ಯೆಗೆ ಕಾರಣ ಎಂದು ಮೃತನ ಪತ್ನಿ ಆರೋಪಿಸಿದ್ದಾರೆ. ಹೊನ್ನಯ್ಯ (41) ಆತ್ಮಹತ್ಯೆ ಮಾಡಿಕೊಂಡ ಕಾರ್ಮಿಕ. ಅವರಿಗೆ ಪತ್ನಿ, ಪುತ್ರ ಹಾಗೂ ಇಬ್ಬರು ಪುತ್ರಿಯರು ಇದ್ದಾರೆ.ಮನೆ ನಿರ್ಮಾಣಕ್ಕೆ ಮೂರು ವರ್ಷದ ಹಿಂದೆ ಖಾಸಗಿ ಹಣಕಾಸು ಸಂಸ್ಥೆಯಲ್ಲಿ 6.85 ಲಕ್ಷ ಮನೆ ಸಾಲ ಪಡೆದಿದ್ದರು. ಫೈನಾನ್ಸ್‌ನವರು 1.15 ಲಕ್ಷ ವಿಮೆ ಮೊತ್ತವನ್ನು ಮುಂಗಡ ಕಡಿತ ಮಾಡಿ ಉಳಿದ 6.85 ಲಕ್ಷ ಕೊಟ್ಟಿದ್ದರು.

ಪ್ರತಿ ತಿಂಗಳು ಫೈನಾನ್ಸ್‌ನವರು ಮನೆಗೆ ಬಂದು ಸಾಲದ ಕಂತು ಕಟ್ಟಿಸಿಕೊಳ್ಳುತ್ತಿದ್ದರು. ಕಳೆದ ಆರು ತಿಂಗಳಿಂದ ಸರಿಯಾಗಿ ಕೆಲಸ ಇಲ್ಲದ ಕಾರಣ ಸಾಲದ ಕಂತು ಪಾವತಿಸಿರಲಿಲ್ಲ ಎಂದು ತಿಳಿದು ಬಂದಿದೆ. ಸಾಲ ಕಟ್ಟದಿದ್ದರೆ ಅರೆಸ್ಟ್ ಆಗುತ್ತೀರಾ. ಮನೆಯ ಜಾಗ ವಶಪಡಿಸಿಕೊಳ್ಳಲಾಗುವುದು ಎಂದು ಬೆದರಿಸುತ್ತಿದ್ದರು ಎಂದು ಕಂತು ಪಡೆಯಲು ಮನೆಗೆ ಬರುತ್ತಿದ್ದ ಹಣಕಾಸು ಸಂಸ್ಥೆ ಸಿಬ್ಬಂದಿ ಬೆದರಿಕೆ ಹಾಕುತ್ತಿದ್ದರು ಎಂದು ಮೃತರ ಪತ್ನಿ ಜಯರತ್ನಮ್ಮ ಕೊಡಿಗೇಹಳ್ಳಿ ಠಾಣೆಗೆ ಕೊಟ್ಟ ದೂರಿನಲ್ಲಿ ತಿಳಿಸಿದ್ದಾರೆ.

## ಶಾಲೆಗಳಿಗೆ ಶೇ.95ರಷ್ಟು ಪಠ್ಯ ಪುಸ್ತಕ ವಿತರಣೆ ಪರಿಷ್ಕರಣೆ : ಮಧು ಬಂಗಾರಪ್ಪ

• **ಉದಯವಾಹಿನಿ ಮೈಸೂರು**



ಪ್ರಸಕ್ತ ಶೈಕ್ಷಣಿಕ ಸಾಲಿನ ಕಾರ್ಯಚಟುವಟಿಕೆಗಳು ಪುನಾರಂಭ ಗೊಳ್ಳುತ್ತಿವೆ. ಎರಡು ತಿಂಗಳ ಬೇಸಿಗೆ ರಜೆ ಪೂರ್ಣಗೊಂಡಿದ್ದು, ಮುಂದಿನ ಬುಧವಾರದಿಂದ ಶಾಲೆಗಳು ಮತ್ತೆ ಪುನಾರಂಭಗೊಳ್ಳಲಿವೆ. ಬಾಕಿ ಇರುವ ಪಠ್ಯ ಪುಸ್ತಕಗಳನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ರಾಜ್ಯದ ಶಾಲೆಗಳಿಗೆ ಈಗಾಗಲೇ ಶೇಕಡಾ 95ರಷ್ಟು ಪಠ್ಯ ಪುಸ್ತಕಗಳನ್ನು ಪೂರೈಕೆ ಮಾಡಿದ್ದೇವೆ. ಬಾಕಿ ಉಳಿದ ಪಠ್ಯಪುಸ್ತಕಗಳ ವಿತರಣೆಯನ್ನು ಇದೇ ತಿಂಗಳೊಳಗೆ ಸರಬರಾಜು ಮಾಡಲಾಗುವುದು. ಬೇಸಿಗೆ ರಜೆ ಮುಗಿದಿದ್ದು ಮಕ್ಕಳು ಬುಧವಾರ ಶಾಲೆಗಳತ್ತ ಮುಖ ಮಾಡಲಿದ್ದಾರೆ ಎಂದರು. ಮೈಸೂರಿನಲ್ಲಿ ಸುದ್ದಿಗಾರರ ಪ್ರಶ್ನೆಗಳಿಗೆ ಅವರು ಉತ್ತರಿಸಿದರು. ರಾಜ್ಯದಲ್ಲಿ ಹಿಂದಿನ ವರ್ಷವೇ ಪಠ್ಯಪುಸ್ತಕಗಳನ್ನು ಪರಿಷ್ಕರಿಸಲಾಗಿದೆ. ಈ ಬಾರಿ ಒಂದು ಪದ ಅಥವಾ ಸಾಲನ್ನು ಹೊರತುಪಡಿಸಿ ಯಾವುದೇ ದೊಡ್ಡ ಬದಲಾವಣೆಗಳಿಲ್ಲ. ಸರ್ಕಾರ ಪರಿಷ್ಕರಿಸಿ ಶಾಲಾ ಪಠ್ಯಪುಸ್ತಕಗಳು ಶಿಕ್ಷಣ ಇಲಾಖೆ ಅಧಿಕೃತ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅಂತರಾಳದಿಂದ... EDITORIAL

# ನಡುರಸ್ತೆಯಲ್ಲೇಕೆ ನಮಾಜ್ ಮಾಡಬೇಕು?

ಹಿಂದೂ ಧರ್ಮೀಯರು ಕೂಡ ವೈಯಕ್ತಿಕ ಪೂಜೆ, ನಿತ್ಯಪೂಜೆಯಂಥ ಆಚರಣೆಗಳನ್ನು ಮನೆಯೊಳಗೆ, ದೇವರ ಕೋಣೆಯಲ್ಲಿ ಮಾಡಿಕೊಳ್ಳುತ್ತಾರೆ. ಎಂದೂ ಇತರರಿಗೆ ತೊಂದರೆ ಮಾಡುವಂತೆ ನೆರವೇರಿಸುವುದಿಲ್ಲ. ಇನ್ನು ಮುಸ್ಲಿಂ ಸಮುದಾಯದ ಉರೂಸ್‌ನಂಥ ಸಾರ್ವಜನಿಕ ಧಾರ್ಮಿಕ ಕಾರ್ಯಕ್ರಮಗಳಿಗೆ ಎಲ್ಲರೂ ಸೇರುವಂತಹ ವಿಶಾಲ ಮೈದಾನಗಳಲ್ಲಿ ನಡೆಸುವ ಅವಕಾಶವಿದ್ದೇ ಇದೆ. ಇದಕ್ಕೆ ಯಾರೂ ಅಡ್ಡಿಪಡಿಸಿಲ್ಲ. ಮಸೀದಿಗಳಲ್ಲಿ ಪ್ರತಿದಿನ ಐದು ಬಾರಿ ನಡೆಸುವ ಆಜಾನ್ ಅನ್ನು ಕೂಡ ಧ್ವನಿವರ್ಧಕದಲ್ಲಿ ಪ್ರಸಾರ ಮಾಡುವುದನ್ನು ಕೂಡ ಬಹುತೇಕ ಹಿಂದೂಗಳು ಯಾವುದೇ ರೀತಿಯಲ್ಲಿ ಆಕ್ಷೇಪಿಸಿಲ್ಲ. ಹೀಗಿರುವಾಗ ನಡುರಸ್ತೆಯಲ್ಲಿ ನಮಾಜ್ ಮಾಡಿ ಶಾಂತಿ ಕದಡುವುದು ಎಷ್ಟು ಸರಿ?

ಈ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಈ ಘಟನೆ ಬಗ್ಗೆ ಹಿಂದು ಸಂಘಟನೆಗಳು ಹಾಗೂ ಬಿಜೆಪಿ ನಾಯಕರು ಕಿಡಿಕಾರಿದ್ದರು. ಇಂತಹ ಘಟನೆ ಮರುಕಳಿಸಿದರೆ ಅದೇ ವೇಳೆಯಲ್ಲಿ ಸಾಮೂಹಿಕ ಹನುಮಾನ್ ಚಾಲೀಸಾ ಪಠಣ ಮಾಡುವುದಾಗಿ ವಿಶ್ವ ಹಿಂದೂ ಪರಿಷದ್ ಎಚ್ಚರಿಕೆ ನೀಡಿತ್ತು. ಇದರ ಬೆನ್ನಲ್ಲೇ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪೊಲೀಸರ ಸಕ್ರಿಯತೆ ಮೆಚ್ಚಬೇಕಾದ ಸಂಗತಿ. ಕೆಲವರು ಇದನ್ನು ಸಾರ್ವಜನಿಕ ತಾಣಗಳಲ್ಲಿ ನಡೆಯುವ ಹಿಂದೂ ಧಾರ್ಮಿಕ ಆಚರಣೆಗಳ ಜೊತೆಗೆ ಹೋಲಿಸುತ್ತಿದ್ದಾರೆ. ನಮಾಜ್ ಸಂಪೂರ್ಣ ವೈಯಕ್ತಿಕ ಸಂಗತಿ ಹಾಗೂ ಅದೊಂದು ವೈಯಕ್ತಿಕ ಧಾರ್ಮಿಕ ಆಚರಣೆ. ಅದೇನೂ ಸಾರ್ವಜನಿಕ ಪ್ರಾರ್ಥನೆಯಾಗಲೀ, ಸಾರ್ವಜನಿಕ ಸತ್ಯನಾರಾಯಣ ಪೂಜೆಯಂತಹ ಕಾರ್ಯಕ್ರಮವಾಗಲೀ, ಮೊಸರು ಕುಡಿಕೆಯಂಥ ಮನರಂಜನಾ ಕಾರ್ಯಕ್ರಮವಾಗಲೀ ಅಲ್ಲ. ಆದ್ದರಿಂದ ಅದನ್ನು ಹಿಂದೂ ಧಾರ್ಮಿಕ ಆಚರಣೆಗಳ ಜೊತೆಗೆ ಹೋಲಿಸಲು ಸಾಧ್ಯವಿಲ್ಲ. ಯಾವುದೇ ಹಿಂದೂ ಹಬ್ಬಕ್ಕೆ ಸಂಬಂಧಿಸಿದ ಆಚರಣೆಯನ್ನೇ ಮಾಡುವುದಿದ್ದರೂ ರಸ್ತೆಯನ್ನು ಬಂದ್ ಮಾಡಿ ಯಾರೂ ಮಾಡುವುದಿಲ್ಲ. ಸಾರ್ವಜನಿಕ ಮೈದಾನ ಅಥವಾ ವೈಯಕ್ತಿಕ ಖಾಲಿ ಜಾಗಗಳಲ್ಲಿ, ರಸ್ತೆಯಲ್ಲಿ ಯಾವುದೇ ಅಡೆತಡೆಯಾಗದಂತೆ ಆಚರಿಸುತ್ತಾರೆ. ರಾಮನವಮಿಯಲ್ಲಿ ನಡೆಯುವ ಪಾನಕ ಪನಿವಾರ ವಿತರಣೆ ಕೂಡ ರಸ್ತೆಯಲ್ಲಿ ಹೋಗಿ ಬರುವವರ ದಣಿವನ್ನು ತಣಿಸುವಂತೆ ಆಪ್ಯಾಯಮಾನವಾಗಿರುತ್ತದೆಯೇ ಹೊರತು, ಕಿರಿಕಿರಿ ಮಾಡುವಂತೆ ಇರುವುದಿಲ್ಲ. ಆದ್ದರಿಂದ ಇದನ್ನು ಹಿಂದೂ ಆಚರಣೆಗಳ ಜೊತೆಗೆ ಹೋಲಿಸುವುದು ಕುತರ್ಕ.


ಉದಯವಾಹಿನಿ ಚಿತ್ರ

**ಮಂಗಳೂರು ನಗರದ ರಸ್ತೆಯಲ್ಲಿ ನಮಾಜ್ ಮಾಡಿದ ವಿಚಾರಕ್ಕೆ ಬಿಜೆಪಿ ನಾಯಕರು ಹಾಗೂ ಹಿಂದು ಸಂಘಟನೆಗಳು ಅಸಮಾಧಾನ ಹೊರಹಾಕಿದ ಬೆನ್ನಲ್ಲೇ ನಮಾಜ್ ಮಾಡಿದವರ ವಿರುದ್ಧ ಕದ್ರಿ ಠಾಣೆಯ ಪೊಲೀಸರು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಐಪಿಸಿ ಕಲಂ 341, 283, 143 ಜೊತೆಗೆ 149ರಡಿ ಸುಮೋಟೊ ಪ್ರಕರಣ ದಾಖಲಾಗಿದೆ. ಮೇ 24ರಂದು ನಗರದ ಕಂಕನಾಡಿಯ ಮಸೀದಿ ಎದುರು ಯುವಕರ ತಂಡ ನಮಾಜ್ ಮಾಡಿತ್ತು. ಸಾರ್ವಜನಿಕ ಸ್ಥಳದಲ್ಲಿ ಓಡಾಡಲು ಹಾಗೂ ವಾಹನಗಳ ಸುಗಮ ಸಂಚಾರಕ್ಕೆ ಅಡಚಣೆ ಆಗಿತ್ತು.**

ಹಿಂದೂ ಧರ್ಮೀಯರು ಕೂಡ ವೈಯಕ್ತಿಕ ಪೂಜೆ, ನಿತ್ಯಪೂಜೆಯಂಥ ಆಚರಣೆಗಳನ್ನು ಮನೆಯೊಳಗೆ, ದೇವರ ಕೋಣೆಯಲ್ಲಿ ಮಾಡಿಕೊಳ್ಳುತ್ತಾರೆ. ಎಂದೂ ಇತರರಿಗೆ ತೊಂದರೆ ಮಾಡುವಂತೆ ನೆರವೇರಿಸುವುದಿಲ್ಲ. ಇನ್ನು ಮುಸ್ಲಿಂ ಸಮುದಾಯದ ಉರೂಸ್‌ನಂಥ ಸಾರ್ವಜನಿಕ ಧಾರ್ಮಿಕ ಕಾರ್ಯಕ್ರಮಗಳಿಗೆ ಎಲ್ಲರೂ ಸೇರುವಂತಹ ವಿಶಾಲ ಮೈದಾನಗಳಲ್ಲಿ ನಡೆಸುವ ಅವಕಾಶವಿದ್ದೇ ಇದೆ. ಇದಕ್ಕೆ ಯಾರೂ ಅಡ್ಡಿಪಡಿಸಿಲ್ಲ. ಮಸೀದಿಗಳಲ್ಲಿ ಪ್ರತಿದಿನ ಐದು ಬಾರಿ ನಡೆಸುವ ಆಜಾನ್ ಅನ್ನು ಕೂಡ ಧ್ವನಿವರ್ಧಕದಲ್ಲಿ ಪ್ರಸಾರ ಮಾಡುವುದನ್ನು ಕೂಡ ಬಹುತೇಕ ಹಿಂದೂಗಳು ಯಾವುದೇ ರೀತಿಯಲ್ಲಿ ಆಕ್ಷೇಪಿಸಿಲ್ಲ. ಆದರೆ ಯಾವಾಗ ರಸ್ತೆಯಲ್ಲಿ ನಮಾಜ್ ಎಂಬುದು ಹೊಸದಾಗಿ ಆರಂಭವಾಯಿತೋ ಆಗ ಸ್ಥಳೀಯರು ಆತಂಕಕ್ಕೆ ಒಳಗಾಗುವುದು ಸಹಜ. ಇದೊಂದು ನಿತ್ಯದ ಪರಿಪಾಠವೇ ಆಗಿಬಿಟ್ಟರೆ, ಆಗ ನಿತ್ಯವೂ ದಾರಿಹೋಕರು ಕಿರಿಕಿರಿ ಅನುಭವಿಸಬೇಕಾಗುತ್ತದೆ. ಪ್ರತಿದಿನ ನಿರ್ದಿಷ್ಟ ಹೊತ್ತಿಗೆ ಇಂತಿಂಥ ರಸ್ತೆಯಲ್ಲಿ ಹೋಗಬಾರದು ಎಂಬ ಅಘೋಷಿತ ಕರ್ಫ್ಯೂ ಸೃಷ್ಟಿಯಾಗಿಬಿಡುತ್ತದೆ.

ಒಂದು ಸಮಾಜದಲ್ಲಿ ಅಸಹನೆ ಬೇರೂರಲು ಆರಂಭವಾಗುವುದು ಇಂಥ ಸಣ್ಣ, ಆದರೆ ಮೊಳಕೆಯಲ್ಲೇ ನಾವು ಹತ್ತಿಕ್ಕಬೇಕಾದ ಸಂಗತಿಗಳಿಂದಲೇ.

ರಸ್ತೆಯಲ್ಲಿ ನಮಾಜ ಮಾಡುವುದನ್ನು ಸಾಂಪ್ರದಾಯಿಕ ಮುಸ್ಲಿಮರು ಕೂಡ ಸಮರ್ಥಿಸುವುದಿಲ್ಲ. ಮಸೀದಿಯ ಒಳಗೆ ಅಥವಾ ಮನೆಯ ಒಳಗೆ ನಡೆಯಬೇಕಾದ ಒಂದು ಖಾಸಗಿ ಧಾರ್ಮಿಕ ಸಂಗತಿಯನ್ನು ಸಾರ್ವಜನಿಕ ಮಾಡಿದರೆ ಅದರ ಘನತೆ ಕಳೆದುಹೋಗುತ್ತದೆ. ಅದಕ್ಕಿರಬಹುದಾದ ಪವಿತ್ರ ಆವರಣವೂ ನಾಶವಾಗುತ್ತದೆ. ನಮಾಜ್ ಎಂಬುದು ಮುಸ್ಲಿಮರಿಗೆ ಹೇಗೋ ಹಾಗೆಯೇ ಹಿಂದೂಗಳು ಕೂಡ ಗೌರವಿಸಬೇಕಾದ ಸಂಗತಿ. ಆ ಗೌರವ ಇರುವುದರಿಂದಲೇ, ರಸ್ತೆಯಲ್ಲಿ ಮಾಡುವ ಮೂಲಕ ಅದರ ಘನತೆಯನ್ನು ನಾಶ ಮಾಡದಿರಿ ಎಂಬ ಸಂದೇಶವನ್ನು ಹಿಂದೂ ಸಮಾಜದ ಹಲವರು ನೀಡುತ್ತಿದ್ದಾರೆ ಎಂದು ತಿಳಿಯಬೇಕು. ಈ ಮಾತನ್ನು ಮುಸ್ಲಿಂ ಸಮುದಾಯ ಒಪ್ಪಿ ಗೌರವಿಸಿದರೆ ಸಮಾಜದ ಸಾಮರಸ್ಯ ಕದಡದು.

---



# ಮಹಾಭಾರತ

## ದ್ರೋಣಪರ್ವ

• ಹಿಂದಿನ ಸಂಚಿಕೆಯಿಂದ

ಹೋದರು ಅವರು ವೀರರು ಎಂದು ನಾನು ಅಂದುಕೊಂಡದ್ದೆ ಸುಳ್ಳೆ ಎನ್ನಲು, ಕೃಷ್ಣನು, ''ಸುಭದ್ರೆ, ನೀನು ದುಃಖಾತಿರೇಕದಲ್ಲಿ ಹೀಗೆನ್ನುತ್ತಿರುವೆ. ಅಭಿಮನ್ಯುವನ್ನು ಮೋಸದಿಂದ ಕೊಂದರು. ನೇರ ಯುದ್ಧದಲ್ಲಿ ಅವನನ್ನು ಕೊಲ್ಲಲು ಯಾರಿಗೂ ಸಾಧ್ಯವಾಗುತ್ತಿರಲಿಲ್ಲ. ನಾನು ಅರ್ಜುನನೊಡನೆ ದೂರದಲ್ಲಿದ್ದಾಗ ಹೊಡೆದು ಕೊಂದರು. ಧರ್ಮಕ್ಷೇತ್ರವೆನಿಸಿಕೊಂಡಿದ್ದ ಕುರುಕ್ಷೇತ್ರದಲ್ಲಿ ಅಧರ್ಮ ತಲೆದೋರಿದ್ದೇ ಇಂದು. ಪಾಂಡವರು ರಕ್ಷಿಸಲಿಲ್ಲ ಎಂದು ಹೇಗೆ ಹೇಳುತ್ತೀ ಈ ಕೊಲೆಗಾಗಿ ಇವರು ಶೀಘ್ರದಲ್ಲಿಯೇ ತಕ್ಕ ಫಲವನ್ನು ಅನುಭವಿಸುವರು. ನೀನು ಅದನ್ನು ನೋಡುವೆ. ಸಂಜೆಯೊಳಗೆ ಆ ಪಾಪಿ ಜಯದ್ರಥನನ್ನು ಕೊಲ್ಲುವೆನೆಂದು ಅರ್ಜುನನು ಪ್ರತಿಜ್ಞೆ ಮಾಡಿರುವನು. ಜಯದ್ರಥನಿಗೆ ಇದೇ ಕೊನೆಯ ರಾತ್ರಿ, ಈ ಭೂಮಿಯ ಮೇಲೆ. ದುಃಖವನ್ನು ಬಿಡು. ವೀರಕ್ಷತ್ರಿಯನಾದ ನಿನ್ನ ಮಗು ದೇವತೆಯಾಗಿರುವನು. ಈ ಹದಿಮೂರು ದಿನಗಳಲ್ಲಿ ಎಷ್ಟು ಜನ ತಾಯಂದಿರು ತಮ್ಮ ಮಕ್ಕಳನ್ನು ಕಳೆದುಕೊಂಡಿರುವರು ಎಂಬುದನ್ನು ಯೋಚಿಸು. ಅವರೆಲ್ಲ ಧೈರ್ಯ ತೆಗೆದುಕೊಂಡಿಲ್ಲವೇ ನೀನು ಅಳುವುದನ್ನು ಬಿಟ್ಟು ಎದೆಯೊಡೆದುಕೊಂಡಿರುವ ಮಗು ಉತ್ತರೆಗೆ ಸಮಾಧಾನ ಮಾಡು. ಅವಳ ಹೊಟ್ಟೆಯಲ್ಲಿ ಅಭಿಮನ್ಯುವಿನ ಮಗು ಬೆಳೆಯುತ್ತಿರುವುದು. ಅವಳ ಕಣ್ಣೀರನ್ನು ಒರೆಸಿ, ಅವಳಿಗೆ ತಾಯಿಯಾಗಿ ಅವಳನ್ನು ರಕ್ಷಿಸಿಕೋ. ನಿನ್ನ ಮಗನ ಸಾವಿನ ಸೇಡನ್ನು ಅರ್ಜುನ ತೀರಿಸಿಕೊಳ್ಳುತ್ತಾನೆ. ಇದು ಖಂಡಿತಎಂದು ಅವಳನ್ನೆಬ್ಬಿಸಿ ಉತ್ತರೆಯ ಬಳಿಗೆ ಕರೆದುಕೊಂಡು ಹೋದನು. ಅಲ್ಲಿ ಅವಳಿಗೂ ದ್ರೌಪದಿಗೂ ಸಮಾಧಾನ ಹೇಳಿ, ಪುನಃ ಅರ್ಜುನನ ಬಳಿಗೆ ಹಿಂದಿರುಗಿದನು.

ಅರ್ಜುನ ಎಂದಿನಂತೆ ಕೃಷ್ಣ ಪೂಜೆಗಾಗಿ ಎಲ್ಲವನ್ನು ಸಿದ್ಧಪಡಿಸಿಕೊಂಡು ಅವನಿಗಾಗಿ ಕಾಯುತ್ತಿದ್ದನು. ಅವನು ಬಂದೊಡನೆ ಫಲಪುಷ್ಪ ಮಧುಪರ್ಕಗಳಿಂದ ಅವನನ್ನು ಪೂಜಿಸಿದನು. ಕೃಷ್ಣನು, ''ಅರ್ಜುನ, ಮಲಗಿಕೋ ಹೋಗು. ನಾಳಿನ ಯುದ್ಧದಲ್ಲಿ ನಿನ್ನ ವಿಜಯಕ್ಕಾಗಿ ನಾನು ಖಂಡಿತವಾಗಿಯೂ ಶ್ರಮಿಸುತ್ತೇನೆ ಎಂದು ಹೇಳಿ ಅವನನ್ನು ಬೀಳ್ಕೊಟ್ಟು, ದಾರುಕನೊಡನೆ ರಥವನ್ನು ಹತ್ತಿ ತನ್ನ ಡೇರೆಗೆ ಹೊರಟುಹೋದನು.

★ ★ ★ ★

ಮಂಜಿನಂತೆ ಬೆಳ್ಳಗಿದ್ದ ತನ್ನ ಹಾಸಿಗೆಯ ಮೇಲೆ ಮಲಗಿದ್ದ ಕೃಷ್ಣನು ಯೋಚನೆಯಲ್ಲಿ ಮುಳುಗಿದ್ದ. ಮಧ್ಯರಾತ್ರಿಯಾದರೂ ನಿದ್ರೆ ಬಾರದು. ಎದ್ದುಕುಳಿತು ದಾರುಕನಿಗೆ ಹೇಳಿ ಕಳಿಸಿದ. ಅವನು ಬರಲು, ದಾರುಕ, ಸಂಜೆಯೊಳಗೆ ಜಯದ್ರಥನನ್ನು ಕೊಲ್ಲುವೆನೆಂದು ಅರ್ಜುನ ಮಾಡಿದ ಪ್ರತಿಜ್ಞೆಯನ್ನು ನೀನೂ ಕೇಳಿರುವೆ. ದುರ್ಯೋಧನನಿಗೂ ಇದು ಗೊತ್ತು. ಅದಕ್ಕೆ ಅವನು ತಕ್ಕ ರಕ್ಷಣಾವ್ಯವಸ್ಥೆಯನ್ನು ಮಾಡಿರುವನು. ಅರ್ಜುನ ಮಹಾವೀರ; ಏಕಾಂಗಿಯಾಗಿ ಇಂದ್ರನ ಶತ್ರುಗಳನ್ನು ಸಹ ಜಯಿಸಿರುವನು; ಎಲ್ಲಾ ಸರಿಯೇ. ಆದರೂ ನಾಳಿನ ಪ್ರತಿಜ್ಞೆಯನ್ನು ಪೂರೈಸುವುದು ಅವನಿಗೆ ಕಷ್ಟವೆಂದೇ ನನ್ನ ಅನಿಸಿಕೆ. **ಮುಂದುವರಿಯುವುದು...**

---

# ಮನಸೂರೆಗೊಂಡ ಕು|| ಸುನಿಧಿಯ ರಂಗಪ್ರವೇಶ

• ಉದಯವಾಹಿನಿ, ಬೆಂಗಳೂರು

ಮಹಾವೀರ ಲಲಿತಾಕಲಾ ಅಕಾಡೆಮಿ ಮತ್ತು ಸುಮೇರು ಟ್ರಸ್ಟ್‌ನ ಸಂಯುಕ್ತಾಶ್ರಯದಲ್ಲಿ ಗುರು ವಿದುಷಿ ತನುಜಾ ಜೈನ್‌ರವರು ಶಿಷ್ಯೆ ಕುಮಾರಿ ಸುನಿಧಿ ಮಂಜುನಾಥ್‌ರವರ ರಂಗ ಪ್ರವೇಶ ಮಲ್ಲತ್ತಹಳ್ಳಿಯ ಕಲಾಗ್ರಾಮದಲ್ಲಿ ಆಯೋಜಿಸಲಾಗಿತ್ತು. ಡಾ. ರೂಪಾ ಮಂಜುನಾಥ್ ಡಾ. ಮಂಜುನಾಥ್ ಪಾಳ್ಯ ಇವರ ಏಕೈಕ ಪುತ್ರಿಯಾಗಿರುವ ಕುಮಾರಿ ಸುನಿಧಿಯು ಬಹಳ ಸೌಮ್ಯ ಹಾಗೂ ಶಾಂತ ಸ್ವಭಾವದ ಹುಡುಗಿ ತಂಧೆ ತಾಯಿಯರು ಉಪನ್ಯಾಸಕ ವೃತ್ತಿಯಲ್ಲಿರುವುದರಿಂದ ತಮ್ಮ ಅಜ್ಜ-ಜ್ಜಿಯ ಜೊತೆಗೆ ಹೆಚ್ಚು ಸಮಯ ಕಳೆಯುವುದರಿಂದ ಗುರುಹಿರಿಯರೊಂದಿಗೆ ವಿನಮ್ರ ಹಾಗೂ ಪ್ರೀತಿಯ ಸಂಬಂಧವನ್ನು ಹೊಂದಿರುವಳು.

ಕುಮಾರಿ ಸುನಿಧಿ 8ನೇ ವಯಸ್ಸಿಗೆ ಗುರುಗಳಲ್ಲಿ ನೃತ್ಯಾಭ್ಯಾಸ ಆರಂಭಿಸಿ, ಈ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಯನ್ನು ಐಸಿಎಸ್‌ಸಿ ಸಿಲಬಲಸ್‌ನಲ್ಲಿ 94% ಗೂ ಅಧಿಕ ಅಂಕಗೊಳೊಂದಿಗೆ ಉತ್ತೀರ್ಣಳಾಗಿದ್ದಾಳೆ. ಗುರುಗಳಾದ ವಿದುಷಿ ತನುಜಾರವರು ಆಗಸ್ಟ ಸೆಪ್ಟೆಂಬರ್ ಹೊತ್ತಿಗೆ ರಂಗ ಪ್ರವೇಶವನ್ನು ಮಾಡುವ ಉದ್ದೇಶ ಹೊಂದಿದ್ದರು. ಕುಮಾರಿ ಸುನಿಧಿ ತನ್ನ ಪಿಯುಸಿಯನ್ನು ಕಾರ್ಕಳದಲ್ಲಿ ಮುಂದುವರೆಸುವ ಉದ್ದೇಶವಿರುವುದರಿಂದ ಮೇ ತಿಂಗಳಿನಲ್ಲಿಯೇ ಅವಸರವಾಗಿ ನಿರ್ಧರಿಸಿದರು. ರಂಗ ಪ್ರವೇಶಕ್ಕೆ ಸುನಿಧಿಯ ತಯಾರಿ ಪರಿಶ್ರಮ ಶ್ರದ್ಧೆಯನ್ನು ಅವಳ ಗುರುಗಳು ಮುಕ್ತ ಕಂಠದಿಂದ ಹೊಗಳಿದರು. 2 ತಿಂಗಳಕಾಲದಲ್ಲಿ ಸುಮಾರು 5-6 ತಾಸುಗಳ ಸತತ ಅಭ್ಯಾಸದಿಂದ ಅದ್ಭುತವಾದ ನೃತ್ಯ ಪ್ರದರ್ಶನವನ್ನು ಸುನಿಧಿಯು ಮಾಡಿದಳು. ಅವಳ ಹಾವ ಭಾವ ನೃತ್ಯಭಿವ್ಯಕ್ತಿಯು ನುರಿತ ಕಲಾವಿದರಂತಿದ್ದು ವಿಶೇಷವಾಗಿತ್ತು.


ಉದಯವಾಹಿನಿ ಚಿತ್ರ

**ಗುರುಗಳಲ್ಲಿ ನೃತ್ಯಾಭ್ಯಾಸ ಆರಂಭ**

ನೃತ್ಯದ ಸಲುವಾಗಿ ಅವಳ ಪ್ರೀತಿ ಹಾಗೂ ಶ್ರದ್ಧೆ ಶ್ಲಾಘನೀಯ. ನೃತ್ಯಗಾರ್ತಿಯರ ಜೀವನದಲ್ಲಿ ರಂಗ ಪ್ರವೇಶ ಬಹಳ ಪ್ರಮುಖವಾದ ಘಟ್ಟವಾಗಿದ್ದು ಅದು ಕೂಡ ಹಿರಿಯ ಗಣ್ಯ ಸಾಹಿತಿಗಳ ಮುಂದೆ ನಡೆದಿದ್ದು ವಿಶೇಷವಾಗಿತ್ತು. ಕಾರ್ಯಕ್ರಮಕ್ಕೆ ಡಾ. ನರಹಳ್ಳಿ ಬಾಲ ಸುಬ್ರಮಣ್ಯ, ಮಹಾಬಲ ಮೂರ್ತಿ ಕೂಡ್ಲೇಕೆರೆ, ಡಾ. ಪ್ರಮೀಳಾ ಮಾಧವ್, ಡಾ. ಸುರೇಶ ಪಾಟೀಲ, ಡಾ. ಆಶಾದೇವಿ ಎಂ ಎಸ್, ಡಾ. ಕೆ. ಪಿ ಭಟ್, ಡಾ. ಸುಮಿತ್ರ ಎಂ, ಡಾ. ಸಿ.ಬಿ. ಹೊನ್ನುಸಿದ್ಧಾರ್ಥ, ಡಾ. ರಘುರಾಂ ಮೊದಲಾದ ಸಾಹಿತಿಗಳು, ಸುನಿಧಿಯ ಪೋಷಕರ ಗುರುಗಳು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ ಹಾಗೂ ಬೆಂಗಳೂರಿನ ಹಲವಾರು ಕಾಲೇಜುಗಳ ಉಪನ್ಯಾಸಕರ ದೊಡ್ಡ ಬಳಗ, ಸಂಬಂಧಿಕರು ಉಪಸ್ಥಿತರಿದ್ದು ಹರಸಿದರು.

**ಕಾರ್ಯಕ್ರಮವು ಗಣೇಶ ವಂದನೆ ಮತ್ತು ನಟೇಶನ ನಮನದೊಂದಿಗೆ ಆರಂಭವಾಯಿತು. ಮೈಸೂರು ವಾಸುದೇವಾಚಾರ್ಯರ ಕೃತಿ ಜತಿಗೆ ಸೊಗಸಾಗಿ ನರ್ತಿಸಿದಳು. ನಂತರ ಕಾರ್ಯಕ್ರಮಕ್ಕೆ ವಿಶೇಷ ಅತಿಥಿಗಳಾಗಿ ಆಗಮಿಸಿದ್ದ ಸಾರಸ್ವತ ಲೋಕದ ದಿಗ್ಗಜರಾದ ನಾಡೋಜ ಹಂಪನಾಗರಾಜಯ್ಯ, ಮತ್ತು ಪದ್ಮಶ್ರೀ ಪುರಸ್ಕೃತರಾದ ಪ್ರೊ.ದೊಡ್ಡರಂಗೇಗೌಡರು ಹಾಗೂ ಕಲಾ ನಿರ್ದೇಶಕರು ಶ್ರೀ ಜೆ.ಬಿ ಸರವಣನ್ ಪಿಳ್ಳೈ ಇವರುಗಳ ಉಪಸ್ಥಿತಿ ಮತ್ತು ವೇದಿಕೆಯ ಕಾರ್ಯಕ್ರಮ ಗುರುವಂದನೆ ನಡೆಯಿತು.**

ನಾಡೋಜ ಹಂಪನಾ ಬ್ರಹ್ಮ ಮಾಡಿದ ಪ್ರಪಂಚವನ್ನು ಸರಸ್ವತಿ ಮಣಿ ಮಾಲೆ ಮಾಡಿ ಕೊಂಡು ಜಪ ಮಾಡುತ್ತಿದ್ದಾಳೆ ಆ ಸರಸ್ವತಿಯು ಮೊಮ್ಮಗಳ ಸಮಾನವಾಗಿರುವ ಕುಮಾರಿ ಸುನಿಧಿಗೆ ಒಳ್ಳೆಯದಾಗಲಿ ಎಂದು ಹರಸಿದರು.

ಪದ್ಮಶ್ರೀ ಪುರಸ್ಕೃತ ನಾಡಿನ ಹೆಮ್ಮೆಯ ಕವಿ ಪ್ರೊ. ದೊಡ್ಡರಂಗೇಗೌಡರು ಸಾಹಿತ್ಯ ಮತ್ತು ಸಾಂಸ್ಕೃತಿಕ ಸಮ್ಮಿಲನ ಆಗಿದೆ. ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ಮರೆಯದೆ ಮುನ್ನಡೆಸುವವರು ಯಶಸ್ಸು ಪಡೆದಿದ್ದಾರೆ.ದೊಡ್ಡ ಆಲದ ಮರಕ್ಕೆ ಸಾವಿರದ ಬೀಳಲು ಇರುವಂತೆ ನೃತ್ಯ ಸುನಿಧಿಗೆ ಉತ್ತಮ ಭವಿಷ್ಯ ಇದೆ ಎಂದರು. ಕುಮಾರಿ ಸುನಿಧಿಯ ಕೀರ್ತಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳಗಲಿ ಎಂದು ಹರಸಿದರು.


ರೂಪ ಮಧುಸೂದನ್ ನಿರೂಪಣೆ ಯ ಕಾರ್ಯಕ್ರಮದಲ್ಲಿ ತಮ್ಮ ಸುಮಧುರ ಗಾನದಿಂದ ನೃತ್ಯಕ್ಕೆ ನೆರವಾದ ಗಾಯಕ ವಿದ್ವಾನ್ ಬಾಲಸುಬ್ರಹ್ಮಣ್ಯ ಶರ್ಮ, ಮೃದಂಗ ನುಡಿಸಿದ ವಿದ್ವಾನ್ ಜಿ ಎಸ್ ನಾಗರಾಜ್, ಕೊಳಲು ನಾದದೊಂದಿಗೆ ಜೊತೆಯಾದ ವಿದ್ವಾನ್ ಮಹೇಶ ಸ್ವಾಮಿ, ವೀಣಾನಾದ ಮಾಡಿದ ವಿದ್ವಾನ್ ಪ್ರಶಾಂತ್ ರುದ್ರಪಟ್ಟಣ ನಾದಲಯ ಪುಂಜದಿಂದ ಜೊತೆಗಿದ್ದ ವಿದ್ವಾನ್ ಶ್ರೀ ಪ್ರಸನ್ನ ಕುಮಾರ್ ಅವರಿಗೂ ಸನ್ಮಾನ ಮಾಡಲಾಯಿತು. ಕಾರ್ಯಕ್ರಮದ ಉತ್ತರಾರ್ಧದಲ್ಲಿ ಶಾರದಾ ಸ್ತುತಿ, ಪುರಂದರ ದಾಸರ ಕೀರ್ತನೆಗೆ ಪ್ರಿಯತಮನನ್ನು ಕಾಯುವ ನಾಯಕಿಯ ನೃತ್ಯ ಕೊನೆಗೆ ತಿಲ್ಲಾನ ಹಾಗೂ ಮಂಗಳ ಗೀತೆಯನ್ನು ಪ್ರಸ್ತುತಿ ಪಡಿಸಲಾಯಿತು. ಎಲ್ಲ ನೃತ್ಯ ಸಂಯೋಜನೆಯನ್ನು ಗುರು ವಿದುಷಿ ತನುಜಾ ಜೈನರವರೇ ಮಾಡಿದ್ದು ವಿಶೇಷವಾಗಿತ್ತು.

---

# ಬಿತ್ತನೆ ಬೀಜದ ಬೆಲೆ ಏರಿಕೆಯಾಗಿರುವುದಕ್ಕೆ ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಈ ಬಾರಿ ರಾಜ್ಯದಲ್ಲಿ ಬಿತ್ತನೆ ಬೀಜದ ಬೆಲೆ ಏರಿಕೆ ಬಗ್ಗೆ ವಿಪಕ್ಷಗಳಿಂದ ಟೀಕೆಗಳು ಕೇಳಿಬರುತ್ತಿರುವ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಬೆಲೆ ಏರಿಕೆಗೆ ಸ್ಪಷ್ಟನೆ ನೀಡಿದ್ದಾರೆ. ಈ ಬಗ್ಗೆ ಅವರು ನೀಡಿದ ಮಾಧ್ಯಮ ಪ್ರಕಟಣೆ ಇಲ್ಲಿದೆ. 2023-24ನೇ ಸಾಲಿನ ಭೀಕರ ಬರಗಾಲದಿಂದಾಗಿ ರಾಜ್ಯದಲ್ಲಿ ಬೀಜೋತ್ಪಾದನೆ ಗಣನೀಯವಾಗಿ ಕುಂಠಿತವಾಗಿದ್ದು, ಬೀಜೋತ್ಪಾದಕರಿಂದ ಖರೀದಿಸುವ ಬಿತ್ತನೆ ಬೀಜದ ದರಗಳು ಸಹ ಗಣನೀಯವಾಗಿ ಏರಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಬಿತ್ತನೆ ಬೀಜದ ಮಾರಾಟದ ದರ ಏರಿಕೆಯಾಗಿದೆ. ಈ ದರ ಏರಿಕೆ ಮುಂಗಾರು ಬೆಳೆ ಬೆಳೆಯುವ ಎಲ್ಲಾ ರಾಜ್ಯಗಳಲ್ಲಿಯೂ ಆಗಿದ್ದು ಉಳಿದ ರಾಜ್ಯಗಳಿಗೆ ಹೋಲಿಸಿದರೆ ನಮ್ಮಲ್ಲಿ ಬೀಜಗಳ ದರ ಕಡಿಮೆ ಇದೆ. ಬಿತ್ತನೆ ಬೀಜಗಳ ಮಾರಾಟ ದರಗಳನ್ನು ನಿಗದಿಪಡಿಸುವ ಸಂದರ್ಭಗಳಲ್ಲಿ ಬಿತ್ತನೆ ಬೀಜ ಖರೀದಿ ದರಗಳು ಹಾಗೂ ಗರಿಷ್ಠ ೦ಕಒಆ ಮಾರಾಟ ದರಗಳನ್ನು ಆಧಾರವಾಗಿ ಪರಿಗಣಿಸಲಾಗುತ್ತದೆ. 2022-23ನೇ ಸಾಲಿಗೆ ಹೋಲಿಸಿದಾಗ 2023-24ನೇ ಸಾಲಿನಲ್ಲಿ ವಿವಿಧ ಬೆಳೆಗಳ ಖರೀದಿ ದರಗಳಲ್ಲಿ ಗರಿಷ್ಠ ಶೇ.59.58ರಷ್ಟು ವ್ಯತ್ಯಾಸವಾಗಿರುತ್ತದೆ. ರೈತರು ತಮ್ಮ ಜಮೀನಿನಲ್ಲಿಯೇ ಬೀಜಗಳನ್ನು ಉತ್ಪಾದನೆ ಮಾಡುತ್ತಾರೆ. ಇದನ್ನು ಕರ್ನಾಟಕ ರಾಜ್ಯ ಬೀಜ ನಿಗಮ ನಿ. ರಾಷ್ಟ್ರೀಯ ರಾಜ್ಯ ಬೀಜ ನಿ. ಕರ್ನಾಟಕ ಎಣ್ಣೆಬೀಜ ಬೆಳೆಗಾರರ ಮಹಾ ಮಂಡಳಿ, ಖಾಸಗಿ ಸಂಸ್ಥೆಗಳು ಕೈಗೊಂಡು ಸರಬರಾಜು ಮಾಡುತ್ತವೆ. ಈ ಬಾರಿ ಹೆಸರು ಬೆಳೆಯ ಬಿತ್ತನೆ ಬೀಜಗಳ ಎಲ್-1 ದರವು ಶೇ.48.5, ಉದ್ದು ಬೆಳೆಯ ದರವು ಶೇ.37.72, ತೊಗರಿ ಬೆಳೆಯ ವಿವಿಧ ತಳಿಗಳ ಬಿತ್ತನೆ ಬೀಜಗಳ ದರದಲ್ಲಿ ಶೇ.28.29 ರಿಂದ 37.69ರಷ್ಟು ಮತ್ತು ಜೋಳದ ಬೆಳೆಯ ಎಲ್-1 ದರವು ಶೇ.7.66 ರಿಂದ ಶೇ.33.33ರಷ್ಟು ಹೆಚ್ಚಾಗಿರುತ್ತದೆ.


ಉದಯವಾಹಿನಿ ಚಿತ್ರ

ಬೀಜಗಳ ಖರೀದಿ ದರದಲ್ಲಿನ ಹೆಚ್ಚಳದ ಮೊತ್ತವು ಬೀಜೋತ್ಪಾದನೆಯಲ್ಲಿ ತೊಡಗಿರುವ ರೈತರಿಗೆ ವರ್ಗಾವಣೆಯಾಗಿರುತ್ತದೆ ಎನ್ನುವುದು ಗಮನಾರ್ಹ ಅಂಶವಾಗಿದೆ. ಇದಲ್ಲದೆ ಕೆಲ ಬಿತ್ತನೆ ಬೀಜದ ದರದಲ್ಲಿ ಇಳಿಕೆ, ಯಥಾಸ್ಥಿತಿ ಕೂಡ ಕಂಡುಬಂದಿದೆ. 2024ರ ಮುಂಗಾರು ಹಂಗಾಮಿನ ಸೋಯಾಅವರೆ ಬಿತ್ತನೆ ಬೀಜದ ದರವು 2023ರ ಮುಂಗಾರು ಹಂಗಾಮಿನ ಎಲ್-1 ದರಗಳ ಹೋಲಿಕೆಯಲ್ಲಿ ಶೇ.8ರಷ್ಟು ಕಡಿತಗೊಂಡಿರುತ್ತದೆ. ಸೂರ್ಯಕಾಂತಿ ಬಿತ್ತನೆ ಬೀಜದ ದರ ಕಳೆದ ಸಾಲಿನಷ್ಟೇ ಇದ್ದು ಯಾವುದೇ ಬದಲಾವಣೆ ಇರುವುದಿಲ್ಲ. ಬಿ.ಟಿ. ಹತ್ತಿ ಬಿತ್ತನೆ ಬೀಜಗಳನ್ನು ರಾಜ್ಯ ಸರ್ಕಾರದ ಇಲಾಖಾ ವತಿಯಿಂದ ರಿಯಾಯತಿ ದರದಲ್ಲಿ ವಿತರಣೆ ಮಾಡುತ್ತಿರುವುದಿಲ್ಲ.

ಬಿ.ಟಿ. ಹತ್ತಿ ಬಿತ್ತನೆ ಬೀಜಗಳ ಗರಿಷ್ಠ ದರಗಳನ್ನು ಕೇಂದ್ರ ಸರ್ಕಾರದ ವತಿಯಿಂದಲೇ ನಿಗದಿಪಡಿಸಲಾಗುತ್ತದೆ. ರಾಜ್ಯದಲ್ಲಿನ ವಿವಿಧ ಬೆಳೆಗಳ ಬಿತ್ತನೆ ಬೀಜಗಳಲ್ಲಿನ ದರ ವ್ಯತ್ಯಾಸವು 2023ರ ಹೋಲಿಕೆಯಲ್ಲಿ ಈ ಬಾರಿ ಗರಿಷ್ಠ ಶೇ.48.50ರಷ್ಟಿದೆ. ಆದಾಗ್ಯೂ, ನೆರೆಯ ರಾಜ್ಯಗಳಲ್ಲಿನ ಪ್ರಸಕ್ತ ಸಾಲಿನ ಬಿತ್ತನೆ ಬೀಜಗಳ ದರಗಳ ಏರಿಕೆಯ ಹೋಲಿಕೆಯಲ್ಲಿ ರಾಜ್ಯದಲ್ಲಿನ ಬಿತ್ತನೆ ಬೀಜಗಳ ದರದ ಏರಿಕೆಯು ಕಡಿಮೆಯಾಗಿರುತ್ತದೆ. ಉದಾಹರಣೆಗೆ ಮಹಾರಾಷ್ಟ್ರದಲ್ಲಿ ಸೋಯಾಅವರೆ ಬೆಳೆಗೆ ಪ್ರತಿ ಕ್ವಿಂಟಾಲ್‌ಗೆ ಎಲ್-1 ದರವು ರೂ.8500/- ನಿಗದಿಯಾಗಿದ್ದು ಕರ್ನಾಟಕದಲ್ಲಿ ಇದು ರೂ.7270/- ನಿಗದಿಯಾಗಿದೆ. ಅದೇ ರೀತಿ, ತೊಗರಿ ಬೆಳೆಗೆ ಮಹಾರಾಷ್ಟ್ರದಲ್ಲಿ ಪ್ರತಿ ಕ್ವಿಂಟಾಲ್‌ಗೆ ರೂ.25,000/- ಇದ್ದು ಕರ್ನಾಟಕದಲ್ಲಿ ಪ್ರತಿ ಕ್ವಿಂಟಾಲ್‌ಗೆ ರೂ.17,900/- ನಿಗದಿಪಡಿಸಲಾಗಿದೆ. ಹೆಸರು ಮತ್ತು ಜೋಳದ ಬೆಳೆಗೆ ಪ್ರತಿ ಕ್ವಿಂಟಾಲ್‌ಗೆ ಮಹಾರಾಷ್ಟ್ರದಲ್ಲಿ ಕ್ರಮವಾಗಿ ರೂ.23,500/- ರೂ. 14,000/- ಇದ್ದು ಕರ್ನಾಟಕದಲ್ಲಿ ಕ್ರಮವಾಗಿ ರೂ.18,600/- ರೂ.12,500/- ನಿಗದಿಪಡಿಸಲಾಗಿದೆ. ಈ ಹೋಲಿಕೆಯಲ್ಲಿ ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜಗಳ ದರಗಳು ಗಣನೀಯವಾಗಿ ಕಡಿಮೆ ಇರುವುದು ಕಂಡುಬರುತ್ತದೆ. ರಾಜ್ಯದಲ್ಲಿ ಮುಂಗಾರು ಪೂರ್ವ ಮಳೆಯು ಉತ್ತಮವಾಗಿ ಆಗುತ್ತಿದ್ದು ಕೃಷಿ ಚಟುವಟಿಕೆಗಳು ಗರಿಗೆದರಿವೆ. ಇದೇ ವೇಳೆ, ಬಿತ್ತನೆ ಬೀಜಗಳ ದರಗಳು ಏರಿಕೆಯಾಗಿರುವ ಬಗ್ಗೆ ವಿವಿಧ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು ಈ ಕುರಿತು ಕೃಷಿ ಇಲಾಖೆಯು ಸ್ಪಷ್ಟೀಕರಣ ನೀಡಿದ್ದು ವಾಸ್ತವ ಸ್ಥಿತಿಯನ್ನು ವಿವರಿಸಿದೆ.

---

# 13ನೇ ನಂಬರ್ ಬಗ್ಗೆ ಇರತಕ್ಕಂತಹ ಭಯ



ವಿಶ್ವಾಸ್.ಡಿ. ಗೌಡ

• ಉದಯವಾಹಿನಿ, ವಿಶೇಷ

ಮಾನವರು ಆಧುನಿಕವಾಗಿ ಎಷ್ಟೇ ಮುಂದುವರಿದರೂ ಇಂದಿಗೂ ಕೆಲವೊಂದು ನಂಬಿಕೆಗಳ ಹಿಂದೆ ಬಿದ್ದಿದ್ದಾರೆ. ಈ ನಂಬಿಕೆಗಳು ಕೇಳಲು ಒಂದು ರೀತಿ ವಿಚಿತ್ರ ಎನಿಸಿದರೂ ಸಹ ಅದರ ಹಿಂದಿನ ಕಾರಣ ತಿಳಿದರೆ ನಿಜಕ್ಕೂ ನಮ್ಮನ್ನು ಅಚ್ಚರಿಗೆ ದೂಡುತ್ತದೆ. ಅಂಥದ್ದೆ ಒಂದು ಅಚ್ಚರಿಯ ನಂಬಿಕೆಯನ್ನು ನಾವಿಂದು ನಿಮಗೆ ಪರಿಚಯಿಸುತ್ತೇವೆ.

ದೇಶದಲ್ಲಾಗಿರಲಿ ಅಥವಾ ವಿದೇಶಗಳಲ್ಲಾಗಿರಲಿ ಕೆಲವೆಡೆ ಹೋಟೆಲ್‌ಗಳಲ್ಲಿ 13ನೇ ನಂಬರ್ನ ಮಹಡಿಯಾಗಲಿ ಅಥವಾ ರೂಮ್ ಆಗಲಿ ಇರುವುದಿಲ್ಲ. 15 ರಿಂದ 20 ಅಂತಸ್ತು ಕಟ್ಟಡಗಳಿದ್ದರೂ ಅಲ್ಲಿ 13ನೇ ನಂಬರ್ ಅನ್ನು ನಮೂದಿಸುವುದಿಲ್ಲ. 11, 12ರ ಬಳಿಕ 13ರ ಬದಲಾಗಿ 14 ಎಂದು ಹೋಟೆಲ್ ರೂಮ್‌ಗಳಲ್ಲಿ ಅಥವಾ ಮಹಡಿಗಳಲ್ಲಿ ನಮೂದಿಸಿರುತ್ತಾರೆ.

ಅನೇಕ ವಿಮಾನಯಾನ ಸಂಸ್ಥೆಗಳು ಮತ್ತು ಇತರ ವ್ಯವಹಾರಗಳು ಕೂಡ 13 ನಂಬರ್ ಬಳಸುವುದನ್ನು ತಪ್ಪಿಸುತ್ತವೆ. ಅನೇಕ ಗಗನಚುಂಬಿ ಕಟ್ಟಡಗಳು 13ನೇ ಮಹಡಿಯನ್ನು ಹೊಂದಿರುವುದಿಲ್ಲ ಮತ್ತು ಎಲಿವೇಟರ್‌ಗಳು ಸಹ ಆಗಾಗ 12 ಮತ್ತು 14ನೇ ಮಹಡಿಗಳ ನಡುವೆ ಜಿಗಿಯುತ್ತವೆ. ಆಸ್ಪತ್ರೆಗಳು ಮತ್ತು ವಿಮಾನ ನಿಲ್ದಾಣಗಳಲ್ಲಿ ಸಾಧ್ಯವಿರುವಲ್ಲೆಲ್ಲಾ 13 ಸಂಖ್ಯೆಯನ್ನು ತಪ್ಪಿಸಲಾಗುತ್ತದೆ. ಏಕೆ ಹೀಗೆ ಎಂಬ ಪ್ರಶ್ನೆ ನಿಮಗೆ ಮೂಡಬಹುದು ಅದರ ಹಿಂದಿನ ಅಚ್ಚರಿಯ ಕಾರಣ ಮುಂದಿದೆ ಓದಿ. 13ನೇ ನಂಬರ್ ಬಳಸದೇ ಇರುವುದಕ್ಕೆ ಟ್ರಿಸ್ಕೈಡೆಕಾಫೋಬಿಯಾ ಎಂದು ಕರೆಯುತ್ತಾರೆ. ಇದರರ್ಥ 13ನೇ ನಂಬರ್ ಮೇಲಿನ ಭಯ ಎಂಬುದಾಗಿದೆ.

**ಟ್ರಿಸ್ಕೈಡೆಕಾ ಫೋಬಿಯ**

ಅಂದರೆ, 13ನೇ ನಂಬರ್ ದುರಾದೃಷ್ಟ ಅಥವಾ ಸಾವಿನ ಸಂಖ್ಯೆ ಎಂಬ ನಂಬಿಕೆ ಜನರಲ್ಲಿದೆ. ಇನ್ನೂ 1800ರ ದಶಕದ ಉತ್ತರಾರ್ಧದಲ್ಲಿ, ಓಜಾ ಬೋರ್ಡ್‌ಗಳು ಹುಟ್ಟಿಕೊಂಡವು. ಸತ್ತವರೊಂದಿಗೆ ಸಂಪರ್ಕ ಸಾಧಿಸಲು ಮಾರ್ಗವನ್ನು ಹುಡುಕುತ್ತಿರುವವರಿಗೆ 13ನೇ ಸಂಖ್ಯೆಯು ಒಂದು ಪೋರ್ಟಲ್ ಆಗಿತ್ತು ಎಂದು ನಂಬಲಾಗಿದೆ. ವಾಸ್ತವವಾಗಿ, ಇದು ಒಬ್ಬರ ಆರೋಗ್ಯದ ಮೇಲೆಯೂ ನಕಾರಾತ್ಮಕ ಪರಿಣಾಮ ಬೀರುತ್ತದೆ ಎಂದು ಹಲವಾರು ಅಧ್ಯಯನಗಳು ಕಂಡುಕೊಂಡಿವೆ. 13ನೇ ಸಂಖ್ಯೆಯಿಂದ ಭಯಭೀತರಾಗಿರುವ ಜನರು ಹೆಚ್ಚಿನ ಮಟ್ಟದ ಉದ್ವೇಗ ಮತ್ತು ಆತಂಕವನ್ನು ಹೊಂದಿರುತ್ತಾರೆ ಎಂದು ಸಾಬೀತಾಗಿದೆ. ನ್ಯೂಯಾರ್ಕ್ ನಗರದ ಅನೇಕ ಕಟ್ಟಡಗಳು 13ನೇ ಮಹಡಿಯನ್ನು ''12b'' ಅಥವಾ ''14a'' ಎಂದು ಉಲ್ಲೇಖಿಸುತ್ತವೆ. ಸಮೀಕ್ಷೆಯೊಂದರ ಪ್ರಕಾರ 13ಕ್ಕೂ ಹೆಚ್ಚಿನ ಮಹಡಿಗಳಿರುವ 629 ಕಟ್ಟಡಗಳಲ್ಲಿ ಕೇವಲ 55 ಮಾತ್ರ ಕಟ್ಟಡಗಳಲ್ಲಿ ಮಾತ್ರ 13ನೇ ಮಹಡಿ ಎಂದು ನಮೂದಿಸಲಾಗಿದೆ. ಆದರೆ, ಬಹುತೇಕ ಕಟ್ಟಡಗಳಲ್ಲಿ 13ನೇ ನಂಬರ್ ಇಲ್ಲ. ಭಾರತದಲ್ಲಿಯೂ ಕೆಲವು ಕಟ್ಟಡಗಳು ಮತ್ತು ಹೋಟೆಲ್‌ಗಳಲ್ಲಿ ಕೊಠಡಿ ಸಂಖ್ಯೆ 13 ಕಂಡುಬಂದಿಲ್ಲ. ಅದೇ ರೀತಿ, ಜಪಾನ್‌ನಲ್ಲಿ 9, ಇಟಲಿಯಲ್ಲಿ 17 ಮತ್ತು ಚೀನಾದಲ್ಲಿ 4 ಅನ್ನು ದುರದೃಷ್ಟಕರವೆಂದು ಪರಿಗಣಿಸಲಾಗುತ್ತದೆ.



**ಕಾರಣವೇನು?**

**ಈ 13ನೇ ಸಂಖ್ಯೆಯ ಮೇಲಿರುವ ಭಯವು ಕೇವಲ 13ನೇ ಶುಕ್ರವಾರದಂದು ಜನರು ಹೊರಗೆ ಹೋಗುವುದನ್ನು ತಪ್ಪಿಸಲು ಇರುವ ಸಣ್ಣ ಸಮಯದ ಭಯವಲ್ಲ. ಯಾವಾಗೆಲ್ಲ 13ನೇ ನಂಬರ್ ಕಿವಿಗೆ ಬೀಳುತ್ತದೋ ಆಗೆಲ್ಲ ಜನರು ಹೆದರುತ್ತಾರೆ. ಕಾರಣ ಏನೆಂದರೆ, 13ನೇ ನಂಬರ್ ಸಾವಿನ ನಂಬರ್ ಅಂತೆ. ಕಿಶ್ಚಿಯನ್ನರ ದೇವರು ಜೀಸಸ್ ಶುಕ್ರವಾರ 13ನೇ ತಾರೀಖಿನಂದು ಮೃತಪಟ್ಟರು. ಹೀಗಾಗಿ ಈ ಸಂಖ್ಯೆಯನ್ನು ದುರಾದೃಷ್ಟ ಮತ್ತು ಅಪಶಕುನ ಎಂದು ಕರೆಯಲಾಗುತ್ತದೆ. ಹೀಗಾಗಿ ಕಟ್ಟಡದ 13ನೇ ಮಹಡಿಯನ್ನು ಅನೇಕ ಹೋಟೆಲ್‌ಗಳಲ್ಲಿ ಸ್ಕಿಪ್ ಮಾಡುವ ಮೂಲಕ ಭಯವನ್ನು ಹೋಗಲಾಡಿಸುವ ಪ್ರಯತ್ನ ಮಾಡಲಾಗುತ್ತದೆ.**

---

# ಸಚಿವ ನಾಗೇಂದ್ರ ರಾಜೀನಾಮೆ, ಕೇಂದ್ರ ಏಜೆನ್ಸಿಯಿಂದ ತನಿಖೆಗೆ ಗೋವಿಂದ ಕಾರಜೋಳ ಆಗ್ರಹ

## ■ ಮಾಜಿ ಉಪ ಮುಖ್ಯಮಂತ್ರಿ, ಗೋವಿಂದ ಕಾರಜೋಳ ಆಗ್ರಹ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿ ಇಲಾಖಾ ಸಚಿವ ನಾಗೇಂದ್ರ ಅವರು ಕೂಡಲೇ ರಾಜೀನಾಮೆ ಕೊಟ್ಟು ನಿಷ್ಪಕ್ಷಪಾತ ತನಿಖೆಗೆ ಅವಕಾಶ ಮಾಡಿ ಕೊಡಬೇಕು ಎಂದು ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರು ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರಕಾರದ ತನಿಖಾ ಸಂಸ್ಥೆಗಳಿಂದ ಇದರ ಸಮಗ್ರ ನಿಷ್ಪಕ್ಷಪಾತ ತನಿಖೆ ಮಾಡಲು ಅಸಾಧ್ಯ. ಆದ್ದರಿಂದ ಕೇಂದ್ರ ಸರಕಾರದ ಏಜೆನ್ಸಿಗಳ ಮೂಲಕ ತನಿಖೆ ನಡೆಸಿ ಎಂದು ಒತ್ತಾಯಿಸಿದರು.

ಆತ್ಮಹತ್ಯೆ ಮಾಡಿಕೊಂಡ ಚಂದ್ರಶೇಖರ್ ಅವರು ಮಂತ್ರಿಗಳ ಮೌಖಿಕ ಆದೇಶದನ್ವಯ ಹಣ ವರ್ಗಾವಣೆ ಮಾಡಿದ್ದಾಗಿ ಬರೆದಿದ್ದಾರೆ. ಹಾಗಾದರೆ ಎಫ್‌ಐಆರ್‌ನಲ್ಲಿ ಸಚಿವರ ಹೆಸರು ಯಾಕೆ ಬಂದಿಲ್ಲ ಎಂದು ಪ್ರಶ್ನಿಸಿದರು. ಇದು ಸಂಶಯಕ್ಕೆ ಎಡೆ ಮಾಡಿಕೊಟ್ಟಿದೆ ಎಂದರು. ಸರಕಾರದ ಅಧೀನ ಸಂಸ್ಥೆಯಾದ ಸಿಐಡಿಯವರು ಮುಖ್ಯಮಂತ್ರಿಗಳು, ಸಚಿವರ ಬಗ್ಗೆ ತನಿಖೆ ಮಾಡಲು ಎಷ್ಟರಮಟ್ಟಿಗೆ ಸಾಧ್ಯ ಎಂದ ಅವರು, ನೈತಿಕತೆ ಇದ್ದರೆ ಸಚಿವರು ರಾಜೀನಾಮೆ ಕೊಡಬೇಕಿತ್ತು ಎಂದು ತಿಳಿಸಿದರು. ಬ್ಯಾಂಕ್ ಖಾತೆಯು ಎಂ.ಡಿ. ಮತ್ತು ಅಕೌಂಟ್ಸ್ ಅಧಿಕಾರಿಯ ಜಂಟಿ ಖಾತೆಯಾಗಿರುತ್ತದೆ. ಮಾರ್ಚ್‌ನಲ್ಲಿ ಹಣ ವರ್ಗಾವಣೆ ಆಗಿದೆ. ಮಾರ್ಚ್ 4ರಂದು 25 ಕೋಟಿ, 6ರಂದು 25 ಕೋಟಿ, ಮಾರ್ಚ್ 21ರಂದು 44 ಕೋಟಿ ವರ್ಗಾವಣೆ ಆಗಿದೆ. ರಾಜ್ಯ ಹುಜೂರ್ ಖಜಾನೆಯಿಂದ 43.33 ಕೋಟಿ ವರ್ಗಾವಣೆ ಆಗಿದೆ. ಬಳಿಕ ಮೇ 21ರಂದು 50 ಕೋಟಿ ವರ್ಗಾವಣೆ ಆಗಿದೆ ಎಂದು ವಿವರಿಸಿದರು. ಜಂಟಿ ಖಾತೆ ಇದ್ದಾಗ ಹೇಗೆ ವರ್ಗಾವಣೆ ಆಗಿದೆ? ಬ್ಯಾಂಕಿನ ಪ್ರತಿ ತಿಂಗಳ ವಿವರ- ಹುಜೂರ್ ಖಜಾನೆಯ ವಿವರವನ್ನು ಪುನರ್ ಪರಿಶೀಲಿಸಲಿಲ್ಲವೇ? ಎಂದ ಅವರು, ಮಾರ್ಚ್ 31ರಂದು ಹಣಕಾಸು ವರ್ಷ ಮುಕ್ತಾಯ ಆದ ಬಳಿಕ ಎಂ.ಡಿ. ಮತ್ತು ಇಲಾಖೆಯ ಸರಕಾರದ ಮಟ್ಟದ ಅಧಿಕಾರಿಗಳು ಅದನ್ನು ಪರಿಶೀಲಿಸಬೇಕಿತ್ತು. ಹಣ ಖರ್ಚಾದ ಕುರಿತು ಪರಿಶೀಲನಾ ಸಭೆ ಮಾಡಿಲ್ಲವೇ ಸಭೆ ಮಾಡಿಲ್ಲವೆಂದಾದರೆ ಸರಕಾರವೇ ಇದರಲ್ಲಿ ಶಾಮೀಲಾಗಿರುವುದೇ ಕಾರಣ; ಸರಕಾರವು ಜವಾಬ್ದಾರಿ ಯಿಂದ ನುಣುಚಿಕೊಳ್ಳಲು ಇದನ್ನು ಮುಚ್ಚಿಟ್ಟಿದ್ದಾರೆ ಎಂದು ಆರೋಪಿ ಸಿದರು.

ಈ ವಿಷಯದಲ್ಲಿ ತೀವ್ರ ಹೋರಾಟ ಮಾಡುವುದಾಗಿ ಅವರು ತಿಳಿಸಿದರು.

ಹೋರಾಟದ ರೂಪುರೇಷೆಯನ್ನು ಶೀಘ್ರವೇ ಪಕ್ಷ ಪ್ರಕಟಿಸಲಿದೆ ಎಂದು ಪ್ರಶ್ನೆಗೆ ಉತ್ತರ ಕೊಟ್ಟರು. ನಿರಪರಾಧಿ ಕೆ.ಎಸ್.ಈಶ್ವರಪ್ಪನವರನ್ನು ಬಲಿ ಪಡೆದಿರಿ; ಅವತ್ತು ನೀವು ಪ್ರತಿಪಕ್ಷದಲ್ಲಿ ಇದ್ದಾಗ ಯಾವ ರೀತಿ ಮಾತಾಡಿದ್ದೀರಿ ಎಂಬುದನ್ನು ನೆನಪಿಸಿಕೊಳ್ಳಿ ಎಂದು ಗೋವಿಂದ ಕಾರಜೋಳ ಅವರು ಮುಖ್ಯಮಂತ್ರಿಗಳನ್ನು ಆಗ್ರಹಿಸಿದರು.



ಉದಯವಾಹಿನಿ ಚಿತ್ರ


**ಮೃತರ ಬಳಿ ಇದ್ದ ಪೆನ್ ಡ್ರೈವ್ ಮತ್ತು ಲ್ಯಾಪ್ ಟಾಪಿನಲ್ಲಿದ್ದ ಮಾಹಿತಿಯನ್ನು ಸಾರ್ವಜನಿಕರ ಮುಂದಿಡಬೇಕು. ಸತ್ಯವಂತರು ಎಂದು ಹೇಳಿಕೊಳ್ಳುವ ಇವರು ತನಿಖೆಗೆ ಮುಂದಾಗಬೇಕು ಎಂದು ತಿಳಿಸಿದರು. ಎಸ್‌ಸಿ, ಎಸ್‌ಟಿಗಳಿಗೆ ಮೀಸಲಿಟ್ಟ 24 ಸಾವಿರ ಕೋಟಿ ಹಣವನ್ನು ಅನ್ಯ ಉದ್ದೇಶಕ್ಕೆ ದುರ್ಬಳಕೆ ಮಾಡಿಕೊಂಡಿದ್ದಾರೆ. ಇದರ ಜವಾಬ್ದಾರಿಯನ್ನು ಮುಖ್ಯಮಂತ್ರಿಗಳೇ ಹೊರಬೇಕು ಎಂದು ಒತ್ತಾಯಿಸಿದರು. ಈ ಹಣವನ್ನು ವಾಪಸ್ ಇಲಾಖೆಗೆ ಕೊಡಬೇಕು ಎಂದೂ ಅವರು ಆಗ್ರಹಿಸಿದರು.**

**ಸಚಿವರ ಹೆಸರು ಯಾಕೆ ಬಂದಿಲ್ಲ?**

**187 ಕೋಟಿ ರೂ. ಹಗರಣ**

**ಬಹುಶಃ ಇತ್ತೀಚಿನ ವರ್ಷಗಳಲ್ಲಿ ಸರಕಾರದ ಖಜಾನೆಯನ್ನೇ ಲೂಟಿ ಮಾಡಿದ ದೊಡ್ಡ ಹಗರಣವಿದು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವುದು ಹಗಲುದರೋಡೆ. 187 ಕೋಟಿ ರೂ. ಹಗರಣದ ವಿಚಾರ ಗೊತ್ತಿದ್ದೂ ಗೊತ್ತಿಲ್ಲದಂತೆ ಕಣ್ಮುಚ್ಚಿ ಕುಳಿತ ಸರಕಾರವಿದು. ಹಗರಣದಲ್ಲಿ ಸಂಪೂರ್ಣವಾಗಿ ಭಾಗಿ ಆಗಿದ್ದರಿಂದಲೇ ಕಣ್ಮುಚ್ಚಿ ಕುಳಿತಿದೆ ಎಂದು ಆರೋಪಿಸಿದರು.**

---



# ಚಿಂತೆ ನೀ ಬಾರದಿರು ಎಂದರೆ ಕೇಳುವೆಯ



**ಸಾಮಾಜಿಕ ಕಳಕಳಿ**

**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

ಬೆಳಗಾಯಿತು ಎದ್ದರೆ ಸಾಕು ಮುಂದಿನ ಕಾರ್ಯ ಏನೆಂದು ಚಿಂತೆ
ನೀ ಬಾರದಿರು ಎಂದರೆ ಕೇಳುವೆಯ ಹೇಳು? ಚಿಂತೆ
ದಿನನಿತ್ಯದ ಕಾರ್ಯ ಸಾಗುವುದೋ-ಇಲ್ಲವೋ ಎಂಬ ಚಿಂತೆ
ಕಾರ್ಯ ಸಾಗಿದರು ಸಾಗದಿದ್ದರೂ ಒಂದು ತರಹದ ಚಿಂತೆ.....
ಕಷ್ಟ- ಸುಖಗಳ ಹೊಂದಾಣಿಕೆಯಲ್ಲೂ ಚಿಂತೆ
ಸಂಸಾರ ಹೇಗೆ ನಡೆಸುವುದೆಂಬುದೇ ಚಿಂತೆ
ಮನೆ ಮಕ್ಕಳ, ಹೆಂಡತಿಯ, ಅಪ್ಪ ಅಮ್ಮನ, ನೆಂಟರಿಷ್ಟರ ಚಿಂತೆ.
ಇಂದೇನು! ನಾಳೆ ಏನೋ? ಎಂಬ ದಿನನಿತ್ಯದ ಚಿಂತೆ......
ಕುಂತರೂ, ನಿಂತರೂ ಬಾರದಿರು ಎಂದರು ಬರುವುದು ಚಿಂತೆ
ದಿನನಿತ್ಯದಿ ಹೊರಳಾಡಬೇಕು ಸಂತೆಯ ಚಿಂತೆಯಲಿ
ಲಾಭವಾದರೂ,ನಷ್ಟವಾದರೂ ಮಾಡಬೇಕು ಚಿಂತೆ
ಹೇಗೆ ಬಾಳುವುದು ಎಂಬುದು ಗೊಂದಲದ ಚಿಂತೆ....
ಪ್ರಪಂಚದಿ ಎಲ್ಲಿ ಹೋದರು ಬಿಡದು ಈ ಚಿಂತೆ
ಹುಟ್ಟುತಲೆ ಬಂದಿರುವ ರೀತಿಯಲಿ ಆಗಿದೆ ಚಿಂತೆ
ಮನುಜನ ಜೀವನದಿ ಇದು ಅಂಟಿಕೊಂಡು ಬಿಟ್ಟಿದೆ ಚಿಂತೆ
ಬಿಟ್ಟು ಬಾಳಬೇಕಿದೆ ಎಲ್ಲರೂ ಬದುಕಿನಲಿ ಚಿಂತೆ.......

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಧ್ಯಾನ, ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನ ಕಾರಿಯಾಗುತ್ತದೆ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು.

**ವೃಷಭ** ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

**ಮಿಥುನ** ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಇಂದು ನೀವು ಎಂತಹ ಒಳ್ಳೆಯ ಕೆಲಸ ಮಾಡಿದ್ದೀರೆಂದು ತೋರಿಸಲು ನಿಮ್ಮ ಪ್ರೀತಿ ಅರಳುತ್ತದೆ. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ.

**ಕರ್ಕಾಟಕ** ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ.

**ಸಿಂಹ** ಮಕ್ಕಳ ನಿಮ್ಮ ಇಚ್ಛೆಯಂತೆ ನಡೆದುಕೊಳ್ಳುವುದಿಲ್ಲ, ಹಾಗೂ ಇದು ನಿಮಗೆ ಕೋಪ ತರುತ್ತದೆ. ಅನಿಯಂತ್ರಿತ ಕೋಪ ಸಾಮಾನ್ಯವಾಗಿ ಎಲ್ಲರನ್ನೂ, ಹಾಗೂ ವಿಶೇಷವಾಗಿ ಕೋಪಗೊಂಡವರನ್ನು ಹೆಚ್ಚು ಘಾಸಿಗೊಳಿಸುತ್ತದೆ.

**ಕನ್ಯಾ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಒಬ್ಬರು ಇನ್ನೊಬ್ಬರ ದೃಷ್ಟಿಕೋನವನ್ನು ಅರ್ಥಮಾಡಿಕೊಳ್ಳುವ ಮೂಲಕ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸಿ.

**ತುಲಾ** ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ.

**ವೃಶ್ಚಿಕ** ಇಂದು ನಿಮಗೆ ತುಂಬ ಉನ್ನತ ಶಕ್ತಿಯಿರುವ ದಿನ ಮತ್ತು ನೀವು ಸಣ್ಣ ವಿಷಯಗಳಿಗೂ ಕಿರಿಕಿರಿಗೊಳ್ಳುತ್ತೀರಿ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ.

**ಧನಸ್ಸು** ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಿಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ.

**ಮಕರ** ತೊಂದರೆಗಳ ಬಗ್ಗೆ ಚಿಂತಿಸುವ ಮತ್ತು ಅವುಗಳನ್ನು ದೊಡ್ಡದಾಗಿಸುವ ನಿಮ್ಮ ಸ್ವಭಾವ ನಿಮ್ಮ ನೈತಿಕತೆಯನ್ನು ದುರ್ಬಲಗೊಳಿಸಬಹುದು. ಯಾವುದೇ ಆಸ್ತಿಯಲ್ಲಿ ಹೂಡಿಕೆ ಮಾಡುವುದು ಇಂದು ನಿಮಗೆ ಮಾರಕವಾಗಬಹುದು,

**ಕುಂಭ** ನಿಮ್ಮ ಸಂಗಾತಿಯ ಪ್ರೀತಿ ನಿಜವಾಗಿಯೂ ಭಾವಪೂರ್ಣವಾಗಿದೆ ಎಂದು ಇಂದು ನೀವು ತಿಳಿದು ಕೊಳ್ಳುತ್ತೀರಿ. ನೀವು ನಿಮ್ಮ ಕೆಲಸದಲ್ಲಿ ವಹಿಸುವ ಎಲ್ಲಾ ಶ್ರಮವೂ ಇಂದು ಫಲ ನೀಡುತ್ತದೆ.

**ಮೀನ** ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ.

## ಕಚ್ಚಿದ ಹಾವಿನೊಂದಿಗೆ ಆಸ್ಪತ್ರೆಗೆ ಬಂದ ಯುವಕ, ತಬ್ಬಿಬ್ಬಾದ ಆಸ್ಪತ್ರೆ ಸಿಬ್ಬಂದಿ

• ಉದಯವಾಹಿನಿ ಬೆಳಗಾವಿ

ಹಾವಿನಿಂದ ಕಡಿತಕ್ಕೊಳಗಾದ ಯುವಕನೊಬ್ಬ ತನಗೆ ಕಚ್ಚಿದ ಹಾವಿನೊಂದಿಗೆ ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ಬಂದ ಘಟನೆ ಬೆಳಗಾವಿ ಜಿಲ್ಲಾ ಆಸ್ಪತ್ರೆಯಲ್ಲಿ ನಡೆದಿದೆ. ಬೆಳಗಾವಿ ತಾಲ್ಲೂಕಿನ ಹುಂಚ್ಯಾನಹಟ್ಟಿ ಗ್ರಾಮದ ಯುವಕ ಶಾಹಿದ್ (21) ಮನೆ ಬಳಿ ಹಾವು ಬಂದಿದೆ. ಶಾಹಿದ ಹಾವು ಹಿಡಿದಿದ್ದಾನೆ. ಬಳಿಕ ಬೆಟ್ಟದ ಮೇಲೆ ಹಾವು ಬಿಡುವ ಸಂದರ್ಭದಲ್ಲಿ ಶಾಹಿದ್‌ಗೆ ಹಾವು ಕಚ್ಚಿದೆ. ಕೂಡಲೇ ಸ್ನೇಹಿತರೊಂದಿಗೆ ಕಚ್ಚಿದ ಹಾವನ್ನು ಡಬ್ಬದಲ್ಲಿ ಹಾಕಿಕೊಂಡು ಆಸ್ಪತ್ರೆಗೆ ಬಂದಿದ್ದಾನೆ.

ಯಾವ ಹಾವು ಕಚ್ಚಿದೆ ಅಂತ ಗೊತ್ತಾದರೆ, ಸುಲಭವಾಗಿ ಚಿಕಿತ್ಸೆ ನೀಡಬಹುದು ಎಂದು ಶಾಹಿದ್ ಆಸ್ಪತ್ರೆಗ ಹಾವು ತಂದಿದ್ದಾನೆ. ಡಬ್ಬದಲ್ಲಿ ಇರುವ ಜೀವಂತ ಹಾವು ನೋಡಿ ಆಸ್ಪತ್ರೆ ಸಿಬ್ಬಂದಿ, ರೋಗಿಗಳು ತಬ್ಬಿಬ್ಬಾಗಿದ್ದಾರೆ. ಇನ್ನೂ ಚಿಕಿತ್ಸೆ ಪಡೆದ ಬಳಿಕ ಸ್ನೇಹಿತರ ಜೊತೆ ಬೈಕ್‌ನಲ್ಲಿ ಹಾವು ಸಮೇತ ವಾಪಾಸ್ ಹೋಗಿದ್ದಾನೆ.

## ಮೇ.30ರಂದು ಕೀಟಜನ್ಯ ರೋಗಗಳ ನಿಯಂತ್ರಣ ಕುರಿತು ಜಾಗೃತಿ ಕಾರ್ಯಕ್ರಮ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಇದೇ ಮೇ.30ರಂದು ಬೆಳಿಗ್ಗೆ 11ಕ್ಕೆ ನಗರದ ಪತ್ರಕರ್ತರ ಭವನದಲ್ಲಿ ಪತ್ರಿಕಾ ಮತ್ತು ದೃಶ್ಯ ಮಾಧ್ಯಮ ಪ್ರತಿನಿಧಿಗಳಿಗೆ ಮಲೇರಿಯಾ ಮತ್ತು ಇತರೆ ಕೀಟಜನ್ಯ ರೋಗಗಳ ನಿಯಂತ್ರಣದ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶೀ, ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿ ಕಡಿ, ಹೆಲ್ತ್ ಸೂಪರ್ ವೈಸರ್ ಸುರೇಶಬಾಬು, ಹಿರಿಯ ಆರೋಗ್ಯ ನಿರೀಕ್ಷಕ ಮಲ್ಲಿಕಾರ್ಜುನ್, ಜಿಲ್ಲಾ ವಾರ್ತಾಧಿಕಾರಿ ಆರ್. ಮಾರುತಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ದಿನೇಶ್ ಗೌಡಗೆರೆ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ರಂಗಶಿಕ್ಷಣ ಡಿಪ್ಲೋಮಾಕ್ಕೆ ಅರ್ಜಿ ಆಹ್ವಾನ

• ಉದಯವಾಹಿನಿ ಚಿತ್ರದುರ್ಗ

ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗ ಪ್ರಯೋಗ ಶಾಲೆಯು 2024-25ನೇ ಸಾಲಿನ ರಂಗಶಿಕ್ಷಣಕ್ಕೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಪ್ರವೇಶಕ್ಕೆ ಕನಿಷ್ಟ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. ಪದವೀಧರರಿಗೆ ಆದ್ಯತೆ ಇರುತ್ತದೆ. ರಂಗಭೂಮಿಯಲ್ಲಿ ಆಸಕ್ತಿ ಇದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕಾದದ್ದು ಅಗತ್ಯ. ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಊಟ-ವಸತಿ ವ್ಯವಸ್ಥೆ ದೊರೆಯುತ್ತದೆ. ಕರ್ನಾಟಕ ಹಾಗೂ ಭಾರತದ ರಂಗತಜ್ಞರಿಂದ ಮತ್ತು ಅತಿಥಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥಭಂಡಾರ ಹಾಗೂ ದೃಶ್ಯ, ಶ್ರವ್ಯ, ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಭಾರತೀಯ ರಂಗಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ, ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ.

ಪ್ರಾಚಾರ್ಯರು, ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆ, ಸಾಣೇಹಳ್ಳಿ -577515, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಈ ವಿಳಾಸಕ್ಕೆ ಬರೆದು ಪ್ರವೇಶ ಅರ್ಜಿಗಳನ್ನು ತರಿಸಿಕೊಳ್ಳಬಹುದು ಅಥವಾ ನಮ್ಮ ರಂಗಶಾಲೆಯ ವೆಬ್ ಸೈಟ್ www.theatreschoolsanehlli.org ನಲ್ಲಿ ಪ್ರವೇಶ ಅರ್ಜಿಗಳನ್ನು ಡೌನ್‌ಲೋಡ್ ಮಾಡಿ ಜೂನ್ 25ರ ಒಳಗಾಗಿ ಅರ್ಜಿಯನ್ನು ರಂಗಶಾಲೆಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9448398144-8861043553 ಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಮೂಲಸೌಕರ್ಯ ಕೊರತೆಯ ಊರು ಹಿರೇನರ್ತಿ

### • ಎಂಟರಿಂದ ಹತ್ತು ದಿನಗಳಿಗೊಮ್ಮೆ ಪೂರೈಕೆ ಆಗುವ ಕುಡಿಯುವ ನೀರು

• ಉದಯವಾಹಿನಿ ಕುಂದಗೋಳ



ಉದಯವಾಹಿನಿ ಚಿತ್ರ

ಎಂಟರಿಂದ ಹತ್ತು ದಿನಗಳಿಗೊಮ್ಮೆ ಪೂರೈಕೆ ಆಗುವ ಕುಡಿಯುವ ನೀರು. ದಿನನಿತ್ಯದ ಬಳಕೆಗೆ ಹಳ್ಳದ ಗುಂಡಿಯಲ್ಲಿರುವ ನೀರೇ ಗತಿ...ಇದು 607 ಮನೆಗಳು, 3,010 ಜನಸಂಖ್ಯೆ ಹೊಂದಿರುವ ತಾಲ್ಲೂಕಿನ ಪುಟ್ಟ ಗ್ರಾಮ ಹಿರೇನರ್ತಿಯ ಜನರ ಬವಣೆಗೆ ಹಿಡಿದ ಕನ್ನಡಿ. ಮುಂದುವರಿದು, ಗ್ರಾಮದಲ್ಲಿ ಈಗಲೂ ಬಯಲು ಮಲ ವಿಸರ್ಜನೆ ಜೀವಂತವಾಗಿದೆ.

ಪ್ರಮುಖ ಕಾಂಕ್ರೀಟ್ ರಸ್ತೆಗಳು ಅಲ್ಲಲ್ಲಿ ಗುಂಡಿ ಮಯವಾಗಿದೆ. ಬಸ್ ನಿಲ್ದಾಣದ ನೆಲಹಾಸು ಕಿತ್ತಿದೆ. ಊರಿನ ಕಿರಾಣಿ ಅಂಗಡಿಗಳಲ್ಲಿ ಅಕ್ರಮವಾಗಿ ಪೆಟ್ರೋಲ್ ಮಾರಾಟ ನಿರಾತಂಕವಾಗಿ ನಡೆಯುತ್ತಿದೆ. ಬಸಾಪುರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಅಕ್ಕ ಪಕ್ಕದ ಹೊಲಗಳು ಇಸ್ಪೀಟ್ ಆಟದ ಅಡ್ಡೆಗಳಾಗಿವೆ. ಚಿಕ್ಕನರ್ತಿ ಮತ್ತು ಹಿರೇನರ್ತಿ ಮಧ್ಯವಿರುವ ಹಳ್ಳಕ್ಕೆ ತಡೆಗೋಡೆಯಿಲ್ಲ.

ಸರ್ಕಾರಿ ಆಸ್ಪತ್ರೆ (ಆಯುಷ್ಮಾನ್ ಆರೋಗ್ಯ ಮಂದಿರ) 15 ದಿನಕ್ಕೊಮ್ಮೆ ಬಾಗಿಲು ತೆರೆಯುತ್ತಿದ್ದು, ಊರಿನ ಜನರು ಅನಾರೋಗ್ಯಕ್ಕೆ ತುತ್ತಾದರೆ ಪಕ್ಕದ ಕುಂದಗೋಳಕ್ಕೆ ಹೋಗುಬೇಕು. ಗ್ರಾಮದ ಮಧ್ಯ ಇರುವ ಹಳೇ ಗ್ರಾಮ ಪಂಚಾಯಿತಿ ಕಟ್ಟಡದ ಒಂದು ಸಣ್ಣ ಕೋಣೆಯಲ್ಲಿ ಅಂಚೆ ಕಚೇರಿಯಿದೆ. ಗ್ರಾಮ ಆಡಳಿತ ಅಧಿಕಾರಿ ಕಚೇರಿ ಎದುರಿನ ರಸ್ತೆಯಲ್ಲಿ ಚರಂಡಿ ನೀರು ಹರಡಿದೆ.

**ರಸ್ತೆಗಳು ಗುಂಡಿ ಮಯ**

ಗ್ರಾಮದ ಮುಖ್ಯ ಕೆರೆಯಲ್ಲಿ ನೀರಿಲ್ಲ, ಕೆರೆಗೆ ತಡೆಗೋಡೆಯಿಲ್ಲ, ಕೆರೆಯ ಸುತ್ತ ಕಸ ಬೆಳೆದಿದ್ದು ಮೆಟ್ಟಿಲುಗಳು ಕಿತ್ತಿವೆ. ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟು ಆರು ತಿಂಗಳಾಗಿದ್ದು, ಅದರ ಆವರಣ ದನ ಕಟ್ಟುವ ಜಾಗವಾಗಿ ಬದಲಾಗಿದೆ.

ಕೆಲ ದಿನಗಳ ಹಿಂದೆ ಹಳ್ಳದಲ್ಲಿನ ನೀರನ್ನು ತೆಂಗಿನ ಚಿಪ್ಪು ಬಳಸಿ ಕೊಡದಲ್ಲಿ ತುಂಬಿಕೊಂಡು ಬಂದಿದ್ದೇವೆ' ಎಂದು ಸಮಸ್ಯೆಯ ತೀವ್ರತೆಯನ್ನು ಗ್ರಾಮಸ್ಥ ಯಲ್ಲಪ್ಪ ವಿವರಿಸುತ್ತಾರೆ. ಗ್ರಾಮದಲ್ಲಿನ ಚರಂಡಿಗಳಲ್ಲಿ ನೀರು ತುಂಬಿರುವ ಕಾರಣ ರಾತ್ರಿ ಸೊಳ್ಳೆ ಕಾಟ ಹೆಚ್ಚಾಗಿದೆ. ಕಸದ ವಿಲೇವಾರಿ ಮಾಡುವಲ್ಲಿ ಗ್ರಾಮ ಪಂಚಾಯಿತಿ ವಿಫಲವಾಗಿದೆ' ಎಂದು ಗ್ರಾಮಸ್ಥರು ಆರೋಪಿಸುತ್ತಾರೆ. ಹತ್ತಾರು ಸಮಸ್ಯೆಗಳಲ್ಲಿ ಕೆಲವಾದರೂ ಪರಿಹರಿಸಿದರೆ ಒಂದಷ್ಟು ನೆಮ್ಮದಿ ಕಾಣುವ ನಿರೀಕ್ಷೆ ಗ್ರಾಮಸ್ಥರದ್ದು.

**ಕುಡಿಯುವ ನೀರಿನ ಸಮಸ್ಯೆ**

**ಬಸ್ ನಿಲ್ದಾಣದ ಪಕ್ಕದ ಅಂಗನವಾಡಿಯ ಹಿಂಬದಿಯ ಪಕ್ಕದಲ್ಲಿ ತೆರೆದ ಚರಂಡಿಯಿದೆ. ಬಸವೇಶ್ವರ ಫ್ಲಾಟ್‌ನಲ್ಲಿನ ಕಾಂಕ್ರೀಟ್ ರಸ್ತೆ ಅಲ್ಲಲ್ಲಿ ಕಿತ್ತಿದೆ. ಕುರುಬಗೇರಿಯಲ್ಲಿನ ಚರಂಡಿ ತುಂಬಿವೆ. ಅಂಗನವಾಡಿ ಕೇಂದ್ರ-1ರಲ್ಲಿ ಮಕ್ಕಳಿಗೆ ಶೌಚಾಲಯವಿಲ್ಲ. ಅಂಗನವಾಡಿ ಕೇಂದ್ರ-2ನ್ನು 'ನಂದ ಘರ್' (ಅತ್ಯಾಧುನಿಕ ಅಂಗನವಾಡಿ) ಯೋಜನೆಯಡಿ ಮೇಲ್ದರ್ಜೆಗೇರಿಸಿದ್ದರೂ ಅಲ್ಲಿ ಸೋಲಾರ್, ಟಿ.ವಿ ವ್ಯವಸ್ಥೆಯಿಲ್ಲ. ಊರಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಜನ ಪ್ರತಿನಿಧಿಗಳು ನಿದ್ದೆ ಮಾಡುತ್ತಿದ್ದಾರೆ.**

## ಷಣ್ಮುಖ ಶಿವಯೋಗಿಗಳ ರಥೋತ್ಸವ


ಉದಯವಾಹಿನಿ ಚಿತ್ರ

• ಉದಯವಾಹಿನಿ ಜೇವರ್ಗಿ

ಪಟ್ಟಣದ ಶ್ರೀ ಷಣ್ಮುಖಶಿಯೋಗಿಗಳ ಜಾತ್ರಾ ಮಹೋತ್ಸವ ನಿಮಿತ್ಯ ಸಹ ಸ್ರಾರು ಭಕ್ತರ ಜಯ ಘೋಷಗಳ ಮಧ್ಯೆ ಮಂಗಳವಾರ ಭವ್ಯವಾದ ರಥೋತ್ಸವ ಜರಗಿತು. ಶ್ರೀ ಷಣ್ಮುಖ ಶಿವಯೋಗಿಗಳ ರಥೋತ್ಸವದ ನಿಮಿತ್ಯವಾಗಿ ಬೆಳಗ್ಗೆ ಕರ್ತೃಗದ್ದಿಗೆ ವಿಶೇಷ ಪೂಜೆ ಅಲಂಕಾರ ಸೇರಿ ವಚನ ಅಭಿಷೇಕ ನೆರವೇರಿತು.

**ಇಬ್ಬರು ಗಂಭೀರ ಗಾಯ ಕಲಬುರಗಿ ಖಾಸಗಿ ಆಸ್ಪತ್ರೆಯಲ್ಲಿ ದಾಖಲು:** ಸಾಯಂಕಾಲ 7:00ಗೆ ಭವ್ಯ ರಥೋತ್ಸವ ಜರಗಿತ್ತು ಈ ಸಂದರ್ಭದಲ್ಲಿ ಇಬ್ಬರ ಮೇಲೆ ರಥ ಹರಿದು ಗಂಭೀರ ಗಾಯಗೊಂಡಿದ್ದಾರೆ ಎಂದು ಕಮಿಟಿ ತಿಳಿಸಿದೆ. ರಥದ ಚಕ್ರಕ್ಕೆ ಸಿಲುಕಿದ ಗಾಯಾಳುಗಳಿಗೆ ಕಲಬುರ್ಗಿ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ ಎಂದು ತಿಳಿಸಿದರು. ಆಕಾಶ್ ಕೊಳಕೂರ್ ಷಣ್ಮುಖ ಬಸ್ಪಟ್ಟಣ ಎಂದು ಗುರುತಿಸಲಾಗಿದೆ.

ಈ ಸಂದರ್ಭದಲ್ಲಿ ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ನರಿಬೋಳ, ರಾಜಶೇಖರ್ ಸೀರಿ ಟ್ರಸ್ಟ್ ಕಮಿಟಿ ಅಧ್ಯಕ್ಷರು, ಷಣ್ಮುಖಪ್ಪ ಸಾಹು ಗೋಗಿ, ರಮೇಶ್ ಬಾಬು ವಕೀಲರು, ಶರಣಬಸವ ಕಲ್ಲಾ, ಸೋಮಣ್ಣ ಕಲ್ಲಾ, ಸಂಗನ ಗೌಡ ಗೂಗಿಹಾಳ, ಸಾಹೇಬ್ ಗೌಡ, ಷಣ್ಮುಖಪ್ಪ ಗೌಡ ಮಾಲಿ ಪಾಟೀಲ್, ದಂಡಪ್ಪಗೌಡ ಪೊಲೀಸ್ ಪಾಟೀಲ್, ಸಿದ್ದು ಸಾಹು ಅರಳಿ, ನೀಲಕಂಠ ಅವಂಟಿ, ರವಿ ಕೋಳಕೂರ್, ಷಣ್ಮುಖಪ್ಪ ಹಿರೇಗೌಡ, ಮಠದ ಭಕ್ತರು ಉಪಸ್ಥಿತರಿದ್ದರು.

## ಚೆನ್ನಗಿರಿ ಪೊಲೀಸ್ ಠಾಣೆ ಲಾಕಪ್ ಡೆತ್ ಕೇಸ್: ಹೃದಯಾಘಾತದಿಂದ ಆದಿಲ್ ಸಾವು

• ಉದಯವಾಹಿನಿ ದಾವಣಗೆರೆ



ಉದಯವಾಹಿನಿ ಚಿತ್ರ

ಜಿಲ್ಲೆಯ ಚೆನ್ನಗಿರಿ ಪೊಲೀಸ್ ಠಾಣೆಯಲ್ಲೇ ಆದಿಲ್ ಎಂಬಾತನ ಲಾಕಪ್ ಡೆತ್ ಆಗಿತ್ತು. ಇದು ಪೊಲೀಸರೇ ನಡೆಸಿದಂತ ಕೃತ್ಯ ಎಂಬುದಾಗಿ ಸಿಡಿದೆದ್ದಿದ್ದಂತ ಜನರು ಪೊಲೀಸ್ ಠಾಣೆಯ ಮೇಲೆ ಕಲ್ಲು ತೂರಾಟ ನಡೆಸಿದ್ದರು. ಆದ್ರೇ ಮರಣೋತ್ತರ ಪರೀಕ್ಷಾ ವರದಿಯಲ್ಲಿ ಹೃದಯಾಘಾತದಿಂದ ಸಾವನ್ನಪ್ಪಿರೋದಾಗಿ ತಿಳಿದು ಬಂದಿದೆ.

ಚೆನ್ನಗಿರಿ ಪೊಲೀಸ್ ಠಾಣೆಯಲ್ಲಿ ಲಾಕಪ್ ಡೆತ್ ಸಂಬಂಧ ಮೃತ ಆದಿಲ್‌ನ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿತ್ತು. ಇದರ ವರದಿ ಪೊಲೀಸರ ಕೈಸೇರಿದೆ. ಅದರಲ್ಲಿ ಆದಿಲ್ ಲೋಬಿಪಿಯಾಗಿ ಹೃದಯಾಘಾತದಿಂದ ಸಾವನ್ನಪ್ಪಿರೋದಾಗಿ ಉಲ್ಲೇಖಿಸಲಾಗಿದೆ. ವರದಿಯಲ್ಲಿ ಕಾರ್ಡಿಯಾ ಫಲ್ಮನರಿ ಎಂದು ಉಲ್ಲೇಖಿಸಲಾಗಿದೆ. ಈ ವರದಿಯನ್ನು ಸಿಐಡಿ ಅಧಿಕಾರಿಗಳಿಗೆ ಪೊಲೀಸರು ಸಲ್ಲಿಸಿದ್ದಾರೆ. ಅಂದಹಾಗೇ ಮೇ.24ರಂದು ಪೊಲೀಸರ ಕಸ್ಟಡಿಯಲ್ಲಿ ಇದ್ದಾಗಲೇ ಆದಿಲ್ ಮೃತಪಟ್ಟಿದ್ದನು. ಚೆನ್ನಗಿರಿ ಪೊಲೀಸ್ ಠಾಣೆಯಲ್ಲಿ ನಡೆದಂತ ಲಾಕಪ್ ಡೆತ್ ಎಂಬುದಾಗೇ ಹೇಳಲಾಗುತ್ತಿತ್ತು. ಈ ಪ್ರಕರಣವನ್ನು ರಾಜ್ಯ ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ.

## ರೂ.2.70 ಕೋಟಿ ವೆಚ್ಚದ ಕುಡಿಯುವ ನೀರಿನ ಕಾಮಗಾರಿಗಳಿಗೆ ಅನುಮೋದನೆ

• ಉದಯವಾಹಿನಿ ಚಿತ್ರದುರ್ಗ

2023-24ನೇ ಸಾಲಿನ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.2.70 ಕೋಟಿ ವೆಚ್ಚದ ಟಾಸ್ಕ್ ಫೋರ್ಸ್ ಕ್ರಿಯಾ ಯೋಜನೆಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆ ಅನುಮೋದನೆ ನೀಡಿದೆ.

ಈ ಕುರಿತು ಬುಧವಾರ ನಗರದ ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಯಿತು. ಜಿಲ್ಲೆಯ ಬರ ಪೀಡಿತ ತಾಲ್ಲೂಕುಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಪ್ರತಿ ತಾಲ್ಲೂಕುಗಳಿಗೆ ಮೊದಲ ಹಂತದಲ್ಲಿ ರೂ.25 ಲಕ್ಷದಂತೆ ಒಟ್ಟು ರೂ.150 ಲಕ್ಷ, ಎರಡನೇ ಹಂತದಲ್ಲಿ ರೂ. 20 ಲಕ್ಷದಂತೆ ಒಟ್ಟು ರೂ.120 ಲಕ್ಷ, ಮೂರನೇ ಹಂತದಲ್ಲಿ ರೂ. 60.69 ಲಕ್ಷದಂತೆ ಒಟ್ಟು ರೂ.364.15 ಲಕ್ಷ ಮಂಜೂರು ಮಾಡಿದೆ. ಮೊದಲ ಹಂತದಲ್ಲಿ ಬಿಡುಗಡೆ ಮಾಡಿದ ರೂ.150 ಲಕ್ಷಗಳಿಗೆ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸರಬಾರಜಿಗೆ ಸಂಬಂಧಿಸಿದಂತೆ ಒಟ್ಟು 94 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಎರಡನೇ ಹಂತದಲ್ಲಿ ಮಂಜೂರಾದ ರೂ.120 ಲಕ್ಷಗಳಿಗೆ ಆರು ತಾಲ್ಲೂಕುಗಳಿಂದ ಒಟ್ಟು 88 ಕಾಮಗಾರಿಗಳಿಗೆ ಕ್ರಿಯಾ ಯೋಜನೆ ತಯಾರಿಸಿ ಸಭೆಯ ಅನುಮೋದನೆ ಮಂಡಿಸಲಾಯಿತು. ಜಿಲ್ಲೆಗೆ ಮಂಜೂರಾದ ರೂ.364.15 ಲಕ್ಷಕ್ಕೆ ಸಂಬಂಧಿಸಿದಂತೆ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಹಾಗೂ ಇತರೆ ಗ್ರಾಮಗಳಿಗೆ ನೀರು ಸರಬರಾಜು ಮಾಡುವ ಹೊಸ ಪೈಪ್ ಲೈನ್ ಅಳವಡಿಕೆಗೆ ರೂ.60.60 ಲಕ್ಷ ವೆಚ್ಚದ 10 ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಭೆಯ ಮುಂದೆ ಮಂಡಿಸಲಾಯಿತು.

ಸಭೆಯಲ್ಲಿ ಜಿ.ಪಂ ಉಪ ಕಾರ್ಯದರ್ಶಿ ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸವನಗೌಡ ಪಾಟೀಲ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಅರಣ್ಯ ಇಲಾಖೆ ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸೀರುದ್ದೀನ್, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ಆರೋಗ್ಯ ಇಲಾಖೆ ಡಾ.ಚಂದ್ರಶೇಖರ್ ಕಂಬಾಳಿಮಠ ಸೇರಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಶುದ್ಧ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲು ಸೂಚನೆ**

**ಜಲ ಜೀವನ್ ಮಿಷನ್ ಯೋಜನೆಯಡಿ ಮನೆ-ಮನೆಗೆ ಕಾರ್ಯಾತ್ಮಕ ನಳ ನೀರು ಸಂಪರ್ಕಿಸುವ ವೇಳೆ, ಗ್ರಾಮಾಂತರ ಪ್ರದೇಶದಲ್ಲಿನ ಶಾಲೆ, ಆಸ್ಪತ್ರೆ, ಅಂಗನವಾಡಿ, ಹಾಸ್ಟೆಲ್‌ಗಳಿಗೆ ತಪ್ಪದೇ ಶುದ್ಧ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವಂತೆ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.**

## ರಘುಪತಿ ಭಟ್ ಜೊತೆಗಾರರಿಗೆ ನೋಟೀಸ್

• ಉದಯವಾಹಿನಿ ಉಡುಪಿ


ಉದಯವಾಹಿನಿ ಚಿತ್ರ

**ಬಿಜೆಪಿಯಲ್ಲಿ ಹೆಚ್ಚಿದ ಅಪಸ್ವರ**

ಬಿಜೆಪಿ ಪಕ್ಷದಿಂದ ಉಚ್ಚಾಟನೆಗೊಂಡಿರುವ ಮಾಜಿ ಶಾಸಕ ರಘುಪತಿ ಭಟ್ ಜೊತೆ ಗುರುತಿಸಿಕೊಂಡ ಬಿಜೆಪಿ ನಾಯಕರಿಗೆ ಪಕ್ಷದಿಂದ ನೋಟಿಸ್ ನೀಡಲಾಗಿದೆ. ಈ ಬಾರಿಯ ನೈಋತ್ಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿಯಿಂದ ಟಿಕೆಟ್ ವಂಚಿತರಾಗಿರುವ ರಘುಪತಿ ಭಟ್ ಬಿಜೆಪಿಗೆ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧೆಗಿಳಿದಿದ್ದಾರೆ.

ರಾಜ್ಯ ಬಿಜೆಪಿಯಲ್ಲಿ ಕರಾವಳಿ ನಾಯಕರನ್ನು ಕಡೆಗಣಿಸುತ್ತಿದ್ದಾರೆ ಎಂದು ಆರೋಪಿಸಿ ರಘುಪತಿ ಭಟ್ ಬಂಡಾಯ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ. ಈ ಹಿನ್ನೆಲೆಯಲ್ಲಿ ರಘುಪತಿ ಭಟ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿತ್ತು. ಇದೀಗ ರಘುಪತಿ ಭಟ್ ಜೊತೆ ಗುರುತಿಸಿಕೊಂಡ ನಾಲ್ವರು ಬಿಜೆಪಿ ಪದಾಧಿಕಾರಿಗಳಿಗೆ ಶಿಸ್ತು ಕ್ರಮ ಜರುಗಿಸುವುದಾಗಿ ನೋಟಿಸ್ ನೀಡಲಾಗಿದೆ.

ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಮಹೇಶ್ ಠಾಕೂರ್, ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಉಪೇಂದ್ರ ನಾಯಕ್, ಬಿಜೆಪಿ ಯುವ ಮೋರ್ಚಾ ಉಪಾಧ್ಯಕ್ಷ ರೋಶನ್ ಶೆಟ್ಟಿ ಹಾಗೂ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಜುನೈದ್ ಅವರಿಗೆ ನೋಟಿಸ್ ನೀಡಲಾಗಿದೆ. ಪಕ್ಷದ ಜವಾಬ್ದಾರಿ ಹೊಂದಿದ್ದರು, ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಅಕ್ಷಮ್ಯ. ಇದು ಪಕ್ಷದ ಶಿಸ್ತನ್ನು ಉಲ್ಲಂಘನೆ ಮಾಡಿದಂತೆ ಹೀಗಾಗಿ 48 ಗಂಟೆಗಳ ಒಳ ಉಡುಪಿ ಬಿಜೆಪಿ ಜಿಲ್ಲಾಧ್ಯಕ್ಷರ ಮುಂದೆ ಸ್ಪಷ್ಟೀಕರಣ ನೀಡುವಂತೆ ನೋಟಿಸ್‌ನಲ್ಲಿ ಉಲ್ಲೇಖಿಸಲಾಗಿದೆ.

ಇನ್ನು ಈ ಹಿಂದೆ ನೈಋತ್ಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯ ವಿರುದ್ಧ ಬಂಡಾಯ ಸಾರಿರುವ ಬಿಜೆಪಿಯ ಮಾಜಿ ಶಾಸಕರಾದ ರಘುಪತಿ ಭಟ್ ಅವರನ್ನು ಪಕ್ಷದಿಂದ ಕೂಡಲೇ ಉಚ್ಚಾಟಿಸುವಂತೆ ಜಿಲ್ಲಾ ಬಿಜೆಪಿ ಮುಖಂಡರು ಪಕ್ಷದ ರಾಜ್ಯ ಸಮಿತಿಗೆ ಶಿಫಾರಸು ಮಾಡಿತ್ತು.

**ಪಕ್ಷದ ವಿರುದ್ಧ ಬಂಡಾಯ**

**ಪಕ್ಷದ ವಿರುದ್ಧ ಬಂಡಾಯ ಎದ್ದಿರುವ ಅವರು ಬಿಜೆಪಿ ಕಾರ್ಯಕರ್ತರ ಅಭ್ಯರ್ಥಿ ಎಂದು ಬಿಂಬಿಸಿಕೊಳ್ಳುತ್ತಿರುವುದರಿಂದ ಕಾರ್ಯಕರ್ತರಲ್ಲಿ ಗೊಂದಲ ಸೃಷ್ಟಿಯಾಗಿದೆ. ಮತದಾರರಲ್ಲೂ ಗೊಂದಲ ಸೃಷ್ಟಿಸುವುದು ಸರಿಯಲ್ಲ. ಹಾಗಾಗಿ ಅವರನ್ನು ಉಚ್ಚಾಟಿಸುವಂತೆ ಶಿಫಾರಸು ಮಾಡಲಾಗಿತ್ತು. ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ ಬಿಜೆಪಿ ರಾಜ್ಯ ಸಮಿತಿ ರಘುಪತಿ ಭಟ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಿತ್ತು.**

## ತಾಲ್ಲೂಕಿನಲ್ಲಿ 41 ಶಾಲೆಗಳಿಗೆ ಕಾಯಂ ಶಿಕ್ಷಕರಿಲ್ಲ

• ಉದಯವಾಹಿನಿ ಶಹಾಪುರ


ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ 41 ಕಾಯಂ ಶಿಕ್ಷಕರು ಇಲ್ಲದ ಶಾಲೆಗಳಿವೆ. ಇವೆಲ್ಲದರ ನಡುವೆ ಶೈಕ್ಷಣಿಕ ವರ್ಷ ಹಲವು ಬದಲಾವಣೆಯೊಂದಿಗೆ ಬುಧವಾರ ಆರಂಭಗೊಳ್ಳಲಿದೆ. ಪ್ರಸಕ್ತ ವರ್ಷ ಸರ್ಕಾರ ತಾಲ್ಲೂಕಿನ 26 ಶಾಲೆಗಳು ಎಲ್‌ಕೆಜಿಯಿಂದ ಆರಂಭಗೊಂಡರೆ, 18 ಶಾಲೆಗಳು ಆಂಗ್ಲ ಮಾಧ್ಯಮ ಶಾಲೆ, 10 ತಾಂತ್ರಿಕ ತರಬೇತಿ ಶಾಲೆಗಳು ಎಂದು ಗುರುತಿಸಿ ಆರಂಭಿಸಲಾಗುತ್ತಿದೆ.

ಅಕ್ಷರ ಅವಿಷ್ಕಾರದ ಅಡಿಯಲ್ಲಿ ಮಹತ್ವದ ಹೆಜ್ಜೆಗಳನ್ನು ಇಡಲಾಗುತ್ತಿದೆ. ಅತಿಥಿ ಶಿಕ್ಷಕರು ಜೂನ್ 1ರಿಂದಲೇ ಶಾಲೆಗೆ ಆಗಮಿಸಲಿದ್ದಾರೆ. ತಾಲ್ಲೂಕಿನಲ್ಲಿ 41 ಶಾಲೆಗೆ ಕಾಯಂ ಶಿಕ್ಷಕರು ಇಲ್ಲ. ನಿಯೋಜನೆ ಮೇಲೆ ತಾತ್ಕಾಲಿಕವಾಗಿ ನೇಮಿಸಲಾಗಿದೆ ಎಂದು ಬಿಇಒ ಕಚೇರಿಯ ಮೂಲಗಳು ತಿಳಿಸಿವೆ. ತಾಲ್ಲೂಕಿನಲ್ಲಿ 288 ಸರ್ಕಾರಿ ಪ್ರಾಥಮಿಕ ಶಾಲೆಗಳಿವೆ. 881 ಶಿಕ್ಷಕರ ಕೊರತೆ ಇದೆ. ಅಲ್ಲದೆ 46 ಸರ್ಕಾರಿ ಪ್ರೌಢಶಾಲೆಗಳಿವೆ ಅದರಲ್ಲಿ 208 ಶಿಕ್ಷಕರ ಹುದ್ದೆ ಖಾಲಿ ಇವೆ. ಅದರಲ್ಲಿ ಹೆಚ್ಚಾಗಿ ಇಂಗ್ಲಿಷ್, ವಿಜ್ಞಾನ, ಗಣಿತ ಭಾಷೆಯ ಶಿಕ್ಷಕರ ಕೊರತೆ ಎದ್ದು ಕಾಣುತ್ತದೆ. ಸರ್ಕಾರ ಇದರ ಬಗ್ಗೆ ಗಂಭೀರವಾಗಿ ಚಿಂತನೆ ಮಾಡಬೇಕು' ಎನ್ನುತ್ತಾರೆ ಸಾಮಾಜಿಕ ಕಾರ್ಯಕರ್ತ ಪ್ರದೀಪ ಅಣಬಿ. ತಾಲ್ಲೂಕಿನಲ್ಲಿ ಅನಧಿಕೃತವಾಗಿ ನಡೆಯುವ ಕೋಚಿಂಗ್ ಕೇಂದ್ರಗಳ ಜಾಲವಿದೆ. ಸರ್ಕಾರದಿಂದ ಯಾವುದೇ ಮಾನ್ಯತೆ ಹಾಗೂ ಪರವಾನಗಿ ಪಡೆದಿಲ್ಲ. ಅಲ್ಲದೆ ನಗರ ಪ್ರದೇಶದಲ್ಲಿ ಶಿಕ್ಷಕರು ಉಳಿದುಕೊಳ್ಳಲು ಮಕ್ಕಳ ದಾಖಲಾತಿಯನ್ನು ತೋರಿಸುತ್ತಾರೆ. ಆದರೆ ಹಾಜರಿ ಅಷ್ಟು ಇರುವುದಿಲ್ಲ ಇದರ ಬಗ್ಗೆ ಗಮನಹರಿಸಬೇಕು ಎನ್ನುತ್ತಾರೆ ಅವರು.

> **ಇಂದಿನಿಂದ ಶೈಕ್ಷಣಿಕ ವರ್ಷ ಆರಂಭವಾಗುತ್ತದೆ. ಆಯಾ ಶಾಲಾ ಶಿಕ್ಷಕರು ಕಡ್ಡಾಯವಾಗಿ ಶಾಲೆಗೆ ಹಾಜರಾಗಬೇಕು ಪ್ರದೀಪ ಅಣಬಿ ಸಾಮಾಜಿಕ ಕಾರ್ಯಕರ್ತಶೈಕ್ಷಣಿಕ ವರ್ಷದಿಂದ ಸರ್ಕಾರದ ಮಾರ್ಗಸೂಚಿ ನಿಯಮಗಳನ್ನು ಜಾರಿಗೆ ತರಬೇಕು. ಶಾಲೆಗೆ ಚಕ್ಕರ್ ಹೊಡೆಯುವ ಶಿಕ್ಷಕರನ್ನು ಅಮಾನತುಗೊಳಿಸಬೇಕು**
> -ರೇಣುಕಾ ಪಾಟೀಲ, ಬಿಆರ್‌ಸಿ ಶಹಾಪುರ

## ಸಿ.ಟಿ.ಸ್ಕ್ಯಾನ್‌ಗೆ ಪರ್ಯಾಯ ವ್ಯವಸ್ಥೆ

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿರುವ ಸಿ.ಟಿ.ಸ್ಕ್ಯಾನ್ ಯಂತ್ರವು ಸಿಡಿಲು ಅವಘಡದಿಂದ ದುರಸ್ಥಿಯಲ್ಲಿದ್ದು, ತಾತ್ಕಾಲಿಕವಾಗಿ ಚಿತ್ರದುರ್ಗ ನಗರದ ತುರುನೂರು ರಸ್ತೆಯ ಫೋರ್ಟ್ ಸಿಟಿ ಡಯೋಗ್ನಿಸ್ಟಿಕ್ ಸೆಂಟರ್, ಬೇಸ್‌ಮೆಂಟ್ ಆಫ್ ಸಿಎಂಹೆಚ್ ಆಸ್ಪತ್ರೆಯಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಿದ್ದು, ಸರ್ಕಾರ ನಿಗಧಿ ಪಡಿಸಿದ ಶುಲ್ಕದಂತೆಯೇ ಸಿ.ಟಿ.ಸ್ಕ್ಯಾನ್ ಮಾಡಲಾಗುತ್ತದೆ.

ಎ.ಬಿ-ಎ.ಆರ್.ಕೆ ಅಡಿಯಲ್ಲಿ ನೋಂದಣಿಯಾದ ರೋಗಿಗಳಿಗೆ ಉಚಿತವಾಗಿ ಸಿ.ಟಿ.ಸ್ಕ್ಯಾನ್ ಮಾಡಲಾಗುತ್ತದೆ ಎಂದು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

## ಬಸವಣ್ಣನ ಫೋಟೋ ತೆಗೆದು ಏಸುಕ್ರಿಸ್ತನ ಫೋಟೋ ಹಾಕಿ: ಯಾದಗಿರಿಯಲ್ಲಿ ವ್ಯಕ್ತಿಯೊಬ್ಬ ರಂಪಾಟ

• ಉದಯವಾಹಿನಿ ಯಾದಗಿರಿ

ಬಸ್ ನಿಲ್ದಾಣದಲ್ಲಿದ್ದಂತ ಬಸವಣ್ಣನ ಫೋಟೋ ತೆಗೆದು ಏಸು ಕ್ರಿಸ್ತನ ಫೋಟೋ ಹಾಕುವಂತೆ ವ್ಯಕ್ತಿಯೊಬ್ಬ ಕಿರಿಕ್ ಮಾಡಿದಂತ ಘಟನೆ ಸುರಪುರ ಬಸ್ ನಿಲ್ದಾಣದಲ್ಲಿ ನಡೆದಿದೆ.

ಯಾದಗಿರಿ ಜಿಲ್ಲೆಯ ಸುರಪುರ ಬಸ್ ನಿಲ್ದಾಣದಲ್ಲಿ ಕ್ರೈಸ್ತ ಅನುಯಾಯಿಯೊಬ್ಬ ವಿಶ್ವಗುರು ಬಸವಣ್ಣನಿಗೆ ಅವಹೇಳನಕಾರಿಯಾಗಿ ಮಾತನಾಡಿರೋದಾಗಿ ತಿಳಿದು ಬಂದಿದೆ.ಬಸ್ ನಿಲ್ದಾಣದ ಸಿಬ್ಬಂದಿಯೊಂದಿಗೆ ಅನುಚಿತವಾಗಿ ವರ್ತಿಸಿದಂತ ವ್ಯಕ್ತಿ, ಕ್ರೈಸ್ತ ಧರ್ಮದವರಿಗೆ ಅನ್ಯಾಯವಾಗಿದೆ. ಬಸ್ ನಿಲ್ದಾಣದಲ್ಲಿನ ಬಸವಣ್ಣನ ಫೋಟೋ ತೆಗೆದು, ಜೀಸಸ್ ಫೋಟೋ ಹಾಕುವಂತೆ ಮೊಂಡಾಟ ಮೆರೆದಿದ್ದಾನೆ.

ಬಸ್ ನಿಲ್ದಾಣದಲ್ಲೇ ರಂಪಾಟ ಮಾಡುವ ವೇಳೆ ಸಾರ್ವಜನಿಕರು ವಿಡಿಯೋ ಮಾಡಿಕೊಂಡಿದ್ದು, ಇದೀಗ ವಿಡಿಯೋ ವೈರಲ್ ಆಗಿದೆ. ಅನಾಮಧೇಯ ವ್ಯಕ್ತಿಯ ವಿರುದ್ಧ ಕ್ರಮಕ್ಕಾಗಿ ಜನ ಆಗ್ರಹಿಸಿದ್ದಾರೆ.


ಉದಯವಾಹಿನಿ ಚಿತ್ರ

# ಬಸ್ ಚಾಲಕರ ಮತ್ತು ನಿರ್ವಾಹಕರ ಮಾಹಿತಿ ಕಾರ್ಯಾಗಾರ

### ಸಂಚಾರ ನಿಯಮ ಉಲ್ಲಂಘನೆಗೆ ಶಿಕ್ಷೆ ಪ್ರಮಾಣ ಹೆಚ್ಚಳ: ಡಿಸಿಪಿ ದಿನೇಶ್ ಕುಮಾರ್

• ಉದಯವಾಹಿನಿ ಮಂಗಳೂರು


ಉದಯವಾಹಿನಿ ಚಿತ್ರ

ಸಂಚಾರ ನಿಯಮ ಉಲ್ಲಂಘನೆಗೆ ಸಂಬಂಧಿಸಿ ನಿಯಮಗಳು ಮುಂದಿನ ತಿಂಗಳಿನಿಂದ ಬದಲಾಗಲಿದ್ದು, ಉಲ್ಲಂಘನೆಗೆ ಶಿಕ್ಷೆ ಮತ್ತು ದಂಡದ ಪ್ರಮಾಣ ಹೆಚ್ಚಾಗಲಿದೆ' ಎಂದು ಮಂಗಳೂರು ನಗರ ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಬಿ.ಪಿ. ದಿನೇಶ್ ಕುಮಾರ್ ತಿಳಿಸಿದರು.

ದಕ್ಷಿಣ ಕನ್ನಡ ಬಸ್ ಮಾಲೀಕರ ಸಂಘ, ಕೆನರಾ ಬಸ್ ಮಾಲೀಕರ ಸಂಘ ಹಾಗೂ ಸೇಂಟ್ ಅಲೋಶಿಯಸ್ ಪರಿಗಣಿತ ವಿಶ್ವವಿದ್ಯಾನಿಲಯದ ಆಶ್ರಯದಲ್ಲಿ ಇಲ್ಲಿ ಮಂಗಳವಾರ ಏರ್ಪಡಿಸಿದ್ದ ಬಸ್ ಚಾಲಕರ ಮತ್ತು ನಿರ್ವಾಹಕರ ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಶಿಕ್ಷೆ ಮತ್ತು ದಂಡದ ಪ್ರಮಾಣ ಹೆಚ್ಚಳ**

ಭಾರತೀಯ ದಂಡ ಸಂಹಿತೆ (ಐಪಿಸಿ) ಬದಲು ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಇದೇ ಜೂನ್ 1ರಿಂದ ಜಾರಿಗೆ ಬರಲಿದೆ. ನಿರ್ಲಕ್ಷ್ಯದ ಚಾಲನೆಗೆ ಐಪಿಸಿ ಸೆಕ್ಷನ್ 279ರ ಬದಲಾಗಿ ಬಿಎನ್‌ಎಸ್ ಕಾಯ್ದೆಯ ಸೆಕ್ಷನ್ 281 ಅನ್ವಯವಾಗಲಿದೆ. ಐಪಿಸಿ 279ರಡಿ ಹಿಂದೆ 6 ತಿಂಗಳ ಕಾರಾಗೃಹ ವಾಸ ಮತ್ತು 5ಸಾವಿರ ದಂಡಕ್ಕೆ ಅವಕಾಶ ಇತ್ತು. ಬಿಎನ್‌ಎಸ್ ಕಾಯ್ದೆಯ ಸೆಕ್ಷನ್ 281 ರ ಅಡಿ ಮೂರು ವರ್ಷ ಕಾರಾಗೃಹ ವಾಸ ಮತ್ತು 10 ಸಾವಿರ ದಂಡ ವಿಧಿಸಲು ಅವಕಾಶವಿದೆ' ಎಂದರು.

'ವಾಹನ ಅಪಘಾತದಿಂದ ಸಾಮಾನ್ಯ ಗಾಯ ಉಂಟಾದರೆ ಐಪಿಸಿ ಸೆಕ್ಷನ್ 337ರ ಅಡಿ ಶಿಕ್ಷೆ ವಿಧಿಸಲಾಗುತ್ತಿತ್ತು.

ಇನ್ನು ಬಿಎನ್‌ಎಸ್ 125 ಎ, 125 ಬಿ ಅಡಿ ಕ್ರಮವಹಿಸಲಾಗುತ್ತದೆ. ಅಪಘಾತದಿಂದ ವ್ಯಕ್ತಿಯ ಮರಣ ಸಂಭವಿಸಿದರೆ ಐಪಿಸಿ ಸೆಕ್ಷನ್ 304 ಎ ಬದಲು ಬಿಎನ್‌ಎಸ್ ಸೆಕ್ಷನ್ 106 ಅನ್ವಯವಾಗಲಿದೆ. ಈ ಹಿಂದೆ ಈ ಅಪರಾಧಕ್ಕೆ ಎರಡು ವರ್ಷ ಜೈಲು ಶಿಕ್ಷೆ ಇತ್ತು. ಅದು 5 ವರ್ಷಗಳಿಗೆ ಏರಿಕೆಯಾಗಿದೆ. ಅಪಘಾತದಿಂದ ಗಾಯಗೊಂಡವರಿಗೆ ಪ್ರಾಥಮಿಕ ಚಿಕಿತ್ಸೆ ಕೊಡಿಸದಿದ್ದರೆ ಬಿಎನ್‌ಎಸ್ ಸೆಕ್ಷನ್ 134, 134ಎ, 134ಬಿ, ಅಪಘಾತದ ಮಾಹಿತಿ ಪೊಲೀಸ್ ಠಾಣೆಗೆ ನೀಡದೇ ಇದ್ದರೆ ಅಥವಾ ಅಪಘಾತ ಮಾಡಿ ಪರಾರಿಯಾದರೆ ಬಿಎನ್‌ಎಸ್ ಸೆಕ್ಷನ್ 106 (2)ರ ಅಡಿ ಪ್ರಕರಣಗಳು ದಾಖಲಾಗಲಿವೆ' ಎಂದು ಮಾಹಿತಿ ನೀಡಿದರು.

ರಾಜೇಂದ್ರ ಭಟ್ ತರಬೇತುದಾರಬಸ್‌ಗಳ ಒಳಗಡೆ ದೇವರ ಫೋಟೊಗಳ ಬದಲು ಚಾಲಕರ ಕುಟುಂಬದವರ ಫೋಟೊಗಳನ್ನು ಇಟ್ಟರೆ ವಾಹನದ ವೇಗ ತನ್ನಷ್ಟಕ್ಕೆ ಕಡಿಮೆಯಾಗುವುದುದಿನೇಶ್ ಕುಮಾರ್, ಡಿಸಿಪಿ 'ಎಲ್ಲಾ ರಸ್ತೆಯಲ್ಲೂ ಸಿಸಿಟಿವಿ ಕ್ಯಾಮರಾ' ಕ್ರಮೇಣ ನಗರದ ಎಲ್ಲಾ ರಸ್ತೆಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸುಲಾಗುತ್ತದೆ.

**ಪರವಾನಗಿ ರದ್ದು**

**ಮದ್ಯಸೇವಿಸಿ ಚಾಲನೆ, ಚಾಲನೆ ವೇಳೆ ಮೊಬೈಲ್ ಫೋನ್ ಬಳಕೆ, ಅವಕಾಶ ಇಲ್ಲದ ಕಡೆ ಓವರ್ ಟೇಕ್ ಮಾಡುವುದು, ರೆಡ್ ಲೈಟ್ ನಿಯಮ ಉಲ್ಲಂಘನೆ, ಏಕಮುಖ ಸಂಚಾರ ಮಾರ್ಗದಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ, ರೇಸಿಂಗ್ ಪ್ರಕರಣಗಳಲ್ಲಿ ತಪ್ಪಿತಸ್ಥರ ಚಾಲನ ಪರವಾನಗಿ ರದ್ದುಪಡಿಸಲು ಕ್ರಮ ಕೈಗೊಳಲಾಗುತ್ತದೆ' ಎಂದು ತಿಳಿಸಿದರು.**

## ರಾಜಕಾರಣದ ಬಗ್ಗೆ ಏನೂ ಜ್ಞಾನವಿಲ್ಲದ ವಿಜಯೇಂದ್ರ ಒಬ್ಬ ಬಚ್ಚಾ: ಕೆ.ಎಸ್.ಈಶ್ವರಪ್ಪ

• ಉದಯವಾಹಿನಿ ಉಡುಪಿ



ರಾಜಕಾರಣದ ಬಗ್ಗೆ ಏನೂ ಜ್ಞಾನವಿಲ್ಲದ ವಿಜಯೇಂದ್ರ ಒಬ್ಬ ಬಚ್ಚಾ, ಯಡಿಯೂರಪ್ಪನವರಿಗೆ ಯಾಕಿಷ್ಟು ಪುತ್ರ ವ್ಯಾಮೋಹ. ಆರು ತಿಂಗಳು ಅಧ್ಯಕ್ಷ ಹುದ್ದೆಯನ್ನು ಖಾಲಿ ಬಿಟ್ಟು, ಹೋಗಿ ಇಂತವರಿಗೆ ಕೊಟ್ಟಿದ್ದಾರೆ ಎಂದು ಕೆ.ಎಸ್.ಈಶ್ವರಪ್ಪ ಆಕ್ರೋಶ ಹೊರಹಾಕಿದ್ದಾರೆ.

ತಮಿಳುನಾಡಿನಲ್ಲಿ ಅಣ್ಣಾಮಲೈ ಹಾಕುತ್ತಿರುವ ಪ್ರಯತ್ನ ಎಲ್ಲರಿಗೂ ಮಾದರಿ ಎಂದು ಈಶ್ವರಪ್ಪ ಹೇಳಿದ್ದಾರೆ. ಮಾಡಿ ಮಗನನ್ನು ಅಧ್ಯಕ್ಷನನ್ನಾಗಿ ಮಾಡಿಕೊಂಡು ಬಂದರು. ಸಾವಿರಾರು ಜನ ಪಕ್ಷಕ್ಕಾಗಿ ದುಡಿದವರು ಇದ್ದಾರೆ. ಅದು ಬಿಟ್ಟು, ರಾಜ್ಯದಲ್ಲಿ ಯಾರೂ ನಿಷ್ಟಾವಂತ ಕಾರ್ಯಕರ್ತರೋ, ಮುಖಂಡರೋ ಯಡಿಯೂರಪ್ಪನವರಿಗೆ ಸಿಗಲಿಲ್ಲವಾ ಎಂದು ಈಶ್ವರಪ್ಪ ಪ್ರಶ್ನಿಸಿದ್ದಾರೆ. ಲಿಂಗಾಯತರನ್ನೇ ಅಧ್ಯಕ್ಷರನ್ನಾಗಿ ಮಾಡಬೇಕು ಎಂದಿದ್ದರೆ ಬಸನಗೌಡ ಪಾಟೀಲ್ ಯತ್ನಾಳ್, ಒಕ್ಕಲಿಗರನ್ನಾಗಿದ್ದರೆ ಸಿ.ಟಿ.ರವಿ, ಹಿಂದುಳಿದ ವರ್ಗದವರನ್ನು ಮಾಡಬೇಕು ಎಂದಿದ್ದಾರೆ ನನ್ನನ್ನು ಮಾಡಬಹುದಾಗಿತ್ತಲ್ಲವೇ ಎಂದು ಈಶ್ವರಪ್ಪ ಆಕ್ರೋಶ ಹೊರಹಾಕಿದ್ದಾರೆ.

ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಇಷ್ಟು ಸೀಟ್ ಬರಲು ಯಡಿಯೂರಪ್ಪ ಕಾರಣ ಎನ್ನುವುದು ಬರೀ ಭ್ರಮೆ. ತಮಿಳುನಾಡಿನಲ್ಲಿ ಅಣ್ಣಾಮಲೈ ವರ್ಷಾನುಗಟ್ಟಲೆಯಿಂದ ಅಲ್ಲಿ ಒದ್ದಾಡುತ್ತಿದ್ದಾರೆ. ಯಾವತ್ತು ಅವರಿಗೆ ಅಪಾಯ ಕಾದಿದೆಯೋ ಗೊತ್ತಿಲ್ಲ. ಎಲ್ಲವನ್ನೂ ಎದುರಿಸಿ ಹಿಂದುತ್ವದ ಬಗ್ಗೆ ಹಗಲಿರುಳು ಮಾತಾನಾಡುತ್ತಿದ್ದಾರೆ ಎಂದು ಈಶ್ವರಪ್ಪ ಹೇಳಿದ್ದಾರೆ.

# ಫಾಸಿಲ್‌ಗೆ ವಿಚಿತ್ರ ಕಾಯಿಲೆ



'ಆವೇಶಂ' ಸಿನಿಮಾದ ಸಕ್ಸಸ್ ಮೂಲಕ ಫಹಾದ್ ಫಾಸಿಲ್ ಕೆರಿಯರ್‌ನಲ್ಲಿ ದೊಡ್ಡ ಗೆಲುವನ್ನು ಕಂಡಿದ್ದಾರೆ. ಈ ಸಿನಿಮಾದ ವಿಚಾರವಾಗಿ ಫಹಾದ್ ಸುದ್ದಿಯಲ್ಲಿದ್ದಾರೆ. ಇದರ ನಡುವೆ ಇತ್ತೀಚೆಗೆ ಫಹಾದ್ ತಮಗಿರುವ ವಿಚಿತ್ರ ಕಾಯಿಲೆ ಬಗ್ಗೆ ಸಂದರ್ಶನವೊಂದರಲ್ಲಿ ಮಾತನಾಡಿದ್ದಾರೆ. ಇತ್ತೀಚೆಗೆ ತಮ್ಮ ವೈಯಕ್ತಿಕ ಜೀವನದ ಬಗ್ಗೆ ಕುತೂಹಲಕಾರಿ ವಿಚಾರದ ಬಗ್ಗೆ ಮಾತನಾಡಿದ್ದಾರೆ. ಎಡಿಎಚ್‌ಡಿ ಅನ್ನೋದು ಈ ಕಾಯಿಲೆಯ ಹೆಸರು. ಇದು ನರಕ್ಕೆ ಸಂಬಂಧಪಟ್ಟಿದ್ದು. ಇದು ಮಿದುಳಿನ ಸಾಮರ್ಥ್ಯವನ್ನು ಕುಗ್ಗಿಸುತ್ತದೆ. ಇದು ಮಕ್ಕಳಲ್ಲಿ ಸಾಮಾನ್ಯ ಸಮಸ್ಯೆ. ಆದರೆ, ದೊಡ್ಡವರಿಗೆ ಈ ರೋಗದಿಂದ ತೊಂದರೆ ಉಂಟಾಗುತ್ತದೆ ಎಂದು ನಟ ಮಾತನಾಡಿದ್ದಾರೆ. ಚಿಕ್ಕವಯಸ್ಸಿನಲ್ಲೇ ಕಾಣಿಸಿಕೊಂಡ್ರೆ ಇದು ವಾಸಿ ಆಗಬಹುದು. ಆದ್ರೆ ಇದು 41ನೇ ವಯಸ್ಸಿನಲ್ಲಿ ಪತ್ತೆಯಾಗಿದೆ. ಈ ವಯಸ್ಸಲ್ಲಿ ಗುಣಮುಖವಾಗೋದು ಕಡಿಮೆ ಎಂದು ನಟ ಹೇಳಿದ್ದಾರೆ. ಅಂದಹಾಗೆ, 'ಪುಷ್ಪ 2'ನಲ್ಲಿ ಫಹಾದ್ ಫಾಸಿಲ್ ವಿಲನ್ ಆಗಿ ನಟಿಸಿದ್ದಾರೆ. ಇದರ ಮಲಯಾಳಂ ಹಲವು ಸಿನಿಮಾಗಳು ಅವರ ಕೈಯಲ್ಲಿವೆ.



# ಕಾಜೋಲ್ ಜೊತೆ 27 ವರ್ಷಗಳ ನಂತರ ನಟಿಸಿದ್ದಾರೆ ಪ್ರಭುದೇವ್

ನಟ, ನಿರ್ದೇಶಕ ಪ್ರಭುದೇವ್ ಮತ್ತು ಬಾಲಿವುಡ್ ನಟಿ ಕಾಜೋಲ್ ಬರೋಬ್ಬರಿ 27 ವರ್ಷಗಳ ನಂತರ ಜೊತೆಯಾಗಿ ನಟಿಸಿದ್ದಾರೆ. ಎರಡುವರೆ ದಶಕಗಳ ಹಿಂದೆ ತೆರೆಕಂಡ 'ಮಿನ್ಸರ್ ಕನವು' ಸಿನಿಮಾದಲ್ಲಿ ಈ ಜೋಡಿ ಒಂದಾಗಿ ನಟಿಸಿತ್ತು. ಆನಂತರ ಜೊತೆಯಾಗಿ ಕಾಣಿಸಿಕೊಳ್ಳುವಂಥ ಅವಕಾಶವೇ ಸಿಕ್ಕಿರಲಿಲ್ಲ. ಮಿನ್ಸರ್ ಕನವು ಸಿನಿಮಾದಲ್ಲಿ ಪ್ರೇಮಿಗಳಾಗಿ ಈ ಜೋಡಿ ಕಾಣಿಸಿಕೊಂಡಿತ್ತು. ಅದರಲ್ಲೂ ಈ ಸಿನಿಮಾದ ವೆನ್ನಿಲ್ಲವೇ ವಿನ್ನಿಲ್ಲವೇ ಸೂಪರ್ ಹಿಟ್ ಗೀತೆ. ರೆಹಮಾನ್ ಸಂಗೀತ ಸಂಯೋಜನೆಯ ಈ ಹಾಡು ಪ್ರೇಮಿಗಳ ಮನಸ್ಸು ಕದ್ದಿತ್ತು. ಈ ಬಾರಿ ಕಾಜೋಲ್ ಮತ್ತು ಪ್ರಭುದೇವ್ ಡ್ಯುಯೆಟ್ ಹಾಡುತ್ತಿಲ್ಲ. ಥ್ರಿಲ್ಲರ್ ಸಿನಿಮಾಗಾಗಿ ಒಂದಾಗಿದ್ದಾರೆ. ತೆಲುಗಿನ ನಿರ್ದೇಶಕ ಚರಣ್ ತೇಜ್ ಉಪ್ಪಲಪಟ್ಟಿ ಇದೀಗ ಬಾಲಿವುಡ್ ಗೆ ಹಾರಿದ್ದಾರೆ. ಹಿಂದಿಯಲ್ಲಿ ಅವರು ಮಹಾರಾಗ್ನಿ ಹೆಸರಿನ ಚಿತ್ರಕ್ಕೆ ನಿರ್ದೇಶನ ಮಾಡುತ್ತಿದ್ದಾರೆ. ಈ ಚಿತ್ರದಲ್ಲೇ ಪ್ರಭುದೇವ್ ಮತ್ತು ಕಾಜೋಲ್ ಜೊತೆಯಾಗಿ ಸ್ಕ್ರೀನ್ ಹಂಚಿಕೊಳ್ಳುತ್ತಿದ್ದಾರೆ. ಸಿನಿಮಾದ ಟೀಸರ್ ಈಗಾಗಲೇ ರಿಲೀಸ್ ಆಗಿದೆ.

# ದೀಪಿಕಾ ಪಡುಕೋಣೆ ನಂಬರ್ 1



ದಿನದಿಂದ ದಿನಕ್ಕೆ ಬಾಲಿವುಡ್ ನಟಿ ದೀಪಿಕಾ ಪಡುಕೋಣೆ ಅವರ ಖ್ಯಾತಿ ಹೆಚ್ಚುತ್ತಿದೆ. ಕಳೆದ 10 ವರ್ಷಗಳಲ್ಲಿ ಐಎಂಡಿಬಿ ವೆಬ್‌ಸೈಟ್‌ನಲ್ಲಿ ಅತಿ ಹೆಚ್ಚು ವೀಕ್ಷಣೆಗೆ ಒಳಪಟ್ಟ 100 ಇಂಡಿಯನ್ ಸೆಲೆಬ್ರಿಟಿಗಳ ಪಟ್ಟಿಯಲ್ಲಿ ದೀಪಿಕಾ ಪಡುಕೋಣೆ ಹೆಸರು ಅಗ್ರಸ್ಥಾನದಲ್ಲಿದೆ. ಈ ಸಾಧನೆಗಾಗಿ ಅವರಿಗೆ ಎಲ್ಲಾರೂ ಅಭಿನಂದನೆ ತಿಳಿಸುತ್ತಿದ್ದಾರೆ. ಆ ಬಗ್ಗೆ ಇಲ್ಲಿದೆ ಹೆಚ್ಚಿನ ಮಾಹಿತಿ..

ನಟಿ ದೀಪಿಕಾ ಪಡುಕೋಣೆ ಅವರು ಅನೇಕ ವರ್ಷಗಳಿಂದ ಚಿತ್ರರಂಗದಲ್ಲಿ ಆಕ್ಟೀವ್ ಆಗಿದ್ದಾರೆ. ಅವರ ನಟನೆಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಈಗ ದೀಪಿಕಾ ಪಡುಕೋಣೆ ಅವರ ಮುಡಿಗೆ ಇನ್ನೊಂದು ಗರಿ ಸೇರ್ಪಡೆ ಆಗಿದೆ. ಐಎಂಡಿಬಿ ಪ್ರಕಟಿಸಿದ ಟಾಪ್ 100 ಭಾರತೀಯ ಸೆಲೆಬ್ರಿಟಿಗಳ ಪಟ್ಟಿಯಲ್ಲಿ ದೀಪಿಕಾ ಪಡುಕೋಣೆ ಅವರಿಗೆ ನಂಬರ್ 1 ಸ್ಥಾನ ಸಿಕ್ಕಿದೆ. ಶಾರುಖ್ ಖಾನ್, ಆಮಿರ್ ಖಾನ್, ಸಲ್ಮಾನ್ ಖಾನ್ ಮುಂತಾದ ಘಟಾನುಘಟಿ ಸ್ಟಾರ್‌ಗಳನ್ನು ದೀಪಿಕಾ ಹಿಂದಿಕ್ಕಿದ್ದಾರೆ. ತಮ್ಮ ನೆಚ್ಚಿನ ನಟಿಯ ಜನಪ್ರಿಯತೆಯನ್ನು ಕಂಡು ಅಭಿಮಾನಿಗಳು ಹಿರಿಹಿರಿ ಹಿಗ್ಗಿದ್ದಾರೆ. 014ರ ಏಪ್ರಿಲ್‌ನಿಂದ 2024ರ ಏಪ್ರಿಲ್ ತನಕ ಐಎಂಡಿಬಿ ವೆಬ್‌ಸೈಟ್‌ನಲ್ಲಿ ಜನರು ಅತಿ ಹೆಚ್ಚು ವೀಕ್ಷಿಸಿದ ಸೆಲೆಬ್ರಿಟಿ ಪ್ರೊಫೈಲ್ ಆಧಾರದ ಮೇಲೆ ಈ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಸಿನಿಮಾಗಳು, ವೆಬ್ ಸಿರೀಸ್‌ಗಳು, ಕಲಾವಿದರು ಹಾಗೂ ತಂತ್ರಜ್ಞರ ಮಾಹಿತಿಯನ್ನು ಐಎಂಡಿಬಿ ವೆಬ್‌ಸೈಟ್ ಒಳಗೊಂಡಿದೆ. ದೀಪಿಕಾ ಪಡುಕೋಣೆ ಅವರ ಪುಟವನ್ನು ಅತಿ ಹೆಚ್ಚಿನ ಜನರು ವೀಕ್ಷಿಸಿದ್ದಾರೆ. ಮೊದಲ ಸ್ಥಾನದಲ್ಲಿ ದೀಪಿಕಾ ಪಡುಕೋಣೆ ಇದ್ದರೆ, ಎರಡನೇ ಸ್ಥಾನದಲ್ಲಿ ಶಾರುಖ್ ಖಾನ್ ಇದ್ದಾರೆ. ಮೂರನೇ ಸ್ಥಾನ ಐಶ್ವರ್ಯಾ ರೈ ಬಚ್ಚನ್ ಅವರಿಗೆ ಸಿಕ್ಕಿದೆ. 4ನೇ ಸ್ಥಾನದಲ್ಲಿ ಆಲಿಯಾ ಭಟ್ ಇದ್ದಾರೆ. 5ನೇ ಸ್ಥಾನವನ್ನು ಇರ್ಫಾನ್ ಖಾನ್ ಪಡೆದುಕೊಂಡಿದ್ದಾರೆ. ಆಮಿರ್ ಖಾನ್ ಅವರಿಗೆ 6ನೇ ಸ್ಥಾನವಿದೆ. 7ನೇ ಸ್ಥಾನ ಸುಶಾಂತ್ ಸಿಂಗ್ ರಜಪೂತ್ ಅವರಿಗೆ ಸಿಕ್ಕಿದೆ. 8ನೇ ಸ್ಥಾನದಲ್ಲಿ ಸಲ್ಮಾನ್ ಖಾನ್, 9ನೇ ಸ್ಥಾನದಲ್ಲಿ ಹೃತಿಕ್ ರೋಷನ್ ಹಾಗೂ 10ನೇ ಸ್ಥಾನದಲ್ಲಿ ಅಕ್ಷಯ್ ಕುಮಾರ್ ಇದ್ದಾರೆ. ಯಶ್ ಅವರು 89ನೇ ಸ್ಥಾನ ಪಡೆದಿದ್ದಾರೆ.



# ಸಮಯ ಕೂಡಿ ಬರಲಿ ಗುಡ್ ನ್ಯೂಸ್ ಕೊಟ್ಟ ರಾಧಿಕಾ

ಮದುವೆ ನಂತರ ಸಿನಿಮಾ ರಂಗದಿಂದಲೇ ದೂರವಾಗಿದ್ದಾರೆ ನಟಿ ರಾಧಿಕಾ ಪಂಡಿತ್. ಕನ್ನಡ ಸಿನಿಮಾ ರಂಗದಲ್ಲಿ ಬಹುಬೇಡಿಕೆ ಇರುವಾಗಲೇ ಮದುವೆ, ಸಂಸಾರ, ಮಕ್ಕಳು ಕಾರಣದಿಂದಾಗಿ ಮತ್ತೆ ಚಿತ್ರಗಳನ್ನು ಒಪ್ಪಿಕೊಂಡಿಲ್ಲ. ರಾಧಿಕಾ ಪಂಡಿತ್ ಮತ್ತು ಸಿನಿಮಾ ರಂಗಕ್ಕೆ ಬರಬೇಕು. ಅಭಿಮಾನಿಗಳನ್ನು ರಂಜಿಸಬೇಕು ಅನ್ನುವುದು ಅಸಂಖ್ಯಾತ ಅಭಿಮಾನಿಗಳ ಮನವಿ ಆಗಿತ್ತು.

ಹೌದು, ಮತ್ತೆ ರಾಧಿಕಾ ಅವರನ್ನು ಸ್ಕ್ರೀನ್ ಮೇಲೆ ನೋಡಬೇಕು ಎನ್ನುವುದು ಅವರ ಫ್ಯಾನ್ಸ್ ಬೇಡಿಕೆಯಾಗಿತ್ತು. ಅದಕ್ಕೆ ಈಗ ರಾಧಿಕಾ ಸ್ಪಂದಿಸಿದ್ದಾರೆ. ಅಭಿಮಾನಿಯೊಬ್ಬ ಕೇಳಲಾದ ಪ್ರಶ್ನೆಗೆ ಉತ್ತರಿಸಿರುವ ರಾಧಿಕಾ, ಸಮಯ ಕೂಡಿ ಬರಲಿ ಸಿನಿಮಾ ರಂಗಕ್ಕೆ ಮತ್ತೆ ಬರುತ್ತೇನೆ ಅಂದಿದ್ದಾರೆ.

ಯಶ್ ಮತ್ತು ರಾಧಿಕಾ ಅಪರೂಪದ ಜೋಡಿ. ಸಿನಿಮಾ ಮತ್ತು ಖಾಸಗಿ ಬದುಕಿನಲ್ಲೂ ಅಷ್ಟೇ ಪ್ರೀತಿ ವಿಶ್ವಾಸವನ್ನು ಉಳಿಸಿಕೊಂಡಿದ್ದಾರೆ. ಸತಿಪತಿಯಾದ ನಂತರ ಮತ್ತೆ ಈ ಜೋಡಿ ಜೊತೆಯಾಗಿ ನಟಿಸಬೇಕು ಎನ್ನುವುದು ಅಭಿಮಾನಿಗಳ ಆಸೆ. ಆದರೆ, ಆ ದಿನ ಯಾವತ್ತು ಬರತ್ತೋ ಕಾದು ನೋಡಬೇಕು.

ಸದ್ಯ ರಾಧಿಕಾ ಪಂಡಿತ್ ಕುಟುಂಬವನ್ನು ನಿಭಾಯಿಸ್ತಾ ಇದ್ದಾರೆ. ಯಶ್ ಸಿನಿಮಾ ಮಾಡುತ್ತಿದ್ದಾರೆ. ಯಶ್ ನಟನೆಯ ಟಾಕ್ಸಿಕ್ ಸಿನಿಮಾ ಇನ್ನಷ್ಟೇ ಚಿತ್ರೀಕರಣ ಪ್ರಾರಂಭಿಸಬೇಕು. ಈ ಸಮಯದಲ್ಲಿ ರಾಧಿಕಾ ಅಭಿಮಾನಿಗಳ ಜೊತೆ ಸೋಷಿಯಲ್ ಮೀಡಿಯಾದಲ್ಲಿ ಹಲವು ಪ್ರಶ್ನೆಗಳಿಗೆ ಉತ್ತರಿಸಿದ್ದಾರೆ.

# ಕಪಲ್ ಸಾಂಗ್‌ಗೆ ಹೆಜ್ಜೆ ಹಾಕಿದ ರಶ್ಮಿಕಾ-ಅಲ್ಲು



ಅಲ್ಲು ಅರ್ಜುನ್ ನಟನೆಯ ಬಹುನಿರೀಕ್ಷಿತ ಸಿನಿಮಾ ಪುಷ್ಪ 2 ಅಂಗಳದಿಂದ ಎರಡನೇ ಹಾಡು ಬಿಡುಗಡೆಯಾಗಿದೆ. ದಿ ಕಪಲ್ ಸಾಂಗ್‌ಗೆ ಪುಷ್ಪರಾಜ್ ಹಾಗೂ ಶ್ರೀವಲ್ಲಿ ಹೆಜ್ಜೆ ಹಾಕಿದ್ದಾರೆ. ಗಣೇಶ್ ಆಚಾರ್ಯ ನೃತ್ಯ ಸಂಯೋಜನೆಯಲ್ಲಿ ಮೂಡಿಬಂದಿರುವ ಹಾಡಿಗೆ ದೇವಿಶ್ರೀ ಪ್ರಸಾದ್ ಟ್ಯೂನ್ ಹಾಕಿದ್ದಾರೆ. ಕನ್ನಡ, ತೆಲುಗು, ತಮಿಳು, ಹಿಂದಿ, ಮಲಯಾಳಂ ಹಾಗೂ ಬೆಂಗಾಲಿ ಭಾಷೆಯಲ್ಲಿ ಸೆಕೆಂಡ್ ಸಾಂಗ್ ಬಿಡುಗಡೆಯಾಗಿದೆ. ಕನ್ನಡದ ಹಾಡಿಗೆ ವರದರಾಜು ಚಿಕ್ಕಬಳ್ಳಾಪುರ ಸಾಹಿತ್ಯ ಬರೆದಿದ್ದು, ಮೆಲೋಡಿ ಕ್ವೀನ್ ಶ್ರೇಯಾ ಘೋಷಾಲ್ ಆರು ಭಾಷೆಯ ಹಾಡಿಗೆ ಧ್ವನಿಯಾಗಿದ್ದಾರೆ.

ಪುಷ್ಪ ಸೀಕ್ವೆಲ್ ಟೀಸರ್ ಹಾಗೂ ಟೈಟಲ್ ಟ್ರ್ಯಾಕ್ ಈಗಾಗ್ಲೇ ಭಾರೀ ಸದ್ದು ಮಾಡಿದ್ದು, ಇದೀಗ ರಿಲೀಸ್ ಆಗಿರುವ ಸಾಂಗ್ ಕೂಡ ಸೆನ್ಸೇಷನ್ ಸೃಷ್ಟಿಸುವ ಎಲ್ಲಾ ಲಕ್ಷಣ ಕಾಣುತ್ತಿದೆ. ಅದ್ದೂರಿ ಸೆಟ್ ನಲ್ಲಿ ರಶ್ಮಿಕಾ ಹಾಗೂ ಅಲ್ಲು ಅರ್ಜುನ್ ಹೆಜ್ಜೆ ಹಾಕಿದ್ದಾರೆ. ಇವರಿಬ್ಬರ ಆನ್ ಸ್ಕ್ರೀನ್ ಕೆಮಿಸ್ಟ್ರೀಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಪುಷ್ಪ ಪುಷ್ಪ ಹಾಡು 100 ಮಿಲಿಯನ್ಸ್ ವೀಕ್ಷಣೆ ಕಂಡಿದೆ, ಕಪಲ್ ಸಾಂಗ್ ಕೂಡ ದಾಖಲೆ ಬರೆಯಲಿದೆ ಎಂಬ ನಿರೀಕ್ಷೆ ಚಿತ್ರತಂಡದಲ್ಲಿದೆ. ತೆಲುಗಿನಲ್ಲಿ 'ಸೂಸೆಕಿ..', ಕನ್ನಡದಲ್ಲಿ 'ನೋಡೋಕ..' ಎಂದು ಹಾಡು ಶುರುವಾಗುವ ಹಾಡು ಕೇಳುಗರಿಗೆ ಕಿಕ್ ಕೊಡುತ್ತಿದೆ.

ಈ ವರ್ಷದ ಬಹುನಿರೀಕ್ಷಿತ ಸಿನಿಮಾವಾಗಿರುವ ಪುಷ್ಪ 2 ಈ ಸಿನಿಮಾ ಆಗಸ್ಟ್ 15ರಂದು ಬಿಡುಗಡೆಯಾಗಲಿದೆ. ಈ ಚಿತ್ರಕ್ಕೆ ಸುಕುಮಾರ್ ಆಕ್ಷನ್ ಕಟ್ ಹೇಳಿದ್ದಾರೆ ಮೈತ್ರಿ ಮೂವೀ ಮೇಕರ್ಸ್ ದುಬಾರಿ ಬಜೆಟ್ ನಲ್ಲಿ ಚಿತ್ರ ನಿರ್ಮಾಣ ಮಾಡಿದೆ. ಈ ಸಿನಿಮಾದಲ್ಲಿ ಅಲ್ಲು ಅರ್ಜುನ್ ಗೆ ಜೊತೆಯಾಗಿ ಶ್ರೀವಲ್ಲಿಯಾಗಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಫಹದ್ ಫಾಸಿಲ್, ಡಾಲಿ ಧನಂಜಯ್ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ.

# ಫೋಟೋ ತೆಗೆಯಲು ಬಂದ ಅಭಿಮಾನಿ ಓಡಿಸಿದ ಬಾಬರ್ ಅಝುಂ

ಪಾಕಿಸ್ತಾನ್ ತಂಡದ ನಾಯಕ ಬಾಬರ್ ಆಝುಂ ಅಭಿಮಾನಿಗಳೊಂದಿಗೆ ಅನುಚಿತವಾಗಿ ವರ್ತಿಸಿದ ವಿಡಿಯೋವೊಂದು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಪಾಕಿಸ್ತಾನ್ ಮತ್ತು ಇಂಗ್ಲೆಂಡ್ ನಡುವೆ ಟಿ20 ಸರಣಿ ನಡೆಯುತ್ತಿದ್ದು, ಈ ಸರಣಿಯ ಬಿಡುವಿನ ವೇಳೆ ಬಾಬರ್ ಕಾರ್ಡಿಫ್ ನಗರದಲ್ಲಿ ಕಾಣಿಸಿಕೊಂಡಿದ್ದರು. ಇದೇ ವೇಳೆ ಅಭಿಮಾನಿಗಳು ಅವರೊಂದಿಗೆ ಫೋಟೋ ಕ್ಲಿಕ್ಕಿಸಿಕೊಳ್ಳಲು ಮುಂದಾಗಿದ್ದಾರೆ. ಈ ವೇಳೆ ಕೋಪಗೊಂಡ ಬಾಬರ್ ಆಝುಂ ಅಭಿಮಾನಿಗಳು ನಿಂದಿಸಿದರು. ಅಲ್ಲದೆ ಕೋಪದಿಂದಲೇ 2 ನಿಮಿಷ ಬಿಟ್ಟು ಬಿಡಿ, ಸುಮ್ಮನೆ ತೊಂದರೆ ಕೊಡ್ಬೇಡಿ ಎಂದು ಮನವಿ ಮಾಡಿದರು. ಇದಾಗ್ಯೂ ಅಭಿಮಾನಿಗಳು ಅವರತ್ತ ಬಂದಿದ್ದರಿಂದ ಕುಪಿತಗೊಂಡ ಬಾಬರ್, ನನ್ನ ಬಳಿ ಬರಬೇಡಿ, ನಾನು ಮಾತನಾಡುತ್ತಿದ್ದೇನೆ, ವಿಡಿಯೋ ತೆಗೆಯಬೇಡಿ' ಎಂದು ಸಿಟ್ಟಿಗೆದ್ದರು. ಅಲ್ಲದೆ ಭದ್ರತಾ ಸಿಬ್ಬಂದಿಗಳಿಗೆ ಎಲ್ಲಾರನ್ನೂ ದೂರ ಮಾಡುವಂತೆ ಸೂಚಿಸಿದರು. ಇದಾಗ್ಯೂ ಈ ಮಾತುಕತೆ ಬಳಿಕ ಬಾಬರ್ ಆಝುಂ ಕೆಲ ಅಭಿಮಾನಿಗಳೊಂದಿಗೆ ಫೋಟೋ ಕ್ಲಿಕ್ಕಿಸಿಕೊಂಡರು. ಆದರೆ ಆರಂಭದಲ್ಲಿ ಬಂದ ಅಭಿಮಾನಿಗಳನ್ನು ಓಡಿಸಿದ್ದರಿಂದ ಅವರು ಗುನುಗುತ್ತಾ ಸ್ಥಳದಿಂದ ತೆರಳಿದ್ದಾರೆ. ಇದೀಗ ಬಾಬರ್ ಆಝುಂ ಅವರ ದುರ್ವರ್ತನೆಯ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಅಲ್ಲದೆ ಪಾಕ್ ನಾಯಕನ ನಡೆಗೆ ಹಲವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಇಂಗ್ಲೆಂಡ್ ಮತ್ತು ಪಾಕಿಸ್ತಾನ್ ನಡುವಣ 4 ಪಂದ್ಯಗಳ ಟಿ20 ಸರಣಿಯ 2 ಪಂದ್ಯಗಳು ಮಳೆಗೆ ಅಹುತಿಯಾಗಿದೆ. ಇದಾಗ್ಯೂ ಮೊದಲ ಪಂದ್ಯದಲ್ಲಿ ಜಯ ಸಾಧಿಸಿದ ಇಂಗ್ಲೆಂಡ್ ತಂಡವು 1-0 ಅಂತರದಿಂದ ಮುನ್ನಡೆ ಸಾಧಿಸಿದೆ. ಇನ್ನು ಕೊನೆಯ ಟಿ20 ಪಂದ್ಯ ಮಾತ್ರ ಉಳಿದಿದ್ದು, ಈ ಮ್ಯಾಚ್ ಬಳಿಕ ಪಾಕಿಸ್ತಾನ್ ಮತ್ತು ಇಂಗ್ಲೆಂಡ್ ತಂಡಗಳು ಟಿ20 ವಿಶ್ವಕಪ್‌ಗಾಗಿ ಅಮೆರಿಕಕ್ಕೆ ತೆರಳಲಿದೆ. ಈ ಬಾರಿಯ ಟಿ20 ವಿಶ್ವಕಪ್‌ನ ಲೀಗ್ ನಲ್ಲೇ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಮುಖಾಮುಖಿಯಾಗಲಿದೆ. ಉಭಯ ತಂಡಗಳು ಗ್ರೂಪ್ ಎ ನಲ್ಲಿದ್ದು, ಅದರಂತೆ ಜೂನ್ 9 ರಂದು ನಡೆಯಲಿರುವ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿಗಳು ಸೆಣಸಲಿದ್ದಾರೆ.

# ಗೌತಮ್ ಗಂಭೀರ್ ಟೀಮ್ ಇಂಡಿಯಾ ಕೋಚ್

ಐಪಿಎಲ್ ಸೀಸನ್-17 ರಲ್ಲಿ ಗೌತಮ್ ಗಂಭೀರ್ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಮೆಂಟರ್ ಆಗಿ ಕಾಣಿಸಿಕೊಂಡಿದ್ದರು. ವಿಶೇಷ ಎಂದರೆ ಗಂಭೀರ್ ಅವರ ಮಾರ್ಗದರ್ಶನದಲ್ಲೇ ಈ ಬಾರಿ ಕೆಕೆಆರ್ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಚಾಂಪಿಯನ್ ಪಟ್ಟದ ಬೆನ್ನಲ್ಲೇ ಗೌತಮ್ ಗಂಭೀರ್ ಅವರನ್ನು ಟೀಮ್ ಇಂಡಿಯಾ ಕೋಚ್ ಮಾಡಲು ಬಿಸಿಸಿಐ ಮುಂದಾಗಿದೆ.

ಟೀಮ್ ಇಂಡಿಯಾದ ಮಾಜಿ ಆಟಗಾರ ಗೌತಮ್ ಗಂಭೀರ್ ಭಾರತ ತಂಡದ ಮುಖ್ಯ ಕೋಚ್ ಆಗುವುದು ಬಹುತೇಕ ಖಚಿತವಾಗಿದೆ. ಈ ಸಂಬಂಧ ಈಗಾಗಲೇ ಬಿಸಿಸಿಐ ಮತ್ತು ಗಂಭೀರ್ ನಡುವೆ ಒಪ್ಪಂದವಾಗಿದ್ದು, ಇನ್ನು ಅಧಿಕೃತ ಘೋಷಣೆಯೊಂದೇ ಬಾಕಿಯಿದೆ ಎಂದು ವರದಿಯಾಗಿದೆ.

ಪ್ರಸ್ತುತ ಕೋಚ್ ರಾಹುಲ್ ದ್ರಾವಿಡ್ ಅವರ ಕಾರ್ಯಾವಧಿ ಈ ಬಾರಿಯ ಟಿ20 ವಿಶ್ವಕಪ್‌ನೊಂದಿಗೆ ಮುಕ್ತಾಯಗೊಳ್ಳಲಿದೆ. ಇದಾದ ಬಳಿಕ ಗೌತಮ್ ಗಂಭೀರ್ ಅಧಿಕಾರ ಸ್ವೀಕರಿಸಲಿದ್ದಾರೆ. ವಿಶೇಷ ಎಂದರೆ ಗಂಭೀರ್ ಅವರ ಆಗಮನದೊಂದಿಗೆ ಭಾರತ ಟಿ20 ತಂಡದಿಂದ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಹೊರಬೀಳಲಿದ್ದಾರೆ.

ಅಂದರೆ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾಗೆ ಇದುವೇ ಕೊನೆಯ ಚಾನ್ಸ್. ಈ ಬಾರಿಯ ಟಿ20 ವಿಶ್ವಕಪ್‌ನೊಂದಿಗೆ ಇಬ್ಬರು ಆಟಗಾರರ ಟಿ20 ಅಂತಾರಾಷ್ಟ್ರೀಯ ಕೆರಿಯರ್ ಮುಗಿಯಲಿದೆ ಎಂದು ವರದಿಯಾಗಿದೆ. ಇದಾದ ಬಳಿಕ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿಯನ್ನು ಭಾರತ ಟಿ20 ತಂಡದ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ ಎಂದು ತಿಳಿದು ಬಂದಿದೆ.

ಅಷ್ಟೇ ಅಲ್ಲದೆ ಗೌತಮ್ ಗಂಭೀರ್ ಮೊದಲು ಹೊಸ ಟಿ20 ತಂಡವನ್ನು ಕೂಡ ಕಟ್ಟಲಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿದೆ. ಇಲ್ಲಿ ಯಾರು ನಾಯಕರಾಗಲಿದ್ದಾರೆ ಎಂಬುದು ಅಸ್ಪಷ್ಟ.



# ಈ ತಂಡಕ್ಕೆ ಜೆರ್ಸಿ ಬದಲಿಸುವಂತೆ ಐಸಿಸಿ ಸೂಚನೆ!

ಈ ಮೊದಲು ಉಗಾಂಡ ವಿಶ್ವಕಪ್‌ಗಾಗಿ ಸಿದ್ಧಪಡಿಸಿದ್ದ ಜರ್ಸಿಯ ತೋಳುಗಳ ಮೇಲೆ ಹಕ್ಕಿ ಗರಿಗಳನ್ನು ಚಿತ್ರಿಸಲಾಗಿತ್ತು. ಇದರಿಂದಾಗಿ ಪ್ರಾಯೋಜಕರ ಲೋಗೋ ಸರಿಯಾಗಿ ಗೋಚರಿಸುತ್ತಿರಲಿಲ್ಲ. ಆದ್ದರಿಂದ ಜೆರ್ಸಿ ವಿನ್ಯಾಸವನ್ನು ಬದಲಿಸುವಂತೆ ಐಸಿಸಿ ಸೂಚನೆ ನೀಡಿತ್ತು.

ಎಲ್ಲಾ ತಂಡಗಳು 9ನೇ ಆವೃತ್ತಿಯ ಟಿ20 ವಿಶ್ವಕಪ್‌ಗಾಗಿ ತಯಾರಿಯಲ್ಲಿ ನಿರತವಾಗಿವೆ. ಈ ಮಿನಿ ವಿಶ್ವಸಮರ ಬರುವ ಜೂನ್ 2 ರಿಂದ ಪ್ರಾರಂಭ ವಾಗಲಿದ್ದು, ಇದರಲ್ಲಿ ಒಟ್ಟು 20 ತಂಡಗಳು ಭಾಗವಹಿಸಲಿವೆ. ಎಲ್ಲಾ ತಂಡಗಳು ಈಗಾಗಲೇ ವಿಶ್ವಕಪ್ ಆಯೋಜಿತ ರಾಷ್ಟ್ರಗಳತ್ತ ಪ್ರಯಾಣ ಆರಂಭಿಸಿವೆ, ಇನ್ನು ಕೆಲವು ತಂಡಗಳು ಈಗಾಗಲೇ ಅಭ್ಯಾಸ ಪಂದ್ಯಗಳಲ್ಲಿ ನಿರತವಾಗಿವೆ. ಈ ನಡುವೆ ಉಗಾಂಡ ತಂಡಕ್ಕೆ ಸಂಕಷ್ಟ ಎದುರಾಗಿದ್ದು, ವಿಶ್ವಕಪ್ ಆರಂಭಕ್ಕೂ ಮುನ್ನವೇ ಐಸಿಸಿ ಈ ತಂಡದ ಜೆರ್ಸಿ ಮೇಲೆ ಕ್ರಮ ಕೈಗೊಂಡಿದೆ. ಅದರಂತೆ ಐಸಿಸಿ ಈ ತಂಡದ ಜೆರ್ಸಿಯನ್ನು ನಿಷೇಧಿಸಿದ್ದು, ಬೇರೊಂದು ವಿನ್ಯಾಸದ ಜೆರ್ಸಿಯನ್ನು ವಿಶ್ವಕಪ್‌ನಲ್ಲಿ ಬಳಸುವಂತೆ ಸೂಚನೆ ನೀಡಿದೆ.



ಐಸಿಸಿ ಸೂಚನೆಯಂತೆ ಇದೀಗ ಉಗಾಂಡ ಕ್ರಿಕೆಟ್ ಮಂಡಳಿ ತನ್ನ ತಂಡದ ಆಟಗಾರರಿಗಾಗಿ ಹೊಸ ಜೆರ್ಸಿಯನ್ನು ಬಿಡುಗಡೆ ಮಾಡಿದೆ.

ಜೆರ್ಸಿಯನ್ನು ನಿಷೇಧಿಸಲು ಕಾರಣವೇನು

ಜೂನ್ 2 ರಿಂದ ಐಸಿಸಿ ಟಿ20 ವಿಶ್ವಕಪ್ ಆರಂಭವಾಗಲಿದ್ದರೂ, ಅದಕ್ಕಾಗಿ ಅಭ್ಯಾಸ ಪಂದ್ಯಗಳು ಈಗಾಗಲೇ ಪ್ರಾರಂಭವಾಗಿವೆ.

ಆದರೆ ವಿಶ್ವಕಪ್‌ಗಾಗಿ ಉಗಾಂಡ ಬಿಡುಗಡೆ ಮಾಡಿದ್ದ ಜೆರ್ಸಿಯನ್ನು ಐಸಿಸಿ ನಿಷೇಧಿಸಿತ್ತು. ವಾಸ್ತವವಾಗಿ ಈ ಮೊದಲು ಉಗಾಂಡ ವಿಶ್ವಕಪ್‌ಗಾಗಿ ಸಿದ್ಧಪಡಿಸಿದ್ದ ಜರ್ಸಿಯ ತೋಳುಗಳ ಮೇಲೆ ಹಕ್ಕಿ ಗರಿಗಳನ್ನು ಚಿತ್ರಿಸಲಾಗಿತ್ತು. ಇದರಿಂದಾಗಿ ಪ್ರಾಯೋಜಕರ ಲೋಗೋ ಸರಿಯಾಗಿ ಗೋಚರಿಸುತ್ತಿರಲಿಲ್ಲ. ಆದ್ದರಿಂದ ಜೆರ್ಸಿ ವಿನ್ಯಾಸವನ್ನು ಬದಲಿಸುವಂತೆ ಐಸಿಸಿ ಸೂಚನೆ ನೀಡಿತ್ತು.

# ತಂದೆಯಾಗ್ತಿದ್ದಾರಾ ಯುಜ್ವೇಂದ್ರ ಚಹಲ್

ಟೀಮ್ ಇಂಡಿಯಾ ಸ್ಪಿನ್ನರ್ ಯುಜ್ವೇಂದ್ರ ಚಹಲ್ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರಾ ಇಂತಹದೊಂದು ಕುತೂಹಲಕ್ಕೆ ಕಾರಣವಾಗಿದ್ದು ಅವರ ಪತ್ನಿ ಧನಶ್ರೀ ವರ್ಮಾ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿರುವ ಫೋಟೋಗಳು. ಈ ಫೋಟೋಗಳು ಚಹಲ್-ಧನಶ್ರೀ ಸಖತ್ ಆಗಿಯೇ ಕಾಣಿಸಿಕೊಂಡಿದ್ದಾರೆ.

ಆದರೆ ಈ ಫೋಟೋದಲ್ಲಿ ಧನಶ್ರೀ ಕಾಣಿಸಿಕೊಂಡಿರುವುದು ಗರ್ಭವತಿಯರು ಧರಿಸುವ ಉಡುಗೆಯಲ್ಲಿ. ಈ ಫೋಟೋಗಳನ್ನು ಅವರು ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಂಡಿದ್ದರು. ಇದರ ಬೆನ್ನಲ್ಲೇ ಯುಜ್ವೇಂದ್ರ ಚಹಲ್ ತಂದೆಯಾಗುತ್ತಿದ್ದಾರಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ.



ಇದಾಗ್ಯೂ ಚಹಲ್ ಆಗಲಿ ಅಥವಾ ಧನಶ್ರೀ ವರ್ಮಾ ಆಗಲಿ ಈ ಬಗ್ಗೆ ಯಾವುದೇ ಸಿಹಿ ಸುದ್ದಿಯನ್ನು ಹಂಚಿಕೊಂಡಿಲ್ಲ.

ಆದರೆ ಒಂದು ಉಡುಗೆಯಿಂದಲೇ ಇದೀಗ ಚಹಲ್ ದಂಪತಿ ಪೋಷಕರಾಗಲಿದ್ದಾರೆ ಎಂಬ ಸುದ್ದಿಯಂತು ಹರಿದಾಡಲಾರಂಭಿಸಿದೆ.

2020 ರಲ್ಲಿ ಯುಜ್ವೇಂದ್ರ ಚಹಲ್, ನೃತ್ಯ ನಿರ್ದೇಶಕಿ ಧನಶ್ರೀ ವರ್ಮಾ ಅವರೊಂದಿಗೆ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದರು. ಇದೀಗ ಇವರ ದಾಂಪತ್ಯ ಜೀವನಕ್ಕೆ 4 ವರ್ಷಗಳು ತುಂಬಿದ್ದು, ಇದರ ಬೆನ್ನಲ್ಲೇ ಚಹಲ್ ಕಡೆಯಿಂದ ಸಿಹಿ ಸುದ್ದಿಯೊಂದನ್ನು ಕುಟುಂಬಸ್ಥರು ನಿರೀಕ್ಷಿಸುತ್ತಿದ್ದಾರೆ. ಈ ನಿರೀಕ್ಷೆಗಳ ನಡುವೆ ಇದೀಗ ಧನಶ್ರೀ ವರ್ಮಾ ಉಡುಗೆಯೊಂದಿಗೆ ಸುಳಿವು ನೀಡಿದ್ರಾ ಎಂಬುದು ಮುಂಬರುವ ದಿನಗಳಲ್ಲಿ ತಿಳಿಯಲಿದೆ.

ಸದ್ಯ ಯುಜ್ವೇಂದ್ರ ಚಹಲ್ ಟಿ20 ವಿಶ್ವಕಪ್‌ಗಾಗಿ ಅಮೆರಿಕಗೆ ತೆರಳಿದ್ದಾರೆ.

ಈ ಬಾರಿಯ ಟಿ20 ವಿಶ್ವಕಪ್‌ಗೆ ಆಯ್ಕೆ ಮಾಡಲಾದ 15 ಸದಸ್ಯರ ಬಳಗದಲ್ಲಿ ಚಹಲ್ ಪ್ರಮುಖ ಸ್ಪಿನ್ನರ್ ಆಗಿ ಆಯ್ಕೆಯಾಗಿದ್ದಾರೆ. ಹೀಗಾಗಿ ಜೂನ್ 5 ರಂದು ನಡೆಯಲಿರುವ ಐರ್ಲೆಂಡ್ ವಿರುದ್ಧದ ತನ್ನ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಚಹಲ್ ಕೂಡ ಕಣಕ್ಕಿಳಿಯಬಹುದು.

# ಹಾರ್ದಿಕ್ ನತಾಶಾ ವಿಚ್ಛೇದನ ವದಂತಿ

ಆಪ್ತ ಗೆಳೆಯನ ಹೇಳಿಕೆಯ ಪ್ರಕಾರ, ದಂಪತಿಗಳ ನಡುವೆ ಕೆಲವು ಸಮಸ್ಯೆಗಳಿವೆ. ಅಲ್ಲದೆ ನತಾಶಾ ಅವರೇ ಹಾರ್ದಿಕ್ ಪಾಂಡ್ಯರನ್ನು ತೊರೆದು ಪ್ರತ್ಯೇಕವಾಗಿ ಜೀವನ ನಡೆಸುತ್ತಿದ್ದಾರೆ. ಹೀಗಾಗಿ ಇವರಿಬ್ಬರು ಮತ್ತೆ ಒಂದಾಗುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ ಇಬ್ಬರ ನಡುವೆ ಭಿನ್ನಾಭಿಪ್ರಾಯವಿರುವುದಂತು ಸತ್ಯ ಎಂದು ಹೇಳಿದ್ದಾರೆ.



ಟೀಂ ಇಂಡಿಯಾ ಉಪನಾಯಕ ಹಾರ್ದಿಕ್ ಪಾಂಡ್ಯ ಮತ್ತು ಅವರ ಪತ್ನಿ ನತಾಶಾ ಸ್ಟಾಂಕೋವಿಕ್ ವಿಚ್ಛೇದನದ ಹಾದಿ ಹಿಡಿದಿದ್ದಾರೆ ಎಂಬ ಸುದ್ದಿ ಸಧ್ಯಕ್ಕೆ ಎಲ್ಲೆಡೆ ಹರಿದಾಡುತ್ತಿದೆ. ವರದಿ ಪ್ರಕಾರ ಶೀಘ್ರದಲ್ಲೇ ಈ ದಂಪತಿಗಳು ವಿಚ್ಛೇದನ ಪಡೆಯುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ಆದರೆ ಈ ಬಗ್ಗೆ ಇನ್ನೂ ಅಧಿಕೃತವಾಗಿ ದಂಪತಿಯಿಂದ ಯಾವುದೇ ಹೇಳಿಕೆ ಹೊರಬಿದ್ದಿಲ್ಲ.



ಈ ನಡುವೆ ಈ ಇಬ್ಬರ ಆಪ್ತಸ್ನೇಹಿತರೊಬ್ಬರು ಈ ವದಂತಿಯ ಬಗ್ಗೆ ಮಾತನಾಡಿದ್ದು, ದಂಪತಿಗಳಿಬ್ಬರು ಈಗಾಗಲೇ ಕೆಲವು ತಿಂಗಳುಗಳಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದಾರೆ ಎಂಬ ಸ್ಫೋಟಕ ಮಾಹಿತಿಯನ್ನು ಬಹಿರಂಗಪಡಿಸಿದ್ದಾರೆ ಎಂದು ವರದಿಯಾಗಿದೆ.

**ಪ್ರತ್ಯೇಕವಾಗಿ ವಾಸ:** ರಾಷ್ಟ್ರೀಯ ಮಾಧ್ಯಮ ವರದಿಗಳ ಪ್ರಕಾರ, ಹಾರ್ದಿಕ್ ಮತ್ತು ನತಾಶಾ ಕಳೆದ ಕೆಲವು ತಿಂಗಳುಗಳಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದಾರೆ ಎಂದು ಇವರಿಬ್ಬರ ಆಪ್ತ ಸ್ನೇಹಿತ ಹೇಳಿದ್ದಾರೆ ಎಂದು ವರದಿಯಾಗಿದೆ. ಆಪ್ತ ಗೆಳೆಯನ ಹೇಳಿಕೆಯ ಪ್ರಕಾರ, ದಂಪತಿಗಳ ನಡುವೆ ಕೆಲವು ಸಮಸ್ಯೆಗಳಿವೆ. ಅಲ್ಲದೆ ನತಾಶಾ ಅವರೇ ಹಾರ್ದಿಕ್ ಪಾಂಡ್ಯರನ್ನು ತೊರೆದು ಪ್ರತ್ಯೇಕವಾಗಿ ಜೀವನ ನಡೆಸುತ್ತಿದ್ದಾರೆ. ಹೀಗಾಗಿ ಇವರಿಬ್ಬರು ಮತ್ತೆ ಒಂದಾಗುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ ಇಬ್ಬರ ನಡುವೆ ಭಿನ್ನಾಭಿಪ್ರಾಯವಿರುವುದಂತು ಸತ್ಯ ಎಂದು ಹೇಳಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966